# ಬೆಳಗಾವಿ ವರದಿ

ಗಡಿ ಜಿಲ್ಲೆಯ ಧ್ವನಿ...

VOL. 04 ISSUE. 286 ₹ 4. SUNDAY, 7 JANUARY 2024 NEWSBELAGAVI@GMAIL.COM 9900332089 RNI. KARKAN/2020/79084 REG.NO G-2/PMG/KA/NK/BM/139/2024-26




## ಶ್ರೀಕಾಂತ್ ಪೂಜಾರಿ ಬಿಡುಗಡೆ

ಹುಬ್ಬಳ್ಳಿ: ಹುಬ್ಬಳ್ಳಿ ಗಲಭೆ ಪ್ರಕರಣದ ಆರೋಪಿ, ಕರಸೇವಕ ಶ್ರೀಕಾಂತ್ ಪೂಜಾರಿಗೆ ಜಾಮೀನು ಮಂಜೂರು ಆಗಿರುವ ಹಿನ್ನೆಲೆಯಲ್ಲಿ ಶನಿವಾರ ಜೈಲಿನಿಂದ ಬಿಡುಗಡೆಗೊಳಿಸಲಾಗಿದೆ.

31 ವರ್ಷಗಳ ಹಿಂದೆ ಹುಬ್ಬಳ್ಳಿಯಲ್ಲಿ ರಾಮಜನ್ಮಭೂಮಿಗಾಗಿ ನಡೆದ ಹೋರಾಟದಲ್ಲಿ ಗಲಭೆಯುಂಟಾಗಿತ್ತು.

ಈ ಪ್ರಕರಣದಲ್ಲಿ ಕೆಲ ದಿನಗಳ ಹಿಂದೆ ಬಂಧಿಸಲ್ಪಟ್ಟಿದ್ದ ಶ್ರೀಕಾಂತ್ ಪೂಜಾರಿಗೆ ಹುಬ್ಬಳ್ಳಿ 1ನೇ ಹೆಚ್ಚುವರಿ ಸೆಷನ್ಸ್ ಕೋರ್ಟ್ ನಿನ್ನೆ ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು.

ಷರತ್ತು ಪೂರೈಸಿದ ಹಿನ್ನೆಲೆಯಲ್ಲಿ ಜೈಲಿನಿಂದ ಬಿಡುಗಡೆಗೊಳಿಸಲಾಗಿದೆ.

# ಅತಿಥಿ ಉಪನ್ಯಾಸಕರಿಗೆ 5,000 ರೂ. ಗಳಿಂದ 8000 ರೂ. ಗಳಷ್ಟು ಗೌರವಧನ ಹೆಚ್ಚಳಕ್ಕೆ ಸಿಎಂ ಸಮ್ಮತಿ

ಬೆಂಗಳೂರು: ಅತಿಥಿ ಉಪನ್ಯಾಸಕ-ರಿಗೆ ಸೇವಾನುಭವದ ಆಧಾರದಲ್ಲಿ 5,000 ರೂ. ಗಳಿಂದ 8000 ರೂ. ಗಳಷ್ಟು ಗೌರವಧನ ಹೆಚ್ಚಳಕ್ಕೆ ಮುಖ್ಯಮಂತ್ರಿ ಒಪ್ಪಿಗೆ ಸೂಚಿಸಿದ್ದು ಮಾತ್ರವಲ್ಲದೆ ಇನ್ನಿತರ ಕೆಲವು ಸೌಲಭ್ಯಗಳನ್ನು ವಿಸ್ತರಿಸಿದ್ದಾರೆ.

ಅವರು ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ.ಸುಧಾಕರ್ ಮತ್ತು ಮಾಜಿ ಒಐಅ ಪುಟ್ಟಣ್ಣ ನೇತೃತ್ವದ ಅತಿಥಿ ಉಪನ್ಯಾಸಕರ ನಿಯೋಗದ ಜತೆ ಅವರ ಬೇಡಿಕೆಗಳ ಕು-ರಿತು ಚರ್ಚಿಸಿದರು.

ಅತಿಥಿ ಉಪನ್ಯಾಸಕರ ಬಗ್ಗೆ ನಮ್ಮ ಸರ್ಕಾರ ಮಾನವೀಯ ಕಾಳಜಿ ಹೊಂದಿದೆ. ಆದರೆ ಸೇವಾ ಭದ್ರತೆ ನೀಡಲು ಕಾನೂನು ತೊಡಕು ಇರುವುದ-ರಿಂದ ಸಾಧ್ಯವಾಗುವುದಿಲ್ಲ. ವಿರೋಧ ಪಕ್ಷದ ನಾಯಕನಾಗಿದ್ದಾಗಲೂ ಅತಿಥಿ ಉಪನ್ಯಾಸಕರ ಪರವಾಗಿ ತಾವು ದನಿ ಎತ್ತಿ ವೇತನ ಹೆಚ್ಚಳಕ್ಕೆ ಒತ್ತಾಯಿಸಿದ್ದನ್ನು ಸ್ಮ-ರಿಸಿಕೊಂಡ ಮುಖ್ಯಮಂತ್ರಿಗಳು, ಇದೀಗ



ಎರಡೇ ವರ್ಷದೊಳಗೆ ನಮ್ಮ ಸರ್ಕಾರ ಮತ್ತೆ ನಿಮ್ಮ ವೇತನ ಹೆಚ್ಚಳಕ್ಕೆ ಮುಂದಾಗಿದೆ.

ಸರ್ಕಾರ ಅತಿಥಿ ಉಪನ್ಯಾಸಕರ ಬೇಡಿಕೆಗಳನ್ನು ಅತ್ಯಂತ ಸಹಾನುಭೂತಿಯಿಂದ ಪರಿಗಣಿಸಿದೆ ಎಂದು ತಿಳಿಸಿದರು.

ಐದು ವರ್ಷಕ್ಕಿಂತ ಕಡಿಮೆ ಸೇವಾನುಭವ ಹೊಂದಿದವರಿಗೆ 5 ಸಾವಿರ ರೂ., 5 ರಿಂದ 10 ವರ್ಷದ ಸೇವಾನುಭವ ಹೊಂದಿದವ-ರಿಗೆ 6 ಸಾವಿರ ರೂ., 10 ರಿಂದ 15 ವರ್ಷದ ಸೇವಾನುಭವ ಹೊಂದಿದವರಿಗೆ 7 ಸಾವಿರ ರೂ. ಹಾಗೂ 15 ವರ್ಷಕ್ಕಿಂತ ಹೆಚ್ಚಿನ ಸೇವಾನುಭವ ಹೊಂದಿದವ-ರಿಗೆ 8 ಸಾವಿರ ರೂ. ಗಳಷ್ಟು ಗೌರವಧನ ಹೆಚ್ಚಳ ಮಾಡಲು ಸರ್ಕಾರ ಸಿದ್ಧವಿದೆ ಎಂದು ತಿಳಿಸಿದರು. ಇದರೊಂದಿಗೆ ಅತಿಥಿ ಉಪನ್ಯಾಸಕರ ಆರೋಗ್ಯದ ದೃಷ್ಟಿಯಿಂದ ವಾರ್ಷಿಕ 5 ಲಕ್ಷ ರೂ. ಗಳ ಆರೋಗ್ಯ ವಿಮಾ ಸೌಲಭ್ಯ ಅನುಷ್ಠಾನ, ಅತಿಥಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿ, 60 ವರ್ಷ ಮೀರಿದ ನಂತರದಲ್ಲಿ ಭದ್ರತಾ ರೂಪದಲ್ಲಿ ಗರಿಷ್ಠ 5 ಲಕ್ಷ ರೂ. ಇಡಿಗಂಡು ನೀಡುವುದು, ವಾರಕ್ಕೆ 15 ಗಂಟೆಗೂ ಹೆಚ್ಚಿನ ಕಾರ್ಯಭಾರ ಹೊಂದಿರುವ ಅತಿಥಿ ಉಪನ್ಯಾಸಕರಿಗೆ ಮಾಸಿಕ 1 ದಿನ ವೇತನ ಸಹಿತ ರಜೆ ನೀಡುವುದು ಹಾಗೂ 3 ತಿಂಗಳ ವೇತನ ಸಹಿತ ಮಾತೃತ್ವ ರಜೆ ನೀಡಲು ಮುಖ್ಯಮಂತ್ರಿಗಳು ಒಪ್ಪಿಗೆ ಸೂಚಿಸಿದರು.

ಇದರೊಂದಿಗೆ ನೇಮಕಾತಿಯಲ್ಲಿ ಅವರ ಸೇವಾನುಭವ ಆದ-'ರಿಸಿ, ವೈಟೇಜ್ ನೀಡುವುದು, ಅತಿಥಿ ಉಪನ್ಯಾಸಕರು ಕಾರ್ಯನಿರ್ವಹಿಸುತ್ತಿದ್ದ ಸ್ಥಳದಲ್ಲಿಯೇ ಕಾರ್ಯಭಾರವಿದ್ದಲ್ಲಿ, ನಂತರದ ವರ್ಷವೂ ಅಲ್ಲಿಯೇ ಅವರ ಸೇವೆಯನ್ನು ಮುಂದುವರೆಸುವುದು ಸೇರಿದಂತೆ ಕೌನ್ಸೆಲಿಂಗ್ ಪ್ರಕ್ರಿಯೆ ಸರಳೀಕರಣಗೊಳಿಸಲು ಸಹ ಸಮ್ಮತಿಸಿ, ಕೂಡಲೇ ಪ್ರತಿಭಟನೆಯನ್ನು ಹಿಂದಕ್ಕೆ ಪಡೆದು ಕರ್ತವ್ಯಕ್ಕೆ ಹಾಜರಾಗಯವಂತೆ ಪ್ರತಿಭಟನಾನಿರತ ಅತಿಥಿ ಉಪನ್ಯಾಸಕರಿಗೆ ಮನವಿ ಮಾಡಿದರು.

ಸಭೆಯಲ್ಲಿ ಉನ್ನತ ಶಿಕ್ಷಣ ಸಚಿವ ಡಾ. ಎಂ.ಸಿ. ಸುಧಾಕರ್, ಮುಖ್ಯಮಂತ್ರಿಯವರ ರಾಜಕೀಯ ಕಾರ್ಯದರ್ಶಿ ಕೆ. ಗೋವಿಂದರಾಜು, ಮಾಜಿ ವಿಧಾನ ಪರಿಷತ್ ಸದಸ್ಯ ಪುಟ್ಟಣ್ಣ, ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ ಎಲ್.ಕೆ. ಅತೀಕ್, ಉನ್ನತ ಶಿಕ್ಷಣ ಇಲಾಖೆ ಕಾರ್ಯದರ್ಶಿ ಎಂ.ಎಸ್. ಶ್ರೀಕರ್, ಉನ್ನತ ಶಿಕ್ಷಣ ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ಆಯುಕ್ತ ಜಿ. ಜಗದೀಶ್ ಮತ್ತು ಇತರ ಹಿರಿಯ ಅಧಿಕಾ-ರಿಗಳು, ಅತಿಥಿ ಉಪನ್ಯಾಸಕರ ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದರು.

## ಬಂಧಿತ ಕರವೇ ಅಧ್ಯಕ್ಷ ನಾರಾಯಣ ಗೌಡಗೆ ಜಾಮೀನು ಮಂಜೂರು



ಬೆಂಗಳೂರು: ಕನ್ನಡ ನಾಮಫಲಕಕ್ಕೆ ಆಗ್ರಹಿಸಿ ನಡೆದ ಪ್ರತಿಭಟನೆ ವೇಳೆ ಬಂಧನಕ್ಕೊಳಾಗಿಗರುವ ಕರ್ನಾಟಕ ರಕ್ಷಣಾ ವೇದಿಕೆ(ಕರವೇ) ಅಧ್ಯಕ್ಷ ನಾರಾಯಣ ಗೌಡ ಅವರಿಗೆ ಕೋರ್ಟ್ ಶನಿವಾರ ಜಾಮೀನು ಮಂಜೂರು ಮಾಡಿದೆ.


ಜಾಮೀನು ಕೋರಿ ನಾರಾಯಣ ಗೌಡ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ್ದ ದೇವನಹಳ್ಳಿಯ 5ನೇ ಹೆಚ್ಚುವರಿ ಸೆಷನ್ಸ್ ಕೋರ್ಟ, ಕಳೆದ ಮಂಗಳವಾರ ತೀಪು ಕಾಯ್ದಿ-ರಿಸಿತ್ತು. ಇಂದು ಕರವೇ ಅಧ್ಯಕ್ಷರಿಗೆ ಜಾಮೀನು ಮಂಜೂರು ಮಾಡಿ ಆದೇಶ ಹೊರಡಿಸಿದೆ.

ಡಿಸೆಂಬರ್ 27ರಂದು(ಬುಧವಾರ) ಬೆಂಗಳೂ-ರಿನಲ್ಲಿ ಕನ್ನಡ ನಾಮಫಲಕ ಅಳವಡಿಕೆಗೆ ಆಗ್ರಹಿಸಿ ನಡೆಸಲಾದ ಪ್ರತಿಭಟನೆಗೆ ಸಂಬಂಧಿಸಿದಂತೆ ಕರವೇ ಅಧ್ಯಕ್ಷ ನಾರಾಯಣಗೌಡ ಸೇ-ರಿದಂತೆ 29 ಜನರನ್ನು ಬಂಧಿಸಲಾಗಿದ್ದು, ಎಲ್ಲರನ್ನು ನ್ಯಾಯಾಂಗ ಬಂಧನಕ್ಕೆ ನೀಡಲಾಗಿದೆ.

## ಇಸ್ರೋ ಮಿಷನ್ ಯಶಸ್ವಿ: ಎಲ್-1 ಪಾಯಿಂಟ್ ಸೇರಿದ ಆದಿತ್ಯ ನೌಕೆ; ಪ್ರಧಾನಿ ಮೋದಿ ಮೆಚ್ಚುಗೆ

ನವದೆಹಲಿ: ಆದಿತ್ಯ ಯಾನ ಕೈಗೊಂಡಿದ್ದ ಇಸ್ರೋ ಮಿಷನ್ ಯಶಸ್ವಿಯಾಗಿದೆ. ಸೂರ್ಯನ ಅಧ್ಯಯನಕ್ಕಾಗಿ ಉಡ-ಾವಣೆಯಾಗಿದ್ದ ಆದಿತ್ಯ ನೌಕೆ ನಿಗದಿತ ಎಲ್-1 ಪಾಯಿಂಟ್ ತಲುಪುವಲ್ಲಿ ಯಶಸ್ವಿಯಾಗಿದೆ.

ಚಂದ್ರಯಾನ-3 ರ ಬಳಿಕ ಇಸ್ರೋ ಮಹತ್ವದ ಸಾಧನೆ ಮಾಡಿದ್ದು, ಆದಿತ್ಯ ನೌಕೆ ಸೂರ್ಯನ ಅಧ್ಯಯನ ಆರಂಭಿಸಲಿರುವ ಮೊದಲ ನೌಕೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಚಂದ್ರಯಾನ-3 ಯಶಸ್ವಿಯಾದ 10 ದಿನಗಳಲ್ಲಿ ಆದಿತ್ಯ ಎಲ್-1 ನೌಕೆಯನ್ನು ಉಡಾವಣೆ ಮಾಡಲಾಗಿತ್ತು.



ಸುದೀರ್ಘ 126 ದಿನಗಳ ಬಳಿಕ ಆದತ್ಯ ನೌಕೆ ತನ್ನ ಗಮ್ಯ ತಲುಪಿದೆ.

ಪ್ರಧಾನಿ ನರೇಂದ್ರ ಮೋದಿ ಇಸ್ರೋ ವಿಜ್ಞಾನಿಗಳ ಸಾಧನೆಗೆ ಪ್ರಧಾನಿ ಮೋದಿ ಮೆಚ್ಚುಗೆ ವ್ಯಕ್ತಪಡಿಸಿ ಅಭಿನಂದನೆ ಸಲ್ಲಿಸಿದ್ದಾರೆ.

ಭಾರತ ಮತ್ತೊಂದು ಮೈಲಿಗಲ್ಲು ಸ್ಥಾಪಿಸಿದೆ. ಭಾರತದ ಮೊದಲ ಆದಿತ್ಯ ಅಧ್ಯಯನ ನೌಕೆ ಎಲ್-1 ಪಾಯಿಂಟ್ ತಲುಪಿದೆ. ಇದು ನಮ್ಮ ವಿಜ್ಞಾನಿಗಳ ನಿರಂತರ ಸಮರ್ಪಣಾ ಮನೋಭಾವಕ್ಕೆ ಸಾಕ್ಷಿಯಾಗಿದೆ.

ಇದು ಅತ್ಯಂತ ಸಂಕೀರ್ಣ ಮತ್ತು ಸಂಕೀರ್ಣವಾದ ಬಾಹ್ಯಾಕಾಶ ಕಾರ್ಯಾಚರಣೆಗಳನ್ನು ಸಾಧ್ಯವಾಗಿಸುವುದರಲ್ಲಿ ನಮ್ಮ ವಿಜ್ಞಾನಿಗಳ ನಿರಂತರ ಸಮರ್ಪಣೆಗೆ ಸಾಕ್ಷಿಯಾಗಿದೆ.

ಮಾನವೀಯತೆಯ ಪ್ರಯೋಜನಕ್ಕಾಗಿ ನಾವು ವಿಜ್ಞಾನದ ಹೊಸ ಗಡಿಗಳನ್ನು ಬೆನ್ನಟ್ಟುವುದನ್ನು ಮುಂದುವರಿಸುತ್ತೇವೆ ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

## ಮೂವರು ಡಿಸಿಎಂಗಳ ನೇಮಕ ಗಾಳಿಸುದ್ದಿ ಅಷ್ಟೇ : ಗೃಹ ಸಚಿವ ಪರಮೇಶ್ವರ



ಬೆಂಗಳೂರು: ಮೂವರು ಉಪಮುಖ್ಯಮಂತ್ರಿಗಳ ನೇಮಕ ವಿಚಾರ ಗಾಳಿಸುದ್ದಿಯಾಗಿದ್ದು, ಈ ಕುರಿತು ಎಲ್ಲಿಯೂ ಚರ್ಚೆ ನಡೆದಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಸಿಎಂ ನೇಮಕದ ಬಗ್ಗೆ ಸಚಿವರು ವೈಯಕ್ತಿಕ ಅಭಿಪ್ರಾಯವನ್ನು ಹೇಳಿರುತ್ತಾರೆ. ರಾಜಣ್ಣ ಅವರ ಹೇಳಿಕೆಯೂ ಅಷ್ಟೆ. ಅವರ ದೃಷ್ಟಿಯಲ್ಲಿ ಒಳ್ಳೆಯದು ಇರಬಹುದು. ಹೀಗಾಗಿ ಹೇಳಿರುತ್ತಾರೆ. ಈ ಬಗ್ಗೆ ಹೈಕಮಾಂಡ್ ನಿರ್ಧರಿಸಬೇಕು. ಹೈಕಮಾಂಡ್ ನಿರ್ಧಾರವೇ ನನ್ನ ನಿರ್ಧಾರ ಎಂದರು.

## ಕಾಂಗ್ರೆಸ್‌ನಿಂದ 'ಭಾರತ್ ಜೋಡೋ ನ್ಯಾಯ್ ಯಾತ್ರೆ' ಘೋಷವಾಕ್ಯ, ಲೋಗೋ ಅನಾವರಣ



ನವದೆಹಲಿ: ಕಾಂಗ್ರೆಸ್ ಪಕ್ಷದ ನಾಯಕ ರಾಹುಲ್ ಗಾಂಧಿ ನೇತೃತ್ವದಲ್ಲಿ ಮುಂಬರುವ 'ಭಾರತ್ ಜೋಡೋ ನ್ಯಾಯ್ ಯಾತ್ರೆ'ಯ ಲೋಗೋ ಮತ್ತು ಘೋಷವಾಕ್ಯವನ್ನು ಕಾಂಗ್ರೆಸ್ ಶನಿವಾರ ಅನಾವರಣಗೊಳಿಸಿದೆ.

ದೆಹಲಿಯ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಪ್ರಧಾನ ಕಚೇರಿಯಲ್ಲಿ ನಡೆದ ಅನಾವರಣ ಕಾರ್ಯಕ್ರಮಕ್ಕೆ ಕಾಂಗ್ರೆಸ್ ರಾಷ್ಟ್ರ ಘಟಕದ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಸಂವಹನ ವಿಭಾಗದ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಮತ್ತು ಪ್ರಧಾನ ಕಾರ್ಯದರ್ಶಿ ಕೆ.ಸಿ.ವೇಣುಗೋಪಾಲ್ ಉಪಸ್ಥಿತರಿದ್ದರು.

"ನ್ಯಾಯ್ ಕಾ ಹಕ್ ಮಿಲ್ನೆ ತಕ್" (ನಮಗೆ ನ್ಯಾಯ ಸಿಗುವವರೆಗೆ) ಎಂಬುದು ಯಾತ್ರೆಯ ಘೋಷವಾಕ್ಯವಾಗಿದೆ. ರಾಹುಲ್ ಗಾಂಧಿ ನೇತೃತ್ವದಲ್ಲಿ ನಾವು ಜನವರಿ 14 ರಿಂದ ಭಾರತ್ ಜೋಡೋ ನ್ಯಾಯ್ ಯಾತ್ರೆಯನ್ನು ಪ್ರಾರಂಭಿಸುತ್ತಿದ್ದೇವೆ. 'ಭಾರತ್ ಜೋಡೋ ನ್ಯಾಯ್ ಯಾತ್ರೆ' ದೇಶದ ಜನರಿಗೆ ಆರ್ಥಿಕ, ಸಾಮಾಜಿಕ ಮತ್ತು ರಾಜಕೀಯ ನ್ಯಾಯವನ್ನು ಒದಗಿಸುವ ನಮ್ಮ ಬಲವಾದ ಹೆಜ್ಜೆಯಾಗಿದೆ ಎಂದು ಮಲ್ಲಿಕಾರ್ಜುನ ಖರ್ಗೆ ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ವಿರುದ್ಧ ವಾಗ್ದಾಳಿ ನಡೆಸಿದ ಖರ್ಗೆ, ಜನಾಂಗೀಯ ಹಿಂಸಾಚಾರ ಕಂಡ ಮಣಿಪುರಕ್ಕೆ ಅವರು ಭೇಟಿ ನೀಡಿಲ್ಲ. ಬೇರೆ ದಾರಿಯಿಲ್ಲ ಎಂದು ಜನರ ಮಧ್ಯೆ ಹೋಗುತ್ತಿದ್ದೇವೆ. ಸಂಸತ್ತಿನಲ್ಲಿ ಮಾತನಾಡಿ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ಪ್ರಯತ್ನಿಸಿದೆವು. ಆದರೆ ಸರ್ಕಾರ ನಮಗೆ ಅವಕಾಶ ನೀಡಲಿಲ್ಲ. ಇತಿಹಾಸದಲ್ಲಿ ಮೊದಲ ಬಾರಿಗೆ 146 ಸಂಸದರನ್ನು ಅಮಾನತುಗೊಳಿಸಲಾಗಿದೆ.

ಅವರು ಕನಿಷ್ಠ ಲೋಕಸಭೆಗೆ ಬಂದರು ಆದರೆ ಒಮ್ಮೆಯೂ ರಾಜ್ಯಸಭೆಯತ್ತ ಇಣುಕಿಯೂ ನೋಡಲಿಲ್ಲ ಎಂದು ಮೋದಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ರಾಹುಲ್ ಗಾಂಧಿಯವರ 'ಭಾರತ್ ಜೋಡೋ ನ್ಯಾಯ್ ಯಾತ್ರೆ' ಜನವರಿ 14 ರಂದು ಇಂಫಾಲ್‌ನಿಂದ ಪ್ರಾರಂಭವಾಗಲಿದೆ. 6,713 ಕಿಲೋಮೀಟರ್‌ಗಳನ್ನು ಕ್ರಮಿಸಲಿದೆ. 100 ಲೋಕಸಭಾ ಕ್ಷೇತ್ರಗಳು ಮತ್ತು 337 ವಿಧಾನಸಭಾ ಕ್ಷೇತ್ರಗಳನ್ನು ವ್ಯಾಪಿಸಿ 110 ಜಿಲ್ಲೆಗಳನ್ನು ಒಳಗೊಂಡಿದೆ. ಮಾರ್ಚ್ 20 ಅಥವಾ 21 ರಂದು ಮುಂಬೈನಲ್ಲಿ ಮೆರವಣಿಗೆ ಮುಕ್ತಾಯಗೊಳ್ಳಲಿದೆ.

# ಸೋಲಿಗೆ ಕಾರಣರಾದವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಸಿಡಿದೇಳುವೆ: ವಿ. ಸೋಮಣ್ಣ

ಬೆಂಗಳೂರು: ನನ್ನ ಸೋಲಿಗೆ ಯಾರು ಯಾರು ಕಾರಣ ಅಂತ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವ-ರಿಗೆ ಗೊತ್ತಿದೆ. ನನ್ನ ಸೋಲಿಗೆ ಕಾರಣ-ರಾದವರ ವಿರುದ್ಧ ಕೂಡಲೇ ಕ್ರಮ ಕೈಗೊಳ್ಳಬೇಕು. ಕ್ರಮ ಕೈಗೊಳ್ಳದಿದ್ದರೆ ನಾನು ಸಿಡಿದೇಳಬೇಕಾಗುತ್ತದೆ ಎಂದು ಮಾಜಿ ಸಚಿವ ವಿ. ಸೋಮಣ್ಣ ಎಚ್ಚರಿಕೆ ನೀಡಿದರು.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು ಸರಿಪಡಿಸುವುದು, ಬಿಡುವುದು ಅವರಿಗೆ ಸೇರಿದ್ದು ಎಂದರು. ಲೋಕಸಭೆ ಚುನಾವಣೆ ಇರುವುದರಿಂದ ಕೆಲ ವಿಚಾರ ಮಾತನಾಡಲ್ಲ. ನಮ್ಮಂಥವರಿಗೆ ಏನು ಅನಾನುಕೂಲ ಎಂಬ ಮಾಹಿತಿ ಅವರಿಗೆ ಇದೆ. ಅವರಿಗೇ ಅಂಟಿ-ಕೊಂಡು ಹೋಗ್ತೇನೆ ಅಂದರೇ ಬೇರೆ ಮಾತಾಡಬೇಕಾಗುತ್ತೆ. ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಇನ್ನೂ ಯುವಕ. ನೀನು ಬೆಳೆಯಬೇಕು, ರಾಜ್ಯದಲ್ಲಿ ದೊಡ್ಡ ನಾಯಕರು ಅಂತ ಇದ್ದಾರೆ. ಸೋಲಿಗೆ ಕಾರಣ-ರಾದ ಮನೆಹಾಳರನ್ನು ಜೊತೆಯಲ್ಲಿ ಇಟ್ಟುಕೊಳ್ಳಬಾರದು ಎಂದು ಕಿವಿ ಮಾತು ಹೇಳಿದರು.

ನಮ್ಮಂತಹವರ ಮೇಲೆ ಗದಾಪ್ರಹಾರ ಆದರೆ ಪರಿಣಾಮ ಆಗುತ್ತದೆ. ಎಷ್ಟರ




ಮಟ್ಟಿಗೆ ಪರಿಣಾಮ ಆಗುತ್ತದೆ ಅಂತಾ ಚಿಂತನೆ ಮಾಡಬೇಕು. ವಿಜಯೇಂದ್ರ ಅವರಿಗೆ ಒಳ್ಳೆಯದಾಗಲಿ. ಹಿಂದಿನದ್ದೇ ನಡೆಸಿಕೊಂಡು ಹೋಗುತ್ತೇನೆ ಎಂಬುದನ್ನು ಬಿಡಬೇಕು. ಚಾಮರಾಜನಗರ ಜಿಲ್ಲೆಗೆ ಬಿ.ವೈ.ವಿ-ಜಯೇಂದ್ರ ಭೇಟಿ ನೀಡುತ್ತಿರುವ ವಿಚಾರವಾಗಿ ಮಾತನಾಡಿದ ಅವರು ವಿಜಯೇಂದ್ರ ರಾಜ್ಯಾಧ್ಯಕ್ಷರು, ಎಲ್ಲಿಗೆ ಬೇಕಾದರೂ ಹೋಗಲಿ ಎಂದು ಮಾತನಾಡಿದರು.

ನನ್ನ ಮತ್ತು ಅಶೋಕ್ ಮಧ್ಯೆ ಸಣ್ಣ ಭಿನ್ನಾಭಿಪ್ರಾಯ ಸಹ ಇಲ್ಲ: ನನ್ನ ಮತ್ತು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಮಧ್ಯೆ ಸಣ್ಣ ಭಿನ್ನಾಭಿಪ್ರಾಯ ಸಹ ಇಲ್ಲ. ವಿಪಕ್ಷ ನಾಯಕ ಅಶೋಕ್ ನನ್ನ ಭೇಟಿಗೆ ಪ್ರಯತ್ನ ಮಾಡಿದ್ದರು. ನಾನು ಮತ್ತು ಅಶೋಕ್ ಸ್ನೇಹಿತರು. ಅಶೋಕ್ ಮೊದಲು ಶಾಸಕನಾದಾಗ ನಾನು ಮಂತ್ರಿಯಾಗಿದ್ದೆ. ವಿಪಕ್ಷ ನಾಯಕ ಅಶೋಕ್ ನನಗಿಂತ 14 ವರ್ಷ ಚಿಕ್ಕವರು. ಅಶೋಕ್ ಮೇಲೆ ನನಗೆ ಪ್ರೀತಿ, ವಿಶ್ವಾಸ ಇದೆ. ನಮ್ಮವ-ರಿಂದಲೇ ನೋವಾದಾಗ ನನ್ನ ಭಾವನೆ ಹೇಳಿಕೊಂಡಿದ್ದೇನೆ. ಸಂಕ್ರಾಂತಿ ಬಳಿಕ ಎಲ್ಲವೂ ಸುಖಾಂತ್ಯವಾಗಬೇಕು ಎಂದರು.

ಇನ್ನು ವಿ. ಸೋಮಣ್ಣ ಜನವರಿ 8ರಂದು ನವದೆಹಲಿಗೆ ತೆರಳಲಿದ್ದಾರೆ. 12ರ ವರೆಗೂ ದೆಹಲಿಯಲ್ಲೇ ವಾಸ್ತವ್ಯ ಹೂಡಲಿದ್ದಾರೆ. ಈ ಅವಧಿಯಲ್ಲಿ ವ-ರಿಷ್ಠರಿಗೆ ಭೇಟಿಯಾಗಲಿದ್ದಾರೆ.

## ಗೋಳಗುಮ್ಮಟ ಮ್ಯೂಜಿಯಂಗೆ ಹುಸಿ ಬಾಂಬ್ ಬೆದರಿಕೆ

ವಿಜಯಪುರ: ಇಲ್ಲಿನ ಐತಿಹಾಸಿಕ ಸ್ಮಾರಕ ಗೋಳ ಗುಮ್ಮಟದ ಮುಂಭಾಗದಲ್ಲಿ ಇರುವ ವಸ್ತುಸಂಗ್ರಹಾಲಯದ ಮೇಲ್ ಐಡಿಗೆ ಬಾಂಬ್ ಬೆದ-ರಿಕೆ ಸಂದೇಶ ಬಂದಿದ್ದು, ಸ್ಥಳಕ್ಕೆ ಹಿರಿಯ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಈ ಕುರಿತು ಪ್ರತಿಕ್ರಿಯಿಸಿರುವ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಋಷಿಕೇಶ ಸೋನಾವಣೆ, 'ಯಾರೂ ಆತಂಕ ಪಡುವ ಅಗತ್ಯ ಇಲ್ಲ. ಇದೊಂದು ಹುಸಿ ಬಾಂಬ್ ಬೆದರಿಕೆ ಸಂದೇಶವಾಗಿದೆ. ಶುಕ್ರವಾರ ರಾತ್ರಿಯೇ ಬೆದರಿಕೆ ಸಂದೇಶ ಬಂದಿದ್ದು, ಸ್ಥಳಕ್ಕೆ ಬಾಂಬ್ ನಿಷ್ಕ್ರಿಯದಳ, ಡಾಗ್ ಸ್ಕ್ವಾಡ್ ಭೇಟಿ ನೀಡಿ ಪರಿಶೀಲಿಸಿದೆ. ಅಗತ್ಯ ಭದ್ರತೆಯನ್ನು ಕೈಗೊಳ್ಳಲಾಗಿದೆ' ಎಂದು ತಿಳಿಸಿದರು.

ಭಾರತದಾದ್ಯಂತ ಇರುವ ವಿವಿಧ ವಸ್ತುಸಂಗ್ರಹಾಲಯಗಳ ಮೇಲ್ ಐಡಿಗಳಿಗೆ ಒಂದೇ ಇ ಮೇಲ್‌ನಿಂದ ಬಾಂಬ್ ಬೆದರಿಕೆ ಸಂದೇಶ ಕಳುಹಿಸಲಾಗಿತ್ತು. ವಿಜಯಪುರ ಗೋಳಗುಮ್ಮಟ ಮ್ಯೂಸಿಯಂನ ಇ-ಮೇಲ್ ಐಡಿಗೂ ಬಂದಿದೆ. ಬೆದರಿಕೆ ಇ-ಮೇಲ್ ಅನ್ನು ಪರಿಶೀಲಿಸಲಾಗಿದ್ದು, ಇದು ಹುಸಿ ಬೆದರಿಕೆ ಸಂದೇಶ ಎಂಬುದು ಖಚಿತವಾಗಿದೆ ಎಂದರು. ಹುಸಿ ಬೆದ-ರಿಕೆ ಸಂದೇಶದ ಹಿನ್ನೆಲೆಯಲ್ಲಿ ಈಗಾಗಲೇ ಒಂದು ಎನ್‌ಸಿ ದಾಖಲಿಸಲಾಗಿದೆ ಮತ್ತು ಕೋರ್ಟ್ ಅನುಮತಿಯ ನಂತರ ಎಫ್‌ಐಆರ್ ದಾಖಲಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

## ವಸತಿ ರಹಿತರ ಆಶ್ರಯ ಕೇಂದ್ರಗಳ ಸಮರ್ಪಕ ನಿರ್ವಹಣೆಗೆ ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ: ನಗರದಲ್ಲಿರುವ ಐದು ವಸತಿರಹಿತರ ಆಶ್ರಯ ಕೇಂದ್ರಗಳಲ್ಲಿ ಸ್ವಚ್ಛತೆಯನ್ನು ಕಾಪಾಡುವುದರ ಜತೆಗೆ ಊಟ ಹಾಗೂ ಇತರೆ ಮೂಲಸೌಕರ್ಯಗಳನ್ನು ಒದಗಿಸುವ ಮೂಲಕ ಸಮರ್ಪಕವಾಗಿ ನಿರ್ವಹಿಸಬೇಕು. ಅಗತ್ಯವಿದ್ದವರಿಗೆ ಇದರ ಪ್ರಯೋಜನ ದೊರಕಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಾಗಿ ಸೂಚನೆ ನೀಡಿದರು.

ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ(ಜ.6) ನಡೆದ ಡೇ ನಲ್ಮ್ ಯೋಜನೆಯ ವಸತಿರಹಿತರ ಆಶ್ರಯ ಕೇಂದ್ರಗಳ ನಗರ ಮಟ್ಟದ ಅಧಿಕಾರಯುಕ್ತ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ವಸತಿ ರಹಿತರಿಗೆ ತಕ್ಷಣ-ಕ್ಕೆ ಅನುಕೂಲ ವಾಗುವಂತೆ ನಗರದಲ್ಲಿರುವ ಐದು ಕೇಂದ್ರಗಳ ವಿಳಾಸ, ದೂರವಾಣಿ ಸಂಖ್ಯೆ, ಲಭ್ಯವಿರುವ ವಸತಿ ಸೌಲಭ್ಯ ಸೇರಿದಂತೆ ಸಂಪೂರ್ಣ ಮಾಹಿತಿಯನ್ನು ಸಾರ್ವಜನಿಕ-ರಿಗೆ ಲಭ್ಯವಾಗುವಂತೆ ಪ್ರಚುರಪಡಿಸಬೇಕು.

ಇದರಿಂದ ವಸತಿರಹಿತರಿಗೆ ತುರ್ತಾಗಿ ವಸತಿ ಸೌಲಭ್ಯವನ್ನು ಒದಗಿಸಲು ಅನುಕೂಲವಾಗುತ್ತದೆ.

ಐದು ಕೇಂದ್ರಗಳಲ್ಲಿರುವ ವಸತಿ ಸಾಮರ್ಥ್ಯ, ಆಯಾ ದಿನ ಆಶ್ರಯ ಪಡೆದಿರುವ ಜನರ ಮಾಹಿತಿಯ ರಿಜಿಸ್ಟರ್ ನಿರ್ವಹಿಸಬೇಕು. ಇದಲ್ಲದೇ ಪ್ರತಿ ಕೇಂದ್ರಗಳಲ್ಲಿ ಸಿಸಿಟಿವಿ ಅಳವಡಿಸಬೇಕು; ಡೇ ನಲ್ಮ್ ಮಾರ್ಗಸೂಚಿ ಪ್ರಕಾರ ಊಟವನ್ನು ನೀಡಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ವಸತಿರಹಿತರನ್ನು ಕರೆತರಲು ಅನುಕೂಲ ವಾಗುವಂತೆ ಮಹಾನಗರ ಪಾಲಿಕೆ ಅಥ-'ವಾ ಸಿಎಸ್ ಆರ್ ಫಂಡ್ ನಲ್ಲಿ ವಾಹನ ಖರೀದಿಸಬಹುದು ಎಂದು ಹೇಳಿದರು.

**ಸ್ವಂತ ಕಟ್ಟಡ ನಿರ್ಮಾಣಕ್ಕೆ ಕ್ರಮ:** ಐದು ಕೇಂದ್ರಗಳ ಪೈಕಿ ಒಂದು ಸ್ವಂತ ಕಟ್ಟಡದಲ್ಲಿ ರುವುದರಿಂದ ಉಳಿದ ನಾಲ್ಕು ಕೇಂದ್ರಗಳಿಗೆ ಸ್ಥಳ ನಿಗದಿಪಡಿಸಿದರೆ ಡೇ ನಲ್ಮ್ ಅನುದಾನದಲ್ಲಿ ಸ್ವಂತ ಕಟ್ಟಡ ನಿರ್ಮಿಸಬಹುದು ಎಂದು ಪಾಲಿಕೆ ಆಯುಕ್ತ ಅಶೋಕ ದುಡಗುಂಟಿ ಹೇಳಿದರು.

ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು, ಆದಷ್ಟು ಬೇಗನೇ ವಸತಿ ರಹಿತರ ಆಶ್ರಯ ಕೇಂದ್ರಗಳ ಸ್ವಂತ ಕಟ್ಟಡ ಹೊಂದಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಮಹಾನಗರ ಪಾಲಿಕೆ ಆಯುಕ್ತರಾದ ಅಶೋಕ ದುಡಗುಂಟಿ ಅವರು, ವಸತಿರಹಿತರ ಆಶ್ರಯ ಕೇಂದ್ರಗಳ ನಿರ್ವಹಣೆಯ ಕುರಿತು ಸಭೆಯಲ್ಲಿ ವಿವರಿಸಿದರು.

ಉಪ ವಿಭಾಗಾಧಿಕಾರಿ ಶ್ರವಣ ನಾಯಕ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಉದಯಕುಮಾರ್ ತಳವಾರ ಸೇ-ರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತ-ರಿದ್ದರು.

# ಅಸಂಘಟಿತ ವಲಯದ ಕಾರ್ಮಿಕರಿಗೆ ಗ್ರಾಚ್ಯುಟಿ ಸೇರಿ ಹಲವು ನಿರ್ಧಾರಗಳಿಗೆ ಸಚಿವ ಸಂಪುಟ ಒಪ್ಪಿಗೆ

ಬೆಂಗಳೂರು: ಅಸಂಘಟಿತ ವಲಯದ ಕಾರ್ಮಿಕರು ಪ್ರಯೋಜನಗಳನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಗ್ರಾಚ್ಯುಟಿ ಪಾವತಿ ಕಾಯ್ದೆ 2024ನ್ನು ಜಾರಿಗೆ ತರುವ ಕಾರ್ಮಿಕ ಇಲಾಖೆಯ ಪ್ರಸ್ತಾವನೆಗೆ ರಾಜ್ಯ ಸಚಿವ ಸಂಪುಟ ಅನುಮೋದನೆ ನೀಡಿದೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಕಾನೂನು ಸಚಿವ ಹೆಚ್. ಕೆ.ಪಾಟೀಲ್, ಕಾಯ್ದೆಯ ಅನುಷ್ಠಾನದಿಂದ ಕಾರ್ಖಾನೆಗಳು, ಅಂಗಡಿಗಳು ಮತ್ತು ಇತರ ವಾಣಿಜ್ಯ ಮತ್ತು ಅಸಂಘಟಿತ ವಲಯಗಳಲ್ಲಿ ಕೆಲಸ ಮಾಡುವವರಿಗೆ ಸಹಾಯವಾಗುತ್ತದೆ. ಸಂಘಟಿತ ವಲಯದಲ್ಲಿನ ಪ್ರಾವಿಡೆಂಟ್ ಫಂಡ್ ಸೌಲಭ್ಯದ ರೀತಿಯಲ್ಲಿ ಅವರು ವಲಯದ ಯಾವುದೇ ಸಂಸ್ಥೆಯಲ್ಲಿ ಸೇವೆ ಸಲ್ಲಿಸಿದ ವರ್ಷಗಳ ಗ್ರಾಚ್ಯುಟಿಯನ್ನು ಪಡೆಯುತ್ತಾರೆ.

2023-24ಕ್ಕೆ ಗೆಜೆಟೆಡ್ ಪ್ರೊಬೇಷನರಿ ಅಧಿಕಾರಿಗಳ ನೇಮಕಾತಿಗೆ ಗರಿಷ್ಠ ವಯೋಮಿತಿಯನ್ನು ಹೆಚ್ಚಿಸಲು ಸಂಪುಟ ನಿರ್ಧರಿಸಿದೆ. ಸಾಮಾನ್ಯ ವರ್ಗದವರಿಗೆ 35 ರಿಂದ 38, ಒಬಿಸಿ ವರ್ಗಗಳಿಗೆ 38 ರಿಂದ 41 ಮತ್ತು ಎಸ್‌ಸಿ ಮತ್ತು ಎಸ್‌ಟಿ ಸಮುದಾಯಗಳಿಗೆ 40 ರಿಂದ 43 ಕ್ಕೆ ಗರಿಷ್ಠ ವಯೋಮಿತಿಯನ್ನು ಸಡಿಲಿಸಲಾಗಿದೆ.



ಸಂಪುಟದಲ್ಲಿ ತೆಗೆದುಕೊಂಡ ಇನ್ನು ಕೆಲವು ನಿರ್ಧಾರಗಳು: ವನ್ಯಜೀವಿ ಟ್ರೋಫಿಗಳು ಮತ್ತು ವಸ್ತುಗಳನ್ನು ಒಪ್ಪಿಸಲು ಮೂರು ತಿಂಗಳು ಗಡುವು ವಿಸ್ತರಣೆ, ವ್ಯಾಪಾರ ಸಂಸ್ಥೆಗಳ ನಾಮಫಲಕಗಳಲ್ಲಿ ಕನ್ನಡದಲ್ಲಿ ಶೇಕಡಾವಾರು ಪ್ರಮಾಣವನ್ನು 50 ರಿಂದ 60 ಕ್ಕೆ ಹೆಚ್ಚಿಸುವುದು, ಬಿಬಿಎಂಪಿ ವ್ಯಾಪ್ತಿಯಲ್ಲಿ ರಸ್ತೆಗಳನ್ನು ವೈಟ್ ಟಾಪಿಂಗ್ ಮಾಡಲು 800 ಕೋಟಿ ರೂಪಾಯಿ, ಬೆಂಗಳೂರಿನ ಯುವಿಸಿಇಯಲ್ಲಿ ಮೂಲಸೌಕರ್ಯಗಳನ್ನು ಮೇಲ್ದರ್ಜೆಗೇರಿಸಲು 25 ಕೋಟಿ ರೂಪಾಯಿ, ಹುಬ್ಬಳ್ಳಿಯ ಬಿವಿಬಿ ಇಂಜಿನಿಯರಿಂಗ್ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ವೇತನಕ್ಕಾಗಿ 2024-25ರವರೆಗೆ ಅನುದಾನವನ್ನು ಮುಂದುವರಿಸಲು, 5,491 ಪ್ರಾಥಮಿಕ ಕೃಷಿಗೆ ಡೇಟಾ ಡಿಜಿಟಲೀಕರಣ ಮತ್ತು ವಲಸೆ ಬೆಂಬಲಕ್ಕಾಗಿ 71.38 ಕೋರ್ ಕ್ರೆಡಿಟ್ ಸೊಸೈಟಿ (PACS), ಸಹಾಯಕ ನೋಂದಣಾಧಿಕಾರಿಗಳಿಗೆ ಉಪನೋಂದಣಾಧಿಕಾರಿಗಳಾಗಿ ಬಡ್ತಿ ನೀಡಲು ಸೇವಾ ವರ್ಷವನ್ನು 5 ರಿಂದ 3 ಕ್ಕೆ ಇಳಿಸುವುದು, ಬಿಸಿ ಇಲಾಖೆ ನಡೆಸುವ ವಸತಿ ನಿಲಯಗಳಿಗೆ ವಸ್ತುಗಳ ಖರೀದಿಗೆ ಟೆಂಡರ್ ಆಹ್ವಾನಿಸುವ ಅಧಿಕಾರವನ್ನು ಜಿಲ್ಲಾಧಿಕಾ-ರಿಗಳಿಗೆ ವಹಿಸುವುದು.

ಮೈಸೂರಿನ ಚಾಮುಂಡೇಶ್ವರಿ ದೇವಸ್ಥಾನಕ್ಕೆ 45.70 ಕೋಟಿ ರೂಪಾಯಿ ನೀಡುವುದು ಇತ್ಯಾದಿ ನಿರ್ಧಾರಗಳನ್ನು ತೆಗೆದುಕೊಳ್ಳಲಾಯಿತು.

581.47 ಕೋಟಿ ರೂಪಾಯಿ ಮೊತ್ತದಲ್ಲಿ ಬಿಎಂಟಿಸಿ, ಕೆಎಸ್ ಆರ್ ಟಿಸಿ, ಎನ್ ಡಬ್ಲ್ಯುಕೆಆರ್ ಟಿಸಿ ಮತ್ತು ಕೆಕೆಆರ್ ಟಿಸಿ ಮೇಲಿನ ಮೋಟಾರು ವಾಹನ ತೆರಿಗೆ ವಿನಾಯಿತಿ ನೀಡಲು ಸಂಪುಟ ನಿರ್ಧ-ರಿಸಿದೆ. ಬೆಂಗಳೂರಿನಲ್ಲಿ ಗ್ರಾಸ್ ಕಾಸ್ಟ್ ಕಾಂಟ್ರಾಕ್ಟ್ (GCC) ಮೂಲಕ 10 ಡಬಲ್ ಡೆಕ್ಕರ್ ಎಲೆಕ್ಟ್ರಿಕ್ ಬಸ್‌ಗಳನ್ನು ಓಡಿಸುವ ಪ್ರಸ್ತಾವನೆಯನ್ನು ಸಂಪುಟ ಅನುಮೋದಿಸಿದೆ.

ಬಿನೆಟ್ ದರ್ಜೆಯೊಂದಿಗೆ ಸಿಎಂ ಸಲಹೆಗಾರರಾಗಿ ನೇಮಕಗೊಂಡಿರುವ ಶಾಸಕರನ್ನು ಲಾಭದಾಯಕ ಹುದ್ದೆಯೆಂದು ಅನರ್ಹಗೊಳಿಸುವ ಬೆದರಿಕೆಯಿಂದ ರಕ್ಷಿಸಲು, ಸರ್ಕಾರದ ಆದೇಶದ ಮೂಲಕ ಕರ್ನಾಟಕ ಶಾಸಕಾಂಗ (ಅನರ್ಹತೆ (ತಿದ್ದುಪಡಿ) ಮಸೂದೆ, 2024 ನ್ನು ಜಾರಿಗೆ ತರಲು ಸಂಪುಟ ನಿರ್ಧರಿಸಿದೆ.

# ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ವಾರ್ಷಿಕ 45,000 ಕೋಟಿ ರೂ. ಕಳೆದುಕೊಳ್ಳುತ್ತಿದೆ: ಸಚಿವ ಕೃಷ್ಣ ಬೈರೇಗೌಡ

ಬೆಂಗಳೂರು: ಜಿಎಸ್‌ಟಿ ಸಂಗ್ರಹದಲ್ಲಿ ಕರ್ನಾಟಕ ವಾರ್ಷಿಕ 45,000 ಕೋಟಿ ರೂಪಾಯಿಗಳನ್ನು ಕಳೆದುಕೊಳ್ಳುತ್ತಿದ್ದು, ಈ ಹಿನ್ನೆಲೆಯಲ್ಲಿ ಹಣಕಾಸು ಆಯೋಗದ ಮುಂದೆ ನಮ್ಮ ವಾದ ಏನು ಇರಬೇಕು ಎಂಬುದರ ಬಗ್ಗೆ ಸರಕಾರಕ್ಕೆ ಸಲಹೆ ನೀಡಲು ಸಮಿತಿಯನ್ನು ರಚನೆ ಮಾಡಲು ರಾಜ್ಯ ಸಚಿವ ಸಂಪುಟ ಶುಕ್ರವಾರ ನಿರ್ಧರಿಸಿದೆ.

ವಿಧಾನಸೌಧದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯ ನಂತರ ಸುದ್ದಿಗೋಷ್ಠಿಯನ್ನದ್ದೇಶಿಸಿ ಮಾತನಾಡಿದ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು, ಸಲಹಾ ಸಮಿತಿಯಲ್ಲಿ ಹಣಕಾಸು ತಜ್ಞರಾದ ಗೋವಿಂದ ರಾವ್, ಶ್ರೀನಿವಾಸ್ ಮೂರ್ತಿ ಮತ್ತು ನರೇಂದ್ರ ಪಾಣಿ ಸೇರಿ ತಜ್ಞರ ಸಲಹಾ ಸಮಿತಿ ಮಾಡುತ್ತೇವೆ.

ಹಣಕಾಸು ಆಯೋಗದ ಮುಂದೆ ಏನು ವಾದ ಮಾಡಬೇಕು ಎಂಬ ಬಗ್ಗೆ ಸಲಹಾ ಸಮಿತಿ ಸರ್ಕಾರಕ್ಕೆ ಶಿಫಾರಸು ಮಾಡುತ್ತದೆ" ಎಂದು ಹೇಳಿದರು.

ಡೀ ದೇಶದಲ್ಲಿ ಅತೀ ಹೆಚ್ಚು ತೆರಿಗೆ ಪಾವತಿ ಮಾಡುವ ಎರಡನೇ ರಾಜ್ಯ ನಮ್ಮದು. ಸುಮಾರು 4 ಲಕ್ಷ ಕೋಟಿ ರೂಪಾಯಿ ತೆ–ರಿಗೆ ರೂಪದಲ್ಲಿ ನಮ್ಮ ರಾಜ್ಯದಿಂದ ಕೇಂದ್ರ ಸರಕಾರಕ್ಕೆ ಸಲ್ಲಿಕೆಯಾಗುತ್ತಿದೆ.

ಆದರೆ, ಅದರಲ್ಲಿ ರಾಜ್ಯಕ್ಕೆ 60–70 ಸಾವಿರ ಕೋಟಿ ಮಾತ್ರ ನಮಗೆ ವಾಪಸ್ ಬರುತ್ತಿದೆ.

ಐಟಿ, ಬಿಟಿ ವಲಯದಿಂದ ವರ್ಷಕ್ಕೆ 3.50 ಲಕ್ಷ ಕೋಟಿ ರೂ.ಗಳಷ್ಟು ನಮ್ಮ ರಾಜ್ಯದಿಂದ ರಫ್ತಾಗುತ್ತಿದೆ.

ಆದರೆ, ಇಷ್ಟು ದೊಡ್ಡ ಮಟ್ಟದಲ್ಲಿ ನಾವು ದೇಶದ ಅಭಿವೃದ್ಧಿ ಕೊಡುಗೆ ನೀಡುತ್ತಿದ್ದರೂ ನಮಗೆ ನ್ಯಾಯಯುತವಾದ ಪಾಲು ಸಿಗುತ್ತಿಲ್ಲ ಎಂದು ಹೇಳಿದರು.

14ನೆ ಹಣಕಾಸು ಆಯೋಗದ ಅವಧಿಯಲ್ಲಿ ಕೇಂದ್ರ ಸರಕಾರ ರಾಜ್ಯಕ್ಕೆ ಕೊಡುವ ತೆರಿಗೆಯಲ್ಲಿ ಶೇ.4.71ರಷ್ಟು ಪಾಲು ಕೊಡುತ್ತಿತ್ತು. ಆದರೆ,



15ನೆ ಹಣಕಾಸು ಆಯೋಗದ ಅವಧಿಯಲ್ಲಿ ಇದು ಶೇ.3.64ಕ್ಕೆ ಇಳಿಕೆಯಾಗಿದೆ. ಇದರಿಂದ ಶೇ.20ರಷ್ಟು ತೆರಿಗೆ ಪಾಲು ಕಡಿಮೆಯಾಗಿದೆ. ಇದರಿಂದಾಗಿ, ರಾಜ್ಯಕ್ಕೆ ವರ್ಷಕ್ಕೆ 14 ಸಾವಿರ ಕೋಟಿ ರೂ.ನಷ್ಟವಾಗುತ್ತಿದೆ.

2020–21 ರಿಂದ 2025–26 ಅಂದರೆ 15ನೆ ಹಣಕಾಸು ಆಯೋಗದ ಅವಧಿಯಲ್ಲಿ ಐದು ವರ್ಷಗಳಿಗೆ ಲೆಕ್ಕ ಹಾಕಿದರೆ 62 ಸಾವಿರ ಕೋಟಿ ರೂ.ನಮಗೆ ನಷ್ಟ ಆಗುತ್ತದೆ.

15ನೆ ಹಣಕಾಸು ಆಯೋಗದ ಶಿಫಾರಸು ಮಾಡಿರುವುದು ಕೇಂದ್ರಕ್ಕೆ ಬರುತ್ತಿರುವ ತೆರಿಗೆಯಲ್ಲಿ ರಾಜ್ಯಗಳಿಗೆ ಶೇ.41 ರಷ್ಟು ಮರುಕಳುಹಿಸಬೇಕು. ಆದರೆ, ಅವರು ಮಾಡುತ್ತಿರುವುದು ಕೇವಲ ಶೇ.30 ಮಾತ್ರ ಎಂದು ಅವರು ಹೇಳಿದರು.

ಕೇಂದ್ರ ಸರಕಾರವು ತೆರಿಗೆಯನ್ನು ಕರ(ಸೆಸ್, ಸರ್ಚಾರ್ಜ) ಎಂದು ಹೆಸರು ಬದಲಾಯಿಸಿ ತೆರಿಗೆ ಎಂದು ತೋರಿಸುತ್ತಿಲ್ಲ. ಇದರಿಂದಾಗಿ, ರಾಜ್ಯಗಳಿಗೆ ಪಾಲು ಸಿಗುತ್ತಿಲ್ಲ.

ಕೇಂದ್ರದಲ್ಲಿ ಬಿಜೆಪಿ ಸರಕಾರ ಅಧಿಕಾರಕ್ಕೆ ಬರುವ ಮುನ್ನ ಶೇ.8–9ರಷ್ಟು ಇದ್ದ ಸೆಸ್, ಸರ್ಚಾರ್ಜ್ ಈಗ 2022–23ರಲ್ಲಿ ಶೇ.23ಕ್ಕೆ ತಲುಪಿದೆ. ಸೆಸ್ ಸರ್ಚಾರ್ಜ್ ಮೂಲಕ 2017–18ರಲ್ಲಿ 2.18 ಲಕ್ಷ ಕೋಟಿ ರೂ. ಆದಾಯ ಇತ್ತು.

ಈಗ 5.50 ರಿಂದ 6 ಲಕ್ಷ ಕೋಟಿ ರೂ. ಅಂದಾಜು ಮಾಡಿದ್ದಾರೆಂದು ತಿಳಿಸಿದರು.

ಪೆಟ್ರೋಲ್, ಡಿಸೇಲ್ ಮೂಲಕ ಸಂಗ್ರಹಿಸುವ ಸೆಸ್ ಸರ್ಚಾರ್ಜ್ನಲ್ಲಿ ಶೇ.95ರಷ್ಟು ಆದಾಯ ಕೇಂದ್ರ ಸರಕಾರ ತನ್ನ ಬಳಿ ಇರಿಸಿಕೊಳ್ಳುತ್ತದೆ. ಇದರಿಂದ ಕರ್ನಾಟಕ ಒಂದು ರಾಜ್ಯಕ್ಕೆ 8200 ಕೋಟಿ ರೂ.ಸೆಸ್ನಿಂದಲೇ ನಷ್ಟ ಆಗುತ್ತಿದೆ.

ಸೆಸ್ ಸರ್ಚಾರ್ಜ್ ಯಾವ ಉದ್ದೇಶಕ್ಕೆ ಸಂಗ್ರಹ ಮಾಡಲಾಗುತ್ತದೆಯೋ ಅದೇ ಉದ್ದೇಶಕ್ಕೆ ಬಳಕೆಯಾಗುತ್ತಿಲ್ಲ ಎಂದು ಸಿಎಜಿಯವರು ತಮ್ಮ ವರದಿಯಲ್ಲಿ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಜಿಎಸ್ ಟಿ ಜಾರಿಯಾಗುವ ಮುನ್ನ ರಾಜ್ಯದಲ್ಲಿ ನಮ್ಮ ವಾಣಿಜ್ಯ ತೆರಿಗೆ ಶೇ.14, 15, 16ರಷ್ಟು ಸರಾಸರಿ ಬೆಳವಣಿಗೆ ಇತ್ತು. ಜಿಎಸ್ ಟಿ ಬಂದಾಗ ಯಾವ ರಾಜ್ಯಗಳಿಗೆ ನಷ್ಟ ಆಗುತ್ತದೆ ಅವರಿಗೆ ನಷ್ಟ ಪರಿಹಾರ ನೀಡುವುದಾಗಿ ಹೇಳಿತ್ತು. 2022ರ ಜೂನ್ನಲ್ಲಿ ಪರಿಹಾರ ನಿಲ್ಲಿಸಿದ್ದಾರೆ.

ನಮ್ಮ ಹಿಂದಿನ ಶೇ.14ರಷ್ಟು ಬೆಳವಣಿಗೆ ಕಾಯ್ದುಕೊಂಡಿದ್ದರೆ, ಈಗ ಬರುತ್ತಿರುವ ತೆ–ರಿಗೆ ಪಾಲು ಹೋಲಿಕೆ ಮಾಡಿದರೆ ಪ್ರತಿ ವರ್ಷ 25–30 ಸಾವಿರ ಕೋಟಿ ರೂ.ನಮಗೆ ಕಡಿಮೆಯಾಗುತ್ತಿದೆ. ಆದುದರಿಂದ, ಸೆಸ್ ಹಾಗೂ ಸರ್ಚಾರ್ಜ್ನಲ್ಲೂ ರಾಜ್ಯಕ್ಕೆ ಪಾಲು ನೀಡಬೇಕು ಎಂದು ನಾವು ಬೇಡಿಕೆ ಇಡುತ್ತೇವೆ ಎಂದರು.

15ನೇ ಹಣಕಾಸು ಆಯೋಗವು ನಮ್ಮ ರಾಜ್ಯಕ್ಕೆ ಮೂರು ವಿಶೇಷ ಅನುದಾನಗಳನ್ನು ಶಿಫಾರಸು ಮಾಡಿದ್ದಾರೆ. ಅದು ಒಟ್ಟು 11,495 ಕೋಟಿ ರೂ.ಶಿಫಾರಸು ಮಾಡಿದ್ದಾರೆ. ಅದನ್ನೂ ಕೇಂದ್ರ ಸರಕಾರ ನಮಗೆ ನೀಡಿಲ್ಲ ಎಂದು ಹೇಳಿದರು.

## ಶ್ರೀ ಕ್ಷೇತ್ರ ಶ್ರೀ ಯಲ್ಲಮ್ಮದೇವಿ ಕೊಕಟನೂರ ಜಾತ್ರೆ: ಹೆಚ್ಚುವರಿ ಸಾರಿಗೆ ಸೌಲಭ್ಯ

ಬೆಳಗಾವಿ: ಅಥಣಿ ತಾಲೂಕಿನ ಕೊಕಟನೂರ ಗ್ರಾಮದ ಯಲ್ಲಮ್ಮವಾಡಿಯ ಶ್ರೀ ಯಲ್ಲಮ್ಮಾದೇವಿ ಜಾತ್ರೆಯ ನಿಮಿತ್ಯ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಜ.6 ರಿಂದ ಜ.12. 2024 ರವರೆಗೆ ಕಲ್ಪಿಸಲಾಗಿದೆ.

ಜಾತ್ರೆಗೆ ಅಥಣಿ, ತೆಲಸಂಗ, ಕಾಗವಾಡ, ಸಾವಳಗಿ, ಬಬಲೇಶ್ವರ, ಮಿರಜಸಾಂಡಿ ಮುಂತಾದ ಸ್ಥಳಗಳಿಂದ ಪ್ರಯಾಣಿಸುವ ಯಾತ್ರಿಕರಿಗೆ ಚಿಕ್ಕೋಡಿ ವಿಭಾಗದ ಅಥಣಿ ಘಟಕದಿಂದ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಕಲ್ಪಸಲಾಗಿದೆ.

ಅದರಂತೆ ಕೊಕಟನೂರದಿಂದ ನೇರವಾಗಿ ಪೂಣೆ, ಮುಂಬೈ, ಬೋರಿವಲಿ, ಬಾರಾಮತಿವರೆಗೆ ಹೋಗುವ ಪ್ರಯಾಣಿಕರಿಗೂ ಕೂಡ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಹಾಗೂ ಅಥಣಿ ಬಸ್ ನಿಲ್ದಾಣ, ಮಿರಜ ಬಿಂದು, ಹಾಗೂ ಕೊಕಟನೂರ ಜಾತ್ರಾ ಕೇಂದ್ರದಲ್ಲಿ ಪ್ರತ್ಯೇಕ ಜಾತ್ರಾ ನಿಯಂತ್ರಣ ಬಿಂದುಗಳಲ್ಲಿ ನುರಿತ ಸಾರಿಗೆ ನಿಯಂತ್ರಕ ಸಿಬ್ಬಂದಿಗಳನ್ನು ನಿಯೋಜಿಸಿ ಪ್ರಯಾಣಿಕ–ರಿಗೆ ಸುವ್ಯವಸ್ಥಿತ ವಿಶೇಷ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ವಾಕರಸಾಸಂಸ್ಥೆಯ ಚಿಕ್ಕೋಡಿ ವಿಭಾಗ ವಿಭಾಗೀಯ ನಿಯಂತ್ರಣಾಧಿಕಾರಿ ಎಮ್.ಆರ್.ಮುಂಜಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ: ಯೋಜನೆಗಳಡಿ ಅರ್ಜಿ ಆಹ್ವಾನ

ಬೆಳಗಾವಿ: 2023–24 ನೇ ಸಾಲಿಗೆ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯಡಿ ಈ ಕೆಳಕಾಣಿಸಿದ ಫಲಾನುಭವಿ ಆಧಾರಿತ 05 ಯೋಜನೆಗಳಿಗೆ ಸೇವಾ ಸಿಂಧು ತಂತ್ರಾಂಶದಡಿ (ಪೋರ್ಟಲ್) ವಿಕಲಚೇತನರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಯೋಜನೆಗಳು:

ಯಂತ್ರಚಾಲಿತ ದ್ವಿಚಕ್ರ ವಾಹನ ಯೋಜನೆ, ಅಂ–ಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಬ್ರೈಲ್‌ಕಿಟ್‌ಯೋಜನೆ, ಶ್ರವಣ ದೋಷವುಳ್ಳವ–ರಿಗೆ ಹೊಲಿಗೆ ಯಂತ್ರಯೋಜನೆ, ವಿಕಲಚೇತನರ ವಿವಿಧ ಸಾಧನ ಸಲಕರಣೆಗಳ ಯೋಜನೆಗಳಿಗೆ ಅರ್ಜಿ ಸಲ್ಲಿಸಬಹುದು.

ಬೆಳಗಾವಿ ಜಿಲ್ಲೆಯ ವಿಕಲಚೇತನ ವ್ಯಕ್ತಿಗಳು ಸದರಿ ಯೋಜನೆಗಳಡಿ ಆನ್ಲೈನ್ ಮೂಲಕ ಗ್ರಾಮಒನ್, ಕರ್ನಾಟಕ ಒನ್, ಮತ್ತು ಸೇವಾ ಸಿಂದು ವೆಬ್‌ಸೈಟ್ ವಿಳಾಸ: https://sevasindhu.karnataka.gov.in/Sevasindhu/Kannada ಪೋರ್ಟಲ್‌ನಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ದಿನಾಂಕ:05–01–2024 ರಿಂದ 30–01–2024ರ ಒಳಗಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕು.

ಅರ್ಜಿ ಸಲ್ಲಿಸಿದ ಹಾರ್ಡ ಪ್ರತಿಯೊಂದಿಗೆ ದ್ವಿ ಪ್ರತಿಯಲ್ಲಿ ಅರ್ಜಿಯನ್ನು ಆಯಾ ತಾಲೂಕು ಪಂಚಾಯತಿ ಕಛೇರಿಯಲ್ಲಿರುವ ಎಂ.ಆರ್.ಡಬ್ಲ್ಯೂ. ಗಳಿಗೆ ಸಲ್ಲಿಸಲು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ನಾಮದೇವ ಬಿಲ್ಕರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರಿಶಿಷ್ಟ ಜಾತಿಯ ಯುವಜನರಿಗೆ ಜಿಮ್/ಫಿಟ್ನೆಸ್, ಬ್ಯೂಟೀಷಿಯನ್, ವಿಡಿಯೋಗ್ರಾಫಿ ಹಾಗೂ ನಿರೂಪಣಾ ಮತ್ತು ವಾರ್ತಾ ವಾಚಕರ ತರಬೇತಿ ಶಿಬಿರ: ಅರ್ಜಿ ಆಹ್ವಾನ

ಬೆಳಗಾವಿ: 2023–24ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಪರಿಶಿಷ್ಟ ಜಾತಿ ಉಪಯೋಜನೆ ಅಡಿಯಲ್ಲಿ ಯುವಜನರಿಗಾಗಿ ಜಿಮ್/ ಫಿಟ್ನೆಸ್, ಬ್ಯೂಟೀಷಿಯನ್, ವಿಡಿಯೋಗ್ರಾಫಿ ಹಾಗೂ ನಿರೂಪಣಾ ಮತ್ತು ವಾರ್ತಾ ವಾಚಕರ ತರಬೇತಿ ಶಿಬಿರಗಳನ್ನು ಬೆಂಗಳೂರಿನಲ್ಲಿ ಹಮ್ಮಿಕೊಳ್ಳಲಾಗಿದ್ದು, ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ವಿದ್ಯಾರ್ಹತೆ: ದ್ವಿತೀಯ ಪಿ.ಯು.ಸಿ, ಎಸ್.ಎಸ್.ಎಲ್.ಸಿ (ಪಾಸ್/ಫೇಲ್), ಪದವಿ ಹಾಗೂ ಪತ್ರಿಕೋದ್ಯಮ (Journalism) ಪದವಿ ಹೊಂದಿರಬೇಕು. ವಯೋಮಿತಿ 15 ರಿಂದ 29 ವರ್ಷದೊಳಗಿನವರಾಗಿರಬೇಕು.

**ಮಾರ್ಗಸೂಚಿಗಳು :**

ತರಬೇತಿಯನು ಕರ್ನಾಟಕ ಯುವಜನರಿಗೆ ಮಾತ್ರ ನೀಡಲಾಗುವುದು. ಅರ್ಜಿದಾರರು ಪರಿಶಿಷ್ಟ ಜಾತಿಗೆ ಸೇ–ರಿದವರಾಗಿರಬೇಕು. ಅರ್ಜಿದಾರರು ಕನಿಷ್ಠ 15 ರಿಂದ 29 ವರ್ಷದವರಾಗಿರಬೇಕು. ಬ್ಯೂಟೀಷಿಯನ್ ತರಬೇತಿ ಪಡೆಯಲು ಕನಿಷ್ಠ 10ನೇ ತರಗತಿಯ ಅಂಕಪಟ್ಟಿ ಲಗತ್ತಿಸುವುದು ನಿರೂಪನಾ ಮತ್ತು ವಾರ್ತಾ ವಾಚಕರತರಬೇತಿ ಪಡೆಯಲು ಪದವಿ ಅಂಕಪಟ್ಟಿಯನ್ನು ಲಗತ್ತಿಸುವುದು. ಹಾಗೂ ಜರ್ನಲಿಸ್ಂ ಗೆ ಪ್ರಾಮುಖ್ಯತೆ ನೀಡಲಾಗುವುದು. ವಿಡಿಯೋಗ್ರಫಿ ತರಬೇತಿ ಪಡೆಯಲು ದ್ವಿತೀಯ ಪಿ.ಯು.ಸಿ ಅಂಕಪಟ್ಟಿ ಲಗತ್ತಿಸುವುದು. ಜಿಮ್/ಫಿಟ್ನೆಸ್‌ತರಬೇತಿ ಪಡೆಯಲು ದ್ವಿತೀಯ ಪಿ.ಯು.ಸಿ ಅಂಕಪಟ್ಟಿ ಲಗತ್ತಿಸುವುದು. ಮೇಲಿನಂತೆ ಅರ್ಹತಾ ಮಾನದಂಡಗಳನ್ನು ಹೊಂದಿರುವ ಪರಿಶಿಷ್ಟ ಜಾತಿಯ ಅರ್ಹ ಅಭ್ಯರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ ನಿಗದಿತ ನಮೂನೆಯಲ್ಲಿ ಅರ್ಜಿಯನ್ನು ಕೊನೆಯ ದಿನಾಂಕ 20/01/2024ರ ಒಳಗಾಗಿ ಉಪ ನಿರ್ದೇಶಕರ ಕಛೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಬೆಳಗಾವಿ ಇವರಲ್ಲಿ ಸಲ್ಲಿಸಬೇಕಾಗಿರುತ್ತದೆ.

ಹೆಚ್ಚಿನ ವಿವರಗಳಿಗಾಗಿ ಕಛೇರಿ ದೂರವಾಣಿ 0831–2950306 ನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಚಿತ ಆರೋಗ್ಯ ಶಿಬಿರಕ್ಕೆ ಚಾಲನೆ ನೀಡಿದ ಐಜಿಪಿ ವಿಕಾಸ್ ಕುಮಾರ್

ಬೆಳಗಾವಿ: ಬಡ ಜನತೆ ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೆ ತಜ್ಞ ವೈದ್ಯರು ಲಭ್ಯವಿದ್ದಾಗ ಶಿಬಿರದಲ್ಲಿ ಪಾಲ್ಗೊಂಡು ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ಐಜಿಪಿ ವಿಕಾಸ್ ಕುಮಾರ್ ಹೇಳಿದರು.

ಇಲ್ಲಿನ ಸಿಪಿಎಡ್ ಮೈದಾನದ ಅನ್ನೋತ್ಸವದಲ್ಲಿ ಡಾ.ಗಿರೀಶ ಸೋನವಾಲ್ಕರ್ ಫೌಂಡೇಶನ್ ವತಿಯಿಂದ ಆಯೋಜಿಸಲಾದ 11 ದಿನಗಳ ಉಚಿತ ಆರೋಗ್ಯ ಶಿಬಿರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಆರೋಗ್ಯದಲ್ಲಿ ಮುಂದೆ ಬರಬಹುದಾದ ಸವಾಲುಗಳಿಗೆ ಇಂದೇ ಸೂಕ್ತ ಪರಿಹಾರ ಕಂಡುಕೊಳ್ಳಲು ಇಂತಹ ಶಿಬಿರ ಸಹಕಾರಿಯಾಗಿದೆ. ಈ ಇಂತಹ ಸಮಾಜ ಸೇವೆಯಲ್ಲಿ ತೊಡಗಿರುವ ಡಾ.ಗಿರೀಶ ಸೋನವಾಲ್ಕರ್ ಫೌಂಡೇಶನ್ ಕಾರ್ಯ ಶ್ಲಾಘನೀಯ. ಮನುಷ್ಯನಿಗೆ ಆರೋಗ್ಯವೇ ಮುಖ್ಯ, ಅದನ್ನು ನಾವು ಕಾಪಾಡಿಕೊಳ್ಳಬೇಕು ಆದ್ದರಿಂದ ಈ ಶಿಬಿರದ ಉಪಯೋಗವನ್ನು



ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದರು.

ಡಾ.ಗಿರೀಶ ಸೋನವಾಲ್ಕರ್ ಫೌಂಡೇಶನ್ ಅದ್ಯಕ್ಷ ಡಾ. ಡಾ.ಗಿರೀಶ ಸೋನವಾಲ್ಕರ್ ಮಾತನಾಡಿ, ಈಗಿನ ಕಾಲಘಟ್ಟದಲ್ಲಿ ಮನುಷ್ಯ ಒತ್ತಡ ಜೀವನ ಶೈಲಿಯಿಂದ ಆರೋಗ್ಯದ ಮೇಲೆ ಸಾಕಷ್ಟು ಪರಿಣಾಮ ಬೀರುತ್ತಿವೆ.

ಹೀಗಾಗಿ ಕಾಲ ಕಾಲಕ್ಕೆ ತಪಾಸಣೆ ಹಾಗೂ ವೈದ್ಯರ ಚಿಕಿತ್ಸೆಯಿಂದ ರೋಗಗಳನ್ನು ಪ್ರಾಥಮಿಕ ಹಂತದಲ್ಲಿಯೆ ಪತ್ತೆ ಹಚ್ಚಿ ಗುಣಪಡಿಕೊಳ್ಳುವುದು ಉತ್ತಮ ಎಂದು ಹೇಳಿದರು.

ಸಾರ್ಜನಿಕರ ಸೇವೆಗಾಗಿಯೇ ಹಲವಾರು ಕಾರ್ಯಕ್ರಮಗಳನ್ನು ಏರ್ಪಡಿಸುತ್ತಿದೆ.

ಈ ಶಿಬಿರದಲ್ಲಿ ಸ್ತ್ರೀ ರೋಗ, ಜನರಲ್ ಮೆಡಿಸಿನ್, ಮೂಳೆ ತಜ್ಞರು, ನರ ರೋಗ ಸೇರಿದಂತೆ ಹಲವಾರು ರೋಗಿಗಳಿಗೆ ವೈದ್ಯರು ತಪಾಸಣೆ ನಡೆಸಲಿದ್ದು

ಈ ಭಾಗದ ಜನರು ಇದರ ಸದುಪಯೋಗ ಪಡೆಯಲೆಂದು ಈ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿದೆ ಇದರ ಸದುಪಯೋಗವನ್ನು ಎಲ್ಲರೂ ಪಡೆಯಬೇಕೆಂದು ಹೇಳಿದರು.

ಈ ಸಂದರ್ಭದಲ್ಲಿ ಡಾ.ಪ್ರಕಾಶ ಸೋನವಾಲ್ಕರ್ ,ರವಿ ಜೂಗನ್ನವರ್, ಶ್ರೀನಿವಾಸ್ ಮಾನೆ, ಶೇಖರಗೌಡ ಕುರಡಗಿ, ವಿಜಯ ಸೋನವ್ಕಾರ್ ಹಾಗೂ ಇತರರು ಇದ್ದರು.

# ಬೆಳಗಾವಿ ಮೂಲದ ಶಬರಿಮಲೆ ಭಕ್ತರಿಗೆ ಮಸೀದಿಯಲ್ಲಿ ಆಶ್ರಯ ನೀಡಿ ಸೌಹಾರ್ದತೆ ಮೆರೆದ ಮುಸ್ಲಿಮರು

ಮಡಿಕೇರಿ: ಪ್ರಸ್ತುತ ನಡೆಯುತ್ತಿರುವ ರಾಜಕೀಯ ಮತ್ತು ಕೋಮು ಸಂಘರ್ಷ ಪರಿಸ್ಥಿತಿಯ ನಡುವೆಯೂ ಕೊಡಗಿನ ಮುಸ್ಲಿಂ ಬಾಂಧವರು ಸೌಹಾರ್ದತೆಗೆ ಸಾಕ್ಷಿಯಾದರು. ಕೊಡಗಿನ ವಿರಾಜಪೇಟೆ ತಾಲ್ಲೂಕಿನ ತಿತಿಮತಿಯಲ್ಲಿರುವ ಲಿವಾಉಲ್ ಹುದಾ ಜಮ್ಮಾ ಮಸೀದಿಯು ಸಂಕಷ್ಟಕ್ಕೆ ಸಿಲುಕಿದ್ದ ಶಬರಿಮಲೆಯ ಭಕ್ತರಿಗೆ ಆಶ್ರಯ ಹಾಗೂ ಸೌಲಭ್ಯ ಕಲ್ಪಿಸುವ ಮೂಲಕ ಸಹೋದರತ್ವ ಮತ್ತು ಸಾಮರಸ್ಯದ ಸಂದೇಶ ನೀಡಿದೆ.

ಬೆಳಗಾವಿ ಮೂಲದ ಐವರು ಭಕ್ತರು ಕೊಡಗು



ಮಾರ್ಗವಾಗಿ ಬೈಕ್‌ನಲ್ಲಿ ಕೇರಳದ ಶಬರಿಮಲೆ ದೇವಸ್ಥಾನಕ್ಕೆ ಹೊರಟಿದ್ದರು. ಆದ್ರೆ ಗುರುವಾರ ರಾತ್ರಿ ವೇಳೆ ಆಗಿದ್ದರಿಂದ ಹಾಗೂ ಹವಾಮಾನ ವೈಪ–ರಿತ್ಯದಿಂದಾಗಿ ಯಾತ್ರೆಯನ್ನು ತಿತಿಮತಿಯಲ್ಲಿ ಸ್ಥಗಿ–ತಗೊಳಿಸಿದರು. ಈ ವೇಳೆ ಕಮಲೇಶ್ ಗೌರಿ, ಭೀಮಪ್ಪ ಸನದಿ, ಎನ್. ಶಿವಾನಂದ್, ಬಿ. ಗಂಗಾಧರ್ ಮತ್ತು ಎಸ್. ಸಿದ್ದ ಐವರು ಭಕ್ತರು, ಜಮ್ಮಾ ಮಸೀದಿ ಬಳಿ ಹೋಗಿ ನೆರವು ಕೇಳಿದರು. ನಂತರ ಮಸೀದಿ ಆಡಳಿತ ಮಂಡಳಿಯವರು ಶಬರಿಮಲೆ ಭಕ್ತರ ನೆರವಿಗೆ ಧಾವಿಸಿ, ರಾತ್ರಿ ಮಸೀದಿಯಲ್ಲೇ ತಂಗಲು ಅನುಮತಿ ನೀಡಿದರು. ಅಲ್ಲದೇ ಭಕ್ತರಿಗೆ ಅಗತ್ಯವಿರುವ ಎಲ್ಲ ಸೌಲಭ್ಯಗಳನ್ನು ಮಸೀದಿ ಅಧ್ಯಕ್ಷ ಉಸ್ಮಾನ್ ಹಾಗೂ ಕೆ. ಕತೀಬ್ ಒದಗಿಸಿಕೊಟ್ಟರು. ಶುಕ್ರವಾರ ಬೆಳಗ್ಗೆ 6 ಗಂಟೆಗೆ ಐವರು ಭಕ್ತರು ಆಡಳಿತ ಮಂಡಳಿಗೆ ಕೃತಜ್ಞತೆ ಸಲ್ಲಿಸಿ ಶಬರಿಮಲೆಗೆ ತೆರಳಿದರು. ಇದಕ್ಕೂ ಮುನ್ನ ಬೆಳಗ್ಗೆ ಮಸೀದಿ ಸಮೀಪದಲ್ಲೇ ಅಯ್ಯಪ್ಪ ಸ್ವಾಮಿಗೆ ಪೂಜೆ ಸಲ್ಲಿಸಲು ಮಸೀದಿಯವರೇ ಅವಕಾಶ ಮಾಡಿಕೊಟ್ಟಿದ್ದರು. ಸದ್ಯ ಕೊಡಗಿನಲ್ಲಿ ಈ ಸೌಹಾರ್ದತೆಯನ್ನು ಕಂಡು ಸಾರ್ವಜನಿಕರಿಂದಲೂ ಮೆಚ್ಚುಗೆ ವ್ಯಕ್ತವಾಗಿದೆ.

# ಖ್ಯಾತ ಸಾಹಿತಿ ಡಾ. ಅಮೃತ ಸೋಮೇಶ್ವರ ವಿಧಿವಶ

ಮಂಗಳೂರು: ಖ್ಯಾತ ಸಾಹಿತಿ ಡಾ. ಅಮೃತ ಸೋಮೇಶ್ವರ ನಿಧನರಾಗಿದ್ದಾರೆ ಅವರಿಗೆ( 89 ) ವರ್ಷ ವಯಸ್ಸಾಗಿತ್ತು.

ನಾಡಿನ ಹಿರಿಯ ವಿದ್ವಾಂಸ ಕರಾವಳಿಯ ತುಳು ಯಕ್ಷಗಾನ ಪ್ರಸಂಗ ಕರ್ತೃ, ತುಳು ಜಾನಪದ ವಿದ್ವಾಂಸ, ಮಂಗಳಗಂಗೋತ್ರಿ ಎಸ್ ವಿ ಪಿ ಕನ್ನಡ ಅಧ್ಯಯನ ವಿಭಾಗದ ಅಧ್ಯಕ್ಷರಾಗಿದ್ದ ಪ್ರೊಫೆಸರ್ ಕರಾವಳಿಯ ಸಾಹಿತ್ಯ ಲೋಕದ ಗಣಿ ಎಂದು ಗುರುತಿಸಲ್ಪಟ್ಟವರು. ಅಮೃತ ಸೋಮೇಶ್ವರ ಅವರು ನಾಡಿನ ಹೆಸರಾಂತ ಸಾಹಿತಿಗಳಲ್ಲಿ ಒಬ್ಬರಾಗಿ ಗುರುತಿಸಿಕೊಂಡಿದ್ದರು.

ಅಮೃತ ಸೋಮೇಶ್ವರರು ದಕ್ಷಿಣ ಕನ್ನಡ ಜಿಲ್ಲೆಯ ಓರ್ವ ಹಿರಿಯ ವಿದ್ವಾಂಸರು. ಕನ್ನಡ, ತುಳು ಸಾಹಿತಿಯಾಗಿ, ಸಂಶೋಧಕರಾಗಿ, ಯಕ್ಷಗಾನ ಪ್ರಸಂಗಕರ್ತರಾಗಿ, ಸಮಾಜಮುಖಿ ಚಿಂತನೆಯುಳ್ಳ ಓರ್ವ ಸಹೃದಯಿಯಾಗಿ ಅವರು ಕರ್ನಾಟಕದ ಜನರಿಗೆ ಪರಿಚಿತರು. ಅವರ ಸಾಹಿತ್ಯ ಕೃತಿಗಳ ಮೂಲಕ, ಸಂಶೋಧನಾ ಕೃತಿಗಳ ಮೂಲಕ, ಯಕ್ಷಗಾನದಲ್ಲಿ ಅಪಾರ ಸಾಧನೆ ಮಾಡಿದ್ದಾರೆ.

ಅಮೃತ ಸೋಮೇಶ್ವರರು ಮಂಗಳೂರು ತಾಲೂಕಿನ ಸೋಮೇಶ್ವರ ಗ್ರಾಮದ ಅಡ್ಕ ಎಂಬಲ್ಲಿ 27.09.1935ರಂದು ಜನಿಸಿದರು. ಇವರ ತಂದೆ ಮುಂಬೈಯಲ್ಲಿ ಜರ್ಮನ್



ರಾಯಭಾರಿ ಕಚೇರಿಯ ಒಬ್ಬ ಅಧಿಕಾರಿಯ ವಾಹನ ಚಾಲಕರಾಗಿದ್ದರು.

ಇವರು ಶಾಲಾ ಶಿಕ್ಷಣ ಪಡೆದಿರದಿದ್ದರೂ, ಕುತೂಹಲ ಮತ್ತು ಸ್ವಪ್ರಯತ್ನದಿಂದ 12 ಭಾಷೆಗಳನ್ನು ಕಲಿತಿ–ದ್ದರು. ಅಮೃತರ ತಾಯಿ ಗೃಹಿಣಿಯಾಗಿದ್ದರೂ, ಮಲೆಯಾಳ ಜನಪದ ಕಥನ ಕಾವ್ಯಗಳನ್ನು ಹಾಡಬಲ್ಲವರಾಗಿದ್ದರು. ಅಮೃತ–ರಿಗಿಂತ ಮೂರು ವರ್ಷ ಹಿರಿಯರಾದ ಅವರ ಅಕ್ಕ ಕಮಲ ಪ್ರಾಥಮಿಕ ಶಾಲಾ ಶಿಕ್ಷಕಿಂ–ಯಾಗಿದ್ದರು.

ತಮ್ಮ ಬಾಲ್ಯವನ್ನು ಮುಂಬೈಯಲ್ಲಿ ಕಳೆದ ಅಮೃತರು, ಐದು ವರ್ಷವಾಗುವಾಗ ಊರಿಗೆ ಮರಳಿ, ಕೋಟೆಕಾ–ರಿನಲ್ಲಿರುವ ಸ್ಟೆಲ್ಲಾ ಮೇರಿಸ್ ಹಿರಿಯ ಪ್ರಾಥಮಿಕ ಶಾಲೆಗೆ ಸೇ–ರಿದರು. ಅಲ್ಲಿ 5ನೇ ತರಗತಿ ವರೆಗೆ ಕಲಿತು, 1946ರಲ್ಲಿ ಆಗ ತಾನೇ ಆರಂಭವಾದ ಆನಂದಾಶ್ರಮ ಪ್ರೌಢಶಾಲೆಯ 6ನೇ ತರಗತಿಗೆ ಪ್ರಥಮ ತಂಡದ ವಿದ್ಯಾರ್ಥಿಯಾಗಿ ಸೇರಿದರು. 1954ರಲ್ಲಿ ಎಸ್ಸೆಸ್ಸೆಲ್ಸಿ ಉತ್ತೀರ್ಣರಾದರು.

ಅಮೃತ ಸೋಮೇಶ್ವರರು ಬಾಲ್ಯದಲ್ಲಿ ತಮ್ಮ ಸುತ್ತ ಮುತ್ತ ನಡೆಯುತ್ತಿದ್ದ ಯಕ್ಷಗಾನ ಬಯಲಾಟಗಳನ್ನು ನೋಡುತ್ತಿದ್ದರು. ಮರುದಿನ ತನ್ನ ಗೆಳೆಯರೊಂದಿಗೆ ಅದನ್ನು ಅನುಕರಿಸಿ ಮನೆ ಸಮೀಪ ತಮ್ಮದೇ ಆಟ ಆಡುತ್ತಿದ್ದಾಗ ಅಮೃತರು ಭಾಗವತರಾಗುತ್ತಿದ್ದದ್ದು ಮಾತ್ರವಲ್ಲ ಆಶು ಪದ್ಯಗಳನ್ನು ಕಟ್ಟಿ ಹಾಡುತ್ತಿದ್ದರು. ಅಮೃತರ ಸಾಹಿತ್ಯಾಸಕ್ತಿಗೆ ಯಕ್ಷಗಾನದ ಪ್ರಭಾವವೂ ಒಂದು ಕಾರಣ. ಅಲ್ಲದೆ ಅವರ ತಾಯಿ, ದೊಡ್ಡ ತಾಯಿಯರು ಹಾಡುತ್ತಿದ್ದ ಕೇರಳದ ಜನಪದ ಕಥನಕಾವ್ಯಗಳು ಕೂಡ ಅವರ ಸಾಹಿತ್ಯಾಸಕ್ತಿಗೆ ಪ್ರೇರಣೆ ನೀಡಿದ್ದವು.

ಅಮೃತರು ಬರೆದ ವಿವಿಧ ಗ್ರಂಥಗಳಿಗಾಗಿ ಕೇಂದ್ರ ಸರಕಾರದ ವಿದ್ಯಾ ಇಲಾಖೆಯಿಂದ, ಕರ್ನಾಟಕ ಸಾಹಿತ್ಯ ಅಕಾಡಮಿಯಿಂದ, ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡಮಿಯಿಂದ ಎರಡು ಬಾರಿ ಗ್ರಂಥ ಪುರಸ್ಕಾರಗಳನ್ನು ಪಡೆದಿದ್ದಾರೆ.

# ಜನಸ್ಪಂದನಾ ಕಾರ್ಯಕ್ರಮಕ್ಕೆ ಉತ್ತಮ ಪ್ರತಿಕ್ರಿಯೆ: ಜನರು ಸಲ್ಲಿಸಿದ ಅರ್ಜಿಗಳಲ್ಲಿ ಬಿಬಿಎಂಪಿ, ಕಂದಾಯ ಇಲಾಖೆಯದ್ದೇ ಹೆಚ್ಚು




ಬೆಂಗಳೂರು: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಬರುವ ವಿಧಾನಸಭಾ ಕ್ಷೇತ್ರಗಳಲ್ಲಿ ವಾಸವಾಗಿರುವ ಜನರ ತೊಂದರೆ, ಸಮಸ್ಯೆಗಳನ್ನು ಪರಿಹ–ರಿಸಲು ಉಪ ಮುಖ್ಯಮಂತ್ರಿ ಮತ್ತು ಬೆಂಗಳೂರು ಅಭಿವೃದ್ಧಿ ಸಚಿವ ಡಿಕೆ ಶಿವಕುಮಾರ್ ಅವರು ಆರಂಭಿಸಿರುವ ಜನಸ್ಪಂದನಾ ಕಾರ್ಯಕ್ರಮಕ್ಕೆ ಜನರಿಂದ ಉತ್ತಮ ಪ್ರತಿಕ್ರಿಯೆಗಳು ವ್ಯಕ್ತವಾಗುತ್ತಿವೆ.

ಶುಕ್ರವಾರ ಯಲಹಂಕದಲ್ಲಿ ಕಾರ್ಯಕ್ರಮವನ್ನು ನಡೆಸಲಾಗಿದ್ದು, ಸುಮಾರು 2,600 ಅರ್ಜಿಗಳು ಸಲ್ಲಿಕೆಯಾಗಿವೆ. ಈ ಪೈಕಿ ಬಹುತೇಕ ಅರ್ಜಿಗಳು ಬಿಬಿಎಂಪಿ ಹಾಗೂ ಕಂದಾಯ ಇಲಾಖೆಗೆ ಸಲ್ಲಿಕೆಯಾಗಿರುವುವುದು ಕಂಡು ಬಂದಿದೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಡಿಕೆ.ಶಿವಕುಮಾರ್ ಅವರು, ಜನಸ್ಪಂದನಾ ಕಾರ್ಯಕ್ರಮದಲ್ಲಿ ಬಂದಿರುವ ಅರ್ಜಿಗಳನ್ನು ನಿರ್ದಿಷ್ಟ ಕಾಲಮಿತಿಯೊಳಗೆ ತೆರವುಗೊಳಿಸಬೇಕೆಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಾರ್ಡ್ ಮಟ್ಟದಲ್ಲಿ ಅರ್ಜಿಗಳನ್ನು ಪ್ರತ್ಯೇಕಿಸಿ, ಸಮಸ್ಯೆಗಳನ್ನು ಪರಿಹರಿಸಲು ಅಧಿಕಾರಿಗಳಿಗೆ ಗಡುವು ನೀಡಿದರು.

ಅರ್ಜಿದಾರರ ದೂರವಾಣಿ ಸಂಖ್ಯೆಗಳನ್ನು ಸಂಗ್ರಹಿಸಿ, ಸ್ಥಳ ಪರಿಶೀಲನೆ ನಡೆಸಬೇಕು. ಜನರಿಗೆ ತೊಂದರೆ ಕೊಡಬಾರದು ಎಂಬ ಸತ್ಯವನ್ನು ಅಧಿಕಾರಿಗಳು ಅರಿತುಕೊಳ್ಳಬೇಕು. ಜನರು ಸಮಸ್ಯೆಗಳಿಗೆ ಸ್ಪಂದಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಇದೇ ವೇಳೆ ಯಾವ ಇಲಾಖೆಗೆ ಹೆಚ್ಚು ಅರ್ಜಿಗಳು ಬಂದಿವೆ ಎಂಬ ಪ್ರಶ್ನೆಗೆ ಉತ್ತ–ರಿಸಿದ ಅವರು, ಬಹುತೇಕ ಅರ್ಜಿಗಳು ಬಿಬಿಎಂಪಿ ಮತ್ತು ಕಂದಾಯ ಇಲಾಖೆಗೆ ಸಂಬಂಧಿಸಿದ್ದಾಗಿವೆ. ಖಾತಾ ಸಮಸ್ಯೆಗೆ ಸಂಬಂಧಿಸಿದಂತೆ ಸಾಕಷ್ಟು ಪ್ರಕರಣಗಳಿವೆ. ಸಾಕಷ್ಟು ಮಂದಿ ಮನೆಗಳಿಗೆ ಮನವಿ ಸಲ್ಲಿಸಿದ್ದಾರೆ. ರಿಯಾಯಿತಿ ದರದಲ್ಲಿ ವಸತಿ ಕಲ್ಪಿಸುವ ಆಯ್ಕೆ ಇದೆ, ಈ ಕುರಿತು ಇಲಾಖೆಯೊಂದಿಗೆ ಚರ್ಚೆ ನಡೆಸುತ್ತೇನೆ. ಆಸ್ತಿ ತೆರಿಗೆ ಕಟ್ಟದವರಿಗೆ ದಂಡದ ಮೊತ್ತ ಹೆಚ್ಚಿದೆ ಎಂಬುದರ ಬಗ್ಗೆಯೂ ಸಾಕಷ್ಟು ಮನವಿಗಳು ಬಂದಿವೆ. ಈ ಬಗ್ಗೆ ಅಧಿಕಾ–ರಿಗಳೊಂದಿಗೆ ಚರ್ಚಿಸಿ ಕಾನೂನು ಚೌಕಟ್ಟಿನಲ್ಲಿ ಮಾಡಬೇಕಾದ ಕೆಲಸ ಮಾಡಲಾಗುವುದು ಎಂದರು. ಇದೇ ವೇಳೆ ಸುಳ್ಳು ಭರವಸೆಗಳಿಗೆ ಬಲಿಯಾಗದಿರಿ ಎಂದು ಜನರಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಬಿಎ ಮುಗಿಸಿರುವ ದೃಷ್ಟಿಹೀನ ವಿಕಲಚೇತನ ಮಹಿಳೆಯೊಬ್ಬರು ತನಗೆ ಮನೆ, ಉದ್ಯೋಗ ಬೇಕು ಎಂದು ಮನವಿ ಮಾಡಿದರು.

ಈ ವೇಳೆ ಡಿಕೆ.ಶಿವಕುಮಾರ್ ಅವರು ವಿಕಲಚೇತನರ ಕೋಟಾದಡಿ ಫ್ಲ್ಯಾಟ್ ವ್ಯವಸ್ಥೆ ಮಾಡುವಂತೆ ಬಿಡಿಎ ಆಯುಕ್ತರಿಗೆ ಸೂಚಿಸಿದರು. ಅಲ್ಲದೆ, ಆಕೆಗೆ ಪಾಲಿಕೆಯಲ್ಲಿ ಸೂಕ್ತ ಕೆಲಸ ಕೊಡಿಸುವಂತೆ ಬಿಬಿಎಂಪಿ ಆಯುಕ್ತರಿಗೆ ಸೂಚನೆ ನೀಡಿದರು.

ಕರ್ನಾಟಕ ನೀರಾವರಿ ನಿಗಮ ನಿಯಮಿತ
(ಕರ್ನಾಟಕ ಸರ್ಕಾರದ ಉದ್ಯಮ)
ಕಾರ್ಯನಿರ್ವಾಹಕ ಅಭಿಯಂತರರ ಕಚೇರಿ, ಕರ್ನಾಟಕ ನೀರಾವರಿ ನಿಗಮ ನಿಯಮಿತ, ಘ.ಬ.ದಂ.ಕಾ.ನಿ. ವಿಭಾಗ–4, ಚಿಕ್ಕೋಡಿ
ಫೋನ ನಂ:08338 – 272485 ಫ್ಯಾಕ್ಸ ನಂ: 08338 – 275186

ಅಲ್ಪಾವಧಿ ಟೆಂಡರ ಪ್ರಕಟಣೆ
(ಇ–ಪ್ರೊಕ್ಯೂರಮೆಂಟ ಮುಖಾಂತರ ಮಾತ್ರ)

ಟೆಂಡರ ಪ್ರಕಟಣೆ ಸಂಖ್ಯೆ :KNNL/GRBCC -4/Tender/2023-24/05
Date:- 03-01-2024

ವ್ಯವಸ್ಥಾಪಕ ನಿರ್ದೇಶಕರು,ಕನೀನಿನಿ ಬೆಂಗಳೂರು ಇವರ ಪರವಾಗಿ ಈ ಕೆಳಗೆ ಸಹಿ ಮಾಡಿರುವವರಿಂದ ಕರ್ನಾಟಕ ಸರ್ಕಾರದ ಕೆ.ಪಿ.ಪಿ ಪೋರ್ಟಾಲ್ (https://kppp.karnataka.gov.in) 4701 ಅಡಿಯಲ್ಲಿನ 04 ಕಾಮಗಾರಿಗಳಿಗೆ ಮೇಲ್ಕಾಣಿಸಿದ ಪ್ರಕಟಣೆಯಲ್ಲಿ ಅರ್ಹ ಗುತ್ತಿಗೆದಾರರಿಗೆ ಟೆಂಡರಗಳನ್ನು ಕರೆಯಲಾಗಿರುತ್ತದೆ. **ವಿವರ :**

ಟೆಂಡರ ಪ್ರಕಟಣೆ ಸಂ:05 dtd 03-01-2024, ಕೆ.ಪಿ.ಪಿ. ಪೋರ್ಟಾಲ್ ಇಂಡೆಂಟ ಸಂಖ್ಯೆ :Single Cover System:Indent No 257, 264, 275 & 260, ಅಂದಾಜು ಪತ್ರಿಕೆಯಂತೆ ಟೆಂಡರಿಗೆ ಇಡಲಾದ ಮೊತ್ತ ರೂ:33.77 lakhs to 42.35 lakhs,ಇಎಂಡಿ ಮೊತ್ತ ರೂ:80,000/– to 1,00,000/-, ಟೆಂಡರ ಕುರಿತ ಪ್ರಶ್ನೆಗಳಿಗಾಗಿ/ಸ್ಪಷ್ಟೀಕರಣಗಳಿಗಾಗಿ ಕೊನೆಯ ದಿನಾಂಕ & ಸಮಯ:10–01–2024, Up to 17.00 hrs, ಭರ್ತಿ ಮಾಡಿದ ಟೆಂಡರಗಳನ್ನು ಇ–ಪೋರ್ಟಲ್ ಮುಖಾಂತರ ಸಲ್ಲಿಸಲು ಕೊನೆಯ ದಿನಾಂಕ & ಸಮಯ:11-01-2024 at 16.00 hrs, ಆರ್ಥಿಕ ಬಿಡ್‌ನ್ನು ತೆರೆಯುವ ದಿನಾಂಕ:12-01-2024 at 16.30 hrs

ಕಾಮಗಾರಿಗಳ ಹೆಸರು/ಗುತ್ತಿಗೆದಾರರ ಅರ್ಹತೆ/ ಟೆಂಡರಿನ ನಿಯಮ/ಟೆಂಡರ ಪ್ರೋಸೆಸಿಂಗ್ ಶುಲ್ಕ ಇತ್ಯಾದಿ ವಿವರಗಳಿಗೆ https://kppp.karnataka.gov.in ಮೂಲಕ ಮಾಹಿತಿ ಪಡೆಯಬಹುದು ಅಥವಾ ಈ ಕೆಳಗೆ ಸಹಿ ಮಾಡಿದವರ ಕಚೇರಿಯಲ್ಲಿ ಕಚೇರಿ ಸಮಯದಲ್ಲಿ ಸಂಪರ್ಕಿಸಬಹುದು. ಟೆಂಡರಗಳನ್ನು ಸ್ವೀಕರಿಸುವ ಅಧಿಕಾರಿಯು ಯಾವುದೇ ಕಾರಣ ನೀಡದೆ ಯಾವುದೇ ಟೆಂಡರನ್ನು ಅಥವಾ ಎಲ್ಲಾ ಟೆಂಡರಗಳನ್ನು ತಿರಸ್ಕರಿಸುವ ಅಧಿಕಾರವನ್ನು ಹೊಂದಿರುತ್ತಾರೆ.

ಸಹಿ/– ಕಾರ್ಯನಿರ್ವಾಹಕ ಅಭಿಯಂತರು,
ಕನೀನಿನಿ, ಘಬದಂಕಾನಿ ವಿಭಾಗ–4, ಚಿಕ್ಕೋಡಿ
DIPR/BGM/RO-NO-894/KSMCA/2023-24

# ವಿವಿಧ ಜಯಂತಿಗಳ ಆಚರಣೆ: ಪೂರ್ವಭಾವಿ ಸಭೆ

## ಸಿದ್ಧರಾಮೇಶ್ವರ ಜಯಂತಿ ಜ.16, ವೇಮನ ಜಯಂತಿ ಜ.19 ಹಾಗೂ ಅಂಬಿಗರ ಚೌಡಯ್ಯ ಜಯಂತಿ ಜ.28 ರಂದು ಆಚರಣೆ

ಬೆಳಗಾವಿ: ಸರ್ಕಾರದ ಮಾರ್ಗಸೂಚಿಯಂತೆ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಜನವರಿ 16, ಮಹಾಯೋಗಿ ವೇಮನ ಜಯಂತಿ ಜ.19 ರಂದು ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಜ.28 ರಂದು ಸಂಭ್ರಮದಿಂದ ಆಚರಿಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶನಿವಾರ (ಜ.06) ನಡೆದ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ, ಮಾಹಾಯೋಗಿ ವೇಮನ ಜಯಂತಿ ಹಾಗೂ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಆಚ–'ರಣೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜ. 16 ರಂದು ನಡೆಯಲಿರುವ ಶ್ರೀ ಶಿವಯೋಗಿ ಸಿದ್ಧರಾಮೇಶ್ವರ ಜಯಂತಿ ಕಾರ್ಯಕ್ರಮವನ್ನು ಕುಮಾರ್ ಗಂಧರ್ವ ರಂಗಮಂದಿರದಲ್ಲಿ ಆಚರಿಸಲಾಗುವುದು.

ಅದೇ ರೀತಿಯಲ್ಲಿ ಮಹಾಯೋಗಿ ವೇಮನ ಜಯಂತಿ ಮೆರವಣಿಗೆ ಕಾರ್ಯಕ್ರಮ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಆವರಣದಿಂದ ಕುಮಾರ ಗಂಧರ್ವ ಕಲಾ ಮಂದಿರ ನಡೆಯಲಿದೆ.

ಈ ಸಂದರ್ಭದಲ್ಲಿ ವಿವಿಧ ಕಲಾ ತಂಡಗಳು ಮೆರವಣಗೆಯಲ್ಲಿ ಪಾಲ್ಗೊಳ್ಳಲಿವೆ. ನಂತರ ಕುಮಾರ್ ಗಂಧರ್ವ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ.ಎಂದು ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ ಅವರು ತಿಳಿಸಿದರು.

**ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ:**

ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಕಾರ್ಯಕ್ರಮವನ್ನು ಈ ಬಾರಿ ಸಮಾಜದ ಮುಖಂಡರ ಮನವಿಯ ಮೇರೆಗೆ ಬೆಳಗಾವಿ ನಗರದ ಸರದಾರ ಹೈಸ್ಕೂಲ್



ಮೈದಾನದಲ್ಲಿ ನಡೆಸಲಾಗುವುದು ಎಂದು ಅಪರ ಜಿಲ್ಲಾಧಿಕಾರಿ ತಿಳಿಸಿದರು.

ಸಮಾಜದ ಮುಖಂಡರ ಮನವಿಯಂತೆ ನಿಜಶರಣ ಅಂಬಿಗರ ಚೌಡಯ್ಯನವರ ಜಯಂತಿ ಜ.28 ರಂದು ನಗರದ ಸರ್ದಾರ ಮೈದಾನದಲ್ಲಿ ಆಯೋಜನೆ ಮಾಡಲಾಗುವದು. ಕ್ರಾಂತಿ ವೀರ ಸಂಗೊಳ್ಳಿ ರಾಯಣ್ಣ ವೃತ್ತದಿಂದ ಸರ್ದಾರ್ ಮೈದಾನದವರೆಗೂ ಮೆರವಣಿಗೆ ಕಾರ್ಯಕ್ರಮ ಏರ್ಪಡಿಸಲಾಗುವುದು ಎಂದು ತಿಳಿಸಿದರು.

ಅಂಬಿಗರ ಚೌಡಯ್ಯ ಜಯಂತಿಯಲ್ಲಿ ಈ ಬಾರಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಲಿದ್ದು, ವೇದಿಕೆ ಸಿದ್ಧತೆ, ಸೂಕ್ತ ಪೊಲೀಸ್ ಬಂದೋಬಸ್ತ್, ಟ್ರಾಫಿಕ್ ಸುವ್ಯವಸ್ಥೆ ಹಾಗೂ ವಾಹನಗಳ ಪಾರ್ಕಿಂಗ್ ವ್ಯವಸ್ಥೆ ಕಲ್ಪಿಸಬೇಕು ಮತ್ತು ಮೆರವಣಿಗೆ ಕಾರ್ಯಕ್ರಮದಲ್ಲಿ ಹೆಚ್ಚಿನ ಕಲಾತಂಡಗಳು ಭಾಗವಹಿಸಬೇಕು ಎಂದು ಸಮಾಜದ ಜಿಲ್ಲಾ ಘಟಕದ ಅಧ್ಯಕ್ಷರು ಹಾಗೂ ಸಮಾಜದ ಮುಖಂಡರಾದ ದಿಲೀಪ್ ಕುರಂದವಾಡೆ ಅವರು ಮನವಿ ಮಾಡಿಕೊಂಡರು.

ಕುಡಿಯುವ ನೀರು, ಆಸನ ವ್ಯವಸ್ಥೆ ಸೇ–ರಿದಂತೆ ಜಯಂತಿ ಕಾರ್ಯಕ್ರಮಕ್ಕೆ ಆಗಮಿಸುವ ಜನರಿಗೆ ಯಾವುದೇ ತೊಂದರೆ ಆಗಬಾರದು. ಸಂಬಂಧಿಸಿದ ಇಲಾಖೆಗಳು ಜಯಂತಿ ಆಚರಣೆಗೆ ಅಗತ್ಯವಿರುವ ಸಿದ್ಧತೆ ಪೂರ್ಣಗೊಳಿಸಿ ಸಹಕಾರ ನೀಡಬೇಕು ಎಂದು ಅವರು ಸಭೆಯಲ್ಲಿ ಕೋರಿದರು.

ಜಿಲ್ಲೆಯ ಎಲ್ಲ ಶಾಲಾ, ಕಾಲೇಜು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ನಿಜಶರಣ ಅಂಬಿಗರ ಚೌಡಯ್ಯನವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಜಯಂತಿ ಆಚರಣೆಗೆ ಸೂಚನೆ ನೀಡಬೇಕು ಎಂದು ದಿಲೀಪ್ ಕುರಂದವಾಡೆ ಅವರು ಮನವಿ ಮಾಡಿಕೊಂಡರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಉಪ ನಿರ್ದೇಶಕಿ ವಿದ್ಯಾವತಿ ಭಜಂತ್ರಿ ಅವರು ಸಭೆಯನ್ನು ನಿರ್ವಹಿಸಿದರು.

ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಆರ್.ಬಿ.ಬಸರಗಿ, ಮಹಾನಗರ ಪಾಲಿಕೆ ಉಪ ಆಯುಕ್ತ ಉದಯಕುಮಾರ್ ತಳವಾರ, ವಿವಿಧ ಸಮಾಜದ ಮುಖಂಡರಾದ ರಾಮಚಂದ್ರ ಸುಣಗಾರ, ಅಶೋಕ ಕೋಳಿ, ಅಪ್ಪಯ್ಯ ರಾಮರಾವ್, ಗೀತಾ ಕೋಳಿ, ಅಪ್ಪಾಸಾಹೇಬ ಪೂಜಾರಿ, ಮಂಜುನಾಥ ಪಾಟೀಲ, ಆರ್. ಬಿ ಬಂಡಿವಡ್ಡರ, ಎಸ್.ಬಿ ರೆಡ್ಡಿ, ಶಂಕರ ಹಾದಿಮನಿ, ರಾಜೇಂದ್ರ ಪಾಟೀಲ, ಟಿ.ಕೆ ಪಾಟೀಲ, ಎಸ್.ಎ ಅರಕೇರಿ, ಎಚ್ ವಿ ಪಾಟೀಲ ಸೇರಿದಂತೆ ಮತ್ತಿತರು ಸಭೆಯಲ್ಲಿ ಉಪಸ್ಥಿತರಿದ್ದರು.

# ಮಹಿಳೆಯರ ರಕ್ಷಣೆಗೆ ಪೋಲೀಸ್ ಸನ್ನದ್ಧ: ಎಂ ವೇಣುಗೋಪಾಲ

ಬೆಳಗಾವಿ: ಮಹಿಳೆ ತನ್ನನ್ನು ತಾನು ಗುರುತಿಸಿಕೊಂಡು ಎಲ್ಲಾ ಕ್ಷೇತ್ರಗಳಲ್ಲೂ ತನ್ನ ಸಾಮರ್ಥ್ಯ ಬೆಳೆಸಿಕೊಳ್ಳುತ್ತಿದ್ದಾಳೆ. ಮಹಿಳೆಯಲ್ಲೂ ಶಕ್ತಿ ಸಾಮರ್ಥ್ಯಗಳಿದ್ದು ಪುರುಷನಂತೆ ಎಲ್ಲಾ ಕ್ಷೇತ್ರಗಳಲ್ಲಿ ಸಾಧನೆ ಮಾಡಬಲ್ಲಳು. ಸಮಾಜದಲ್ಲಿ ಮಹಿಳೆಯ ಪಾತ್ರ ಅಪಾರವಾದರೂ, ಆಧುನಿಕ ಸಮಾಜದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯ, ಅತ್ಯಾಚಾರ, ಅನಾಚಾರ ನಡೆಯುತ್ತಿದೆ. ಮಹಿಳೆಯರ ರಕ್ಷಣೆಗೆ ಪೋಲೀಸ್ ಇಲಾಖೆ ಸದಾ ಸನ್ನದ್ಧ ಎಂದು ಶಹಾಪುರದ ಮಾರುತಿ ದೇವಸ್ಥಾನದಲ್ಲಿ ನಡೆದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ ಖಾಸಭಾಗ, ಜ್ಞಾನವಿಕಾಸ ಕೇಂದ್ರ, ಪ್ರಗತಿಬಂಧು ಸ್ವ ಸಹಾಯ ಸಂಘಗಳ ಒಕ್ಕೂಟದ ಸಹಯೋಗದಲ್ಲಿ ನಡೆದ ಮಹಿಳಾ ವಿಚಾರ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಬೆಳಗಾವಿ ಜಿಲ್ಲಾ ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಎಂ ವೇಣುಗೋಪಾಲ ಮಾತನಾಡಿದರು.



ಮಹಿಳೆಯರ ರಕ್ಷಣೆಗೆ ಪೊಲೀಸ ಸಹಾಯವಾಣಿ 112 ಸದಾ ಸಿದ್ಧವಾಗಿದೆ.ಏನೇ ಸಮಸ್ಯೆ ಗಳಾದಲ್ಲೂ ಸಹಾಯವಾಣಿ ಸಂಪರ್ಕಿಸಿದರೆ 20 ನಿಮಿಷದಲ್ಲಿ ಸಹಾಯ ಮಾಡಲಾಗುತ್ತಿದೆ. ಜನಸ್ನೇಹಿ ಪೊಲೀಸ್ ಮೂಲಕ ಮಕ್ಕಳನ್ನು ಪೊಲೀಸ್ ಸ್ಟೇಷನ್ ಭೇಟಿ ಮಾಡಿಸಿ ಮಾಹಿತಿ ಕೊಡಿಸಲಾಗುತ್ತಿದೆ. ಶ್ರೀ ಕ್ಷೇತ್ರ ಧರ್ಮಸ್ಥಳ ಮಹಿಳಾ ಸಂಘಟನೆ ಮೂಲಕ ಆ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. ಕಾಲ ಬದಲಾಗಿಲ್ಲ, ನಾವು ಬದಲಾಗಿದ್ದೇವೆ. ಸೂರ್ಯ ಚಂದ್ರ ತಾವು ಮಾಡುವ ಕೆಲಸದಲ್ಲಿ ಬದಲಾವಣೆ ಆಗಿಲ್ಲ.ನಾವು ಮಾಡುವ ಕೆಲಸದಲ್ಲಿ ಬದಲಾವಣೆ ಮಾಡಿಕೊಂಡು ಕನಿಷ್ಠ ಐದು ಜನರಿಗಾದರೂ ಸಹಾಯ ಮಾಡುವ ಗುಣ ಬೆಳೆಸಿಕೊಳ್ಳಬೇಕೆಂದು ಕರೆ ನೀಡಿದರು.

ಯೋಜನೆಯ ಆರ್ಥಿಕ ಸಹಾಯ ಪಡೆದು ಸ್ವಾವಲಂಬಿ ಜೀವನ ನಡೆಸುತ್ತಿರುವ ಸಾಧಕ ಮಹಿಳೆಯರನ್ನು ಸನ್ಮಾನಿಸಿ ಮಾತನಾಡಿದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಪ್ರಾದೇಶಿಕ ನಿರ್ದೇಶಕರಾದ ವಸಂತ ಸಾಲಿಯಾನ ಮಾತನಾಡಿ ಮಹಿಳೆಯರನ್ನು ವೇದಗಳ ಕಾಲದಿಂದಲೂ ಪೂಜನೀಯವಾಗಿ ಕಾಣಲಾಗುತ್ತಿದೆ. ಸ್ವತಂತ್ರ ನಂತರ ಸಮಾಜದಲ್ಲಿ ಮಹಿಳೆಯರ ಸ್ಥಾನಮಾನವನ್ನು ಉತ್ತಮಪಡಿಸಲು ಮತ್ತು ಮಹಿಳೆಯರ ಮೇಲಿನ ದೌರ್ಜನ್ಯವನ್ನು ತೊಡೆದುಹಾಕಲು ಮತ್ತು ಸಶಕ್ತರನ್ನಾಗಿ ಮಾಡಲು ಯೋಜನೆ ಕಳೆದ ಒಂದು ದಶಕದಿಂದ ಬೆಳಗಾವಿ ಜಿಲ್ಲೆಯಲ್ಲಿ ಕೆಲಸ ಮಾಡುತ್ತಿದೆ. ಕುಟುಂಬದ ಅಭಿವೃದ್ಧಿಗೆ ತಾಯಂದಿರ ಪಾತ್ರ ಮಹತ್ವವಾಗಿದೆ.ಆರ್ಥಿಕ ಸಹಕಾರದೊಂದಿಗೆ ಯೋಜನೆಯು ಮಕ್ಕಳ ಶಿಕ್ಷಣಕ್ಕೆ ಶಿಷ್ಯವೇತನ, ದುಶ್ಚಟ ಮುಕ್ತ ಸಮಾಜ ನಿರ್ಮಾಣಕ್ಕೆ ಸ್ವಾಸ್ಥ ಸಂಕಲ್ಪ ಕಾರ್ಯಕ್ರಮ, ಕೌಟುಂಬಿಕ ಸಾಮರಸ್ಯ, ಕಾನೂನು ಸಲಹೆ,ಆರೋಗ್ಯದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಪ್ರತಿ ತಿಂಗಳು ಮಾಡಲಾಗುತ್ತಿದೆ ಎಂದು ಮಾತನಾಡಿದರು.

ಕಾರ್ಯಕ್ರಮದಲ್ಲಿ ನೈತಿಕ ಶಿಕ್ಷಣದಲ್ಲಿ ಪಾಲಕರ ಪಾತ್ರ ಮತ್ತು ಜವಾಬ್ದಾ–ರಿಗಳು ವಿಷಯದ ಬಗ್ಗೆ ಉಪನ್ಯಾಸವನ್ನು ಒಓಖಂ ಕಾಲೇಜ್ ಆಫ್ ಎಜುಕೇಶನ್ ನ ಸಹಾಯಕ ಪ್ರಾಧ್ಯಾಪಕರಾದ ಸೋನಾಲ ಗುರುಶಾಂತ ಚೆನ್ನಿವಾಲರವರು ವಿಚಾರಗೋಷ್ಠಿ ನಡೆಸಿದರು.ಜಿಲ್ಲಾ ನಿರ್ದೇಶಕರಾದ ಸತೀಶ ನಾಯ್ಕ ಉಪಸ್ಥಿತರಿದ್ದರು.ಮಾರುತಿ ದೇವಸ್ಥಾನದ ಅಧ್ಯಕ್ಷರಾದ ದಿಲೀಪ ಕೃಷ್ಣಾಜಿ ತಿಳವೆ ಅಧ್ಯಕ್ಷತೆ ವಹಿಸಿದ್ದರು.

ಂುೋಜನಾಧಿಕಾರಿಂುವರಾದ ಮಂಜುನಾಥ ಎನ್ ಆರ್ ಸ್ವಾಗತಿಸಿದರು. ಕೃಷಿಮೇಲ್ವಿಚಾರಕ ಮಂಜುನಾಥ ಗೌಡ ನಿರೂಪಿಸಿದರು. ಜ್ಞಾನವಿಕಾಸ ಸಮನ್ವಯಾಧಿಕಾರಿ ಮೀನಾರಾಣಿ,ಮೇಲ್ವಿಚಾರಕ ಸೋಮಲಿಂಗ,ಸೇವಾಪ್ರತಿನಿಧಿಗಳು,ಸಂಘದ ಸದಸ್ಯರು ಭಾಗವಹಿಸಿದ್ದರು.

# ಅರಣ್ಯ ಬೆಳೆಸಲು ಹನಿ ನೀರಾವರಿ ಅಳವಡಿಕೆ ರಾಜ್ಯಕ್ಕೆ ಮಾದರಿ: ನಿಡಸೋಸಿ ಶ್ರೀ

ಹುಕ್ಕೇರಿಯಲ್ಲಿ ಪ್ರಾದೇಶಿಕ ಅರಣ್ಯ ವಲಯ ಕಚೇರಿ ಕಟ್ಟಡ ಉದ್ಘಾಟನೆ

ಹುಕ್ಕೇರಿ: ಅರಣ್ಯ ಪ್ರದೇಶದಲ್ಲಿ ಸಸಿಗಳನ್ನು ನೆಟ್ಟು ಪೋಷಿಸಲು ಹುಕ್ಕೇರಿ ಪ್ರಾದೇಶಿಕ ಅರಣ್ಯ ವಲಯವು ಹನಿ ಮತ್ತು ತುಂತುರು ನೀರಾವರಿ ಅಳವಡಿಸಿರುವುದು ರಾಜ್ಯದಲ್ಲಿಯೇ ಮಾದರಿಯಾಗಿದೆ ಎಂದು ನಿಡಸೋಸಿ ಸಿದ್ಧಸಂಸ್ಥಾನ ಮಠದ ಪಂಚಮ ಶಿವಲಿಂಗೇಶ್ವರ ಸ್ವಾಮೀಜಿ ಹೇಳಿದರು.

ಪಟ್ಟಣ ಹೊರವಲಯದ ಬೆಲ್ಲದ ಬಾಗೇವಾಡಿ–ಘಟಪ್ರಭಾ ಕ್ರಾಸ್‌ನ ನೂತನ ಲೇಔಟ್‌ನಲ್ಲಿ ಶನಿವಾರ ನಡೆದ ಹುಕ್ಕೇರಿ ಪ್ರಾದೇಶಿಕ ಅರಣ್ಯ ವಲಯ ಕಚೇರಿಯ ಹೊಸ ಕಟ್ಟಡದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ಮಳೆ ಮತ್ತು ನೀರಿನ ಕೊರತೆಗೆ ಉಪಾಯ ಕಂಡುಕೊಳ್ಳುವ ನಿಟ್ಟಿನಲ್ಲಿ ಅರಣ್ಯ ಇಲಾಖೆ ಈ ರೀತಿಯ ಹೊಸ ಪ್ರಯೋಗ ನಡೆಸಿರುವುದು ಹೆಮ್ಮೆಯ ಸಂಗತಿ ಎಂದರು.



ಕೃಷಿ ಕ್ಷೇತ್ರದಲ್ಲಿ ಹನಿ, ತುಂತುರು ನೀರಾವರಿ ಅಳವಡಿಸುವುದು ಸಹಜ ಪ್ರಕ್ರಿಯೆ. ಆದರೆ, ಅರಣ್ಯ ಪ್ರದೇಶದಲ್ಲಿ ಇಂಥ ಯೋಜನೆ ಅನುಷ್ಠಾನಕ್ಕೆ ತರುವುದು ಸುಲಭದ ಕೆಲಸವಲ್ಲ. ಈ ಕಠಿಣ ಕಾರ್ಯವನ್ನು ಹುಕ್ಕೇರಿ ಪ್ರಾದೇಶಿಕ ಅರಣ್ಯ ಇಲಾಖೆ ನಡೆಸುವುದು ಮೂಲಕ ಇತರೆ ಇಲಾಖೆಗಳನ್ನು ಹುಬ್ಬೇರಿಸುವಂತೆ ಮಾಡಿದೆ. ಪರಿಸರ ರಕ್ಷಣೆ ಪ್ರತಿಯೊಬ್ಬರ ಕರ್ತವ್ಯ. ಸಸಿಗಳನ್ನು ಬೆಳೆಸುವಲ್ಲಿ ಪ್ರಾಯೋಗಿಕವಾಗಿ ಹೊಸ ಹೊಸ ಪ್ರಯೋಗಗಳನ್ನು ನಡೆಸುವಂತಾಗಬೇಕು ಎಂದು ಅವರು ಹೇಳಿದರು.

ಲೋಕೋಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಮಾತನಾಡಿ, ಈ ಸುಸಜ್ಜಿತ ಕಟ್ಟಡ ಹುಕ್ಕೇರಿ ತಾಲೂಕಿನ ಹೆಮ್ಮೆ. ರೈತರ ಸಮಸ್ಯೆ ಮತ್ತು ಅಹವಾಲುಗಳಿಗೆ ತ್ವರಿತ ಪರಿಹಾರ ಸಿಗಲಿದೆ. ಸುಗಮ ಆಡಳಿತ ನಡೆಸುವ ಮೂಲಕ ಅಧಿಕಾರಿ–ಸಿಬ್ಬಂದಿ ಅರಣ್ಯ ಪ್ರದೇಶ ಸಂರಕ್ಷಿಸಿ ಹೆಚ್ಚಿಸುವ ಕೆಲಸ ಮಾಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ ಶಾಸಕ ನಿಖಿಲ್ ಕತ್ತಿ ಮಾತನಾಡಿ, ಅತ್ಯಂತ ಸೊಗಸಾದ ಪರಿಸರದಲ್ಲಿ ಹಳ್ಳಿಯ ಮನೆ ರೀತಿಯಲ್ಲೇ ಕಚೇರಿ ನಿರ್ಮಾಣವಾಗಿದೆ. ಇದರಿಂದ ಈ ಭಾಗದ ಸಾರ್ವಜನಿಕರ ಬಹುವರ್ಷದ ಬೇಡಿಕೆ ಈಡೇರಿದಂತಾಗಿದೆ. ತಾಲೂಕಿನ ಸಮಸ್ತ ರೈತರು ಪ್ರಯೋಜನ ಪಡೆದುಕೊಳ್ಳಬೇಕು.

ಪ್ರಾದೇಶಿಕ ಅರಣ್ಯ ವಲಯ ಅಧಿಕಾರಿ ಪ್ರಸನ್ ಬೆಲ್ಲದ, ಗುತ್ತಿಗೆದಾರ ಬಸವರಾಜ ಪರವೀನಾಯ್ಕರ, ಲೋಕೋಪಯೋಗಿ ಎಇಇ ಪ್ರವೀಣ ಮಾಡ್ಯಾಳ, ಅಭಿಯಂತರರಾದ ಪ್ರಭಾಕರ ಕಾಮತ್, ಜಯಂತ ಗುಂಜಟಕರ ಪಾಟೀಲ, ಸಿಪಿಐ ಮಹಾಂತೇಶ ಬಸ್ಸಾಪುರ, ಮುಖಂಡರಾದ ಅಶೋಕ ಪಟ್ಟಣಶೆಟ್ಟಿ, ಸತ್ಯಪ್ಪಾ ನಾಯಿಕ, ಎ.ಕೆ.ಪಾಟೀಲ, ಆನಂದ ಗಂಧ, ಕಿರಣ ರಜಪೂತ, ರಿಷಭ್ ಪಾಟೀಲ, ರವೀಂದ್ರ ಜಿಂಡ್ರಾಳಿ, ಇಲಿಯಾಸ ಇನಾಮದಾರ, ವಾಗ್ದೇವಿ ತಾರಳಿ, ಗುರು ಕುಲಕರ್ಣಿ, ರಾಜು ಕುರಂದವಾಡೆ, ಮೌನೇಶ ಪೋತದಾರ, ರಾಜು ಸಿದ್ನಾಳ, ಮಹಾಂತೇಶ ತಳವಾರ, ಮಧುಕರ ಕರನಿಂಗ ಮತ್ತಿತರರು ಉಪಸ್ಥಿತರಿದ್ದರು.



## ಕಬ್ಬಿನ ಟ್ರ್ಯಕ್ಟರ್ ಗೆ ಸಿಲುಕಿ ಇಬ್ಬರು ಸ್ಥಳದಲ್ಲೇ ಸಾವು

ಗೋಕಾಕ: ಕಬ್ಬಿನ ಟ್ರ್ಯಕ್ಟರ್ ಹಾಗೂ ಬೈಕ್ ನಡುವೆ ಅಪಘಾತ ಸಂಭವಿಸಿ ಇಬ್ಬರು ಸಾವನ್ನಪ್ಪಿದ ಘಟನೆ ತಾಲೂಕಿನ ಲೋಳಸೂರ ಗ್ರಾಮದ ಹತ್ತಿರ ನಡೆದಿದೆ.

ಬೈಕ್ ಸವಾರರು ಮೂಡಲಗಿ ತಾಲೂಕಿನ ಶಿವಾಪುರ ಗ್ರಾಮದಿಂದ ಆಗಮಿಸುತ್ತಿದ್ದರು.

ಇದೇ ವೇಳೆ ಟ್ರಾಕ್ಟರ್ ಪಲ್ಟಿಯಾಗಿದ್ದು, ಬೈಕ್ ಸವಾರರಿಬ್ಬರು ಟ್ರಾಕ್ಟರ್ ಕೆಳಗೆ ಸಿಲುಕಿ ಸಾವನ್ನಪ್ಪಿದ್ದಾರೆ.

ಓರ್ವ ವ್ಯಕ್ತಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂಬ ಮಾಹಿತಿ ಲಭ್ಯವಾಗಿದೆ. ಮೃತರ ಕುರಿತು ಮಾಹಿತಿ ಲಭ್ಯವಾಗಿಲ್ಲ. ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸುತ್ತಿದ್ದಾರೆಂದು ತಿಳಿದು ಬಂದಿದೆ.

# ಸರಣಿ ಅಪಘಾತದಲ್ಲಿ ನಾಲ್ವರು ದುರ್ಮರಣ

ಹುಬ್ಬಳ್ಳಿ: ಎರಡು ಕಾರು ಮತ್ತು ಲಾರಿ ನಡುವೆ ಸರಣಿ ಅಪಘಾತ ನಡೆದ ಪರಿಣಾಮ ನಾಲ್ವರು ಸ್ಥಳದಲ್ಲಿಯೇ ಸಾವನ್ನಪ್ಪಿದ ಘಟನೆ ಧಾರವಾಡ ಜಿಲ್ಲೆ ಕುಂದಗೋಳ ತಾಲೂಕಿನ ಬೆಳ್ಳಿಗಟ್ಟಿ ಕ್ರಾಸ್ ಬಳಿ ನಡೆದಿದೆ.

ಬೆಂಗಳೂರು–ಮುಂಬೈ ರಾಷ್ಟ್ರೀಯ ಹೆದ್ದಾರಿಯಲ್ಲಿ ಘಟನೆ ನಡೆದಿದೆ. ಘಟನಾ ಸ್ಥಳಕ್ಕೆ ಕುಂದಗೋಳ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತದಲ್ಲಿ ನಾಲ್ವರು ಸ್ಥಳದಲ್ಲಿಯೇ ಮೃತಪಟ್ಟಿದ್ದು, ಇನ್ನೂ ನಾಲ್ವರಿಗೆ ಗಂಭೀರ ಗಾಯಗಳಿವೆ.ಗಾಯಾಳುಗಳನ್ನು ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ರವಾನಿಸಿದ್ದು, ಸ್ಥಳಕ್ಕೆ ಧಾರವಾಡ ಎಸ್ಪಿ ಡಾ.ಗೋಪಾಲ ಬ್ಯಾಕೋಡ್ ಭೇಟಿ ನೀಡಿದ್ದಾರೆ. ಈ ಘಟನೆಯಲ್ಲಿ ಹಾಸನ ಮೂಲದ ಮೂವರು ಹಾಗೂ ಬೆಂಗಳೂರಿನ ಒಬ್ಬರು ಸಾವನ್ನಪ್ಪಿದ್ದಾರೆ. ಮೃತರನ್ನು ಮಣಿಕಂಠ (26), ಪವನ (23), ಚಂದನ (31) ಎಂದು ಗುರುತಿಸಲಾಗಿದೆ. ಈ ಮೂವರು ಪರಸ್ಪರ ಗೆಳೆಯರಾಗಿದ್ದು, ಹಾಸನದಿಂದ ಗೋವಾಗೆ ತೆರಳುತ್ತಿದ್ದರು ಎಂದು ತಿಳಿದುಬಂದಿದೆ. ಘಟನೆಯಲ್ಲಿ ಮೃತಪಟ್ಟ ಮತ್ತೋರ್ವನನ್ನು ಹರೀಶ್ (34) ಎಂದು ಗುರುತಿಸಲಾಗಿದ್ದು, ಇವರು ಬೆಂಗಳೂರಿನಿಂದ ಶಿರಡಿಗೆ ಹೊರಟಿದ್ದ ವೇಳೆ ಅಪಘಾತ ಸಂಭವಿಸಿದೆ.

# ಪುನೀತ್ ಕೆರೆಹಳ್ಳಿ ಎಂಬ ಮತಾಂಧನಿಗೆ ಬಿಜೆಪಿಯಿಂದ ಕೋಮು ಗಲಭೆ ನಡೆಸುವ ಫತ್ವಾ ಬಂದಿದೆ: ಹರಿಪ್ರಸಾದ್

ಬೆಂಗಳೂರು: ಸರ್ವ ಜನಾಂಗದ ಶಾಂತಿಯ ತೋಟದಲ್ಲಿ ಕೋಮು ಗಲಭೆ ಸೃಷ್ಟಿಸಿ, ಧರ್ಮ ಧರ್ಮಗಳ ನಡುವೆ ಬೆಂಕಿ ಹಚ್ಚುವ ಕೆಲಸಕ್ಕೆ ಬಿಜೆಪಿ ಪಕ್ಷ ತನ್ನ ಸಹೋದರ ಸಂಘಟನೆಗಳಿಗೆ ಅಣಿಗೊಳಿಸುತ್ತಿರುವುದು ಬಹಿರಂಗವಾಗುತ್ತಿದೆ



ಎಂದು ಕಾಂಗ್ರೆಸ್ ಶಾಸಕ ಬಿ.ಕೆ ಹ–ರಿಪ್ರಸಾದ್ ಆರೋಪಿಸಿದ್ದಾರೆ.

ಈ ಸಂಬಂಧ ಟ್ವೀಟ್ ಮಾಡಿರುವ ಅವರು, ರೌಡಿ ಶೀಟರ್ ಆಗಿರುವ ಪುನೀತ್ ಕೆರೆಹಳ್ಳಿ ಎಂಬ ಮತಾಂಧನಿಗೆ ಬಿಜೆಪಿಯಿಂದ ಕೋಮು ಗಲಭೆ ನಡೆಸುವ ಫತ್ವಾ ಬಂದಿದೆ ಎಂದು ಸ್ವತಃ ತಾನೇ ಸೃಷ್ಟಿಸಿರುವ "ರಾಷ್ಟ್ರ ರಕ್ಷಣಾ ಪಡೆ" ಎಂಬ ವಾಟ್ಸಪ್ ಗ್ರೂಪಿನಲ್ಲಿ ಹೇಳಿಕೊಂಡಿದ್ದಾನೆ. ಕೋಮು ಗಲಭೆ ನಡೆಸಿ 2024ಕ್ಕೆ "ವಿಶ್ವಗುರುವನ್ನ" ಮತ್ತೆ ಪ್ರಧಾನಿಯಾಗಬೇಕೆಂದು ಈ ಭಯೋತ್ಪಾದಕರ ತಂಡ ಕೆಲಸ ಮಾಡಲಿದೆಯಂತೆ ಎಂದು ಟ್ವೀಟ್ ಮಾಡಿದ್ದಾರೆ.

# 13 ಸಾವಿರ ಶಿಕ್ಷಕರ ನೇಮಕಕ್ಕೆ ತಡೆಯಾಜ್ಞೆ ನೀಡಿದ ಸುಪ್ರೀಂಕೋರ್ಟ್

ಬೆಂಗಳೂರು: ಶಾಲಾ ಶಿಕ್ಷಣ ಇಲಾಖೆಯು ನಡೆಸುತ್ತಿರುವ 13 ಸಾವಿರ ಶಿಕ್ಷಕರ ನೇಮಕಾತಿ ಪ್ರಕ್ರಿಯೆಗೆ ಸುಪ್ರೀಂಕೋರ್ಟ್ ತಡೆಯಾಜ್ಞೆ ನೀಡಿದೆ.

ನೇಮಕಗೊಂಡವರಲ್ಲಿ ಶೇಕಡಾ 80ರಷ್ಟು ಮಂದಿ ಈಗಾಗಲೇ ನೇಮಕ ಪತ್ರ ಪಡೆದು ಕೊಂಡಿದ್ದಾರೆ. ಉಳಿದವರು ಇನ್ನೂ ಪಡೆದುಕೊಂಡಿಲ್ಲ. ಈಗ ಸುಪ್ರೀಂಕೋರ್ಟ್ ನೀಡಿರುವ ತಡೆ ಇನ್ನೂ ನೇಮಕಾತಿ ಪತ್ರ ಪಡೆದುಕೊಳ್ಳದ ಆಯ್ಕೆಯಾದ ಅಭ್ಯರ್ಥಿಗಳಿಗೆ ಅನ್ವಯವಾಗುತ್ತಿದೆ. ಆದರೆ, ಈಗಾಗಲೇ ನೇಮಕ ಪತ್ರ ಸ್ವೀಕರಿಸಿ ಕೆಲಸ ಆರಂಭಿಸಿರುವ ಶಿಕ್ಷಕರ ಕಥೆ ಏನು ಎನ್ನುವುದನ್ನು ಸುಪ್ರೀಂಕೋರ್ಟ್ ಸ್ಪಷ್ಟಪಡಿಸಬೇಕಾಗಿದೆ.

ರಾಜ್ಯದಲ್ಲಿ ಶಿಕ್ಷಕರ ನೇಮಕಾತಿ ಪ್ರಕ್ರಿಯೆ ಹಲವು ಬಾರಿ ಆತಂಕಕ್ಕೆ ಒಳಗಾಗಿ, ತಡೆಗಳನ್ನು ಎದುರಿಸಿ ಅಂತಿಮವಾಗಿ ಹೈಕೋರ್ಟ್ ಅದಕ್ಕೆ ಅವಕಾಶವನ್ನು ನೀಡಿತ್ತು. ಹೈಕೋರ್ಟ್‌ನ ವಿಭಾಗೀಯ ಪೀಠವು ನೇಮಕಾತಿ ಪ್ರಕ್ರಿಯೆ ಮುಂದುವರಿಸಲು ತನ್ನ ಗ್ರೀನ್ ಸಿಗ್ನಲ್ ನೀಡಿತ್ತು. ಅಂತೆಯೇ ನೇಮಕಾತಿ ಪತ್ರಗಳನ್ನು ನೀಡಿ ಶೇ. 80ರಷ್ಟು ಮಂದಿ ಕರ್ತವ್ಯಕ್ಕೆ ಹಾಜರಾಗಿದ್ದಾರೆ.

ಈ ನಡುವೆ, ಚಿಕ್ಕಬಳ್ಳಾಪುರದ ಜಿ.ವಿ. ನರೇಂದ್ರ ಬಾಬು ಮತ್ತು ಇತರ ಕೆಲವು ಪರೀಕ್ಷಾರ್ಥಿಗಳು ಹೈಕೋರ್ಟ್‌ನ ವಿಭಾಗೀಯ ಪೀಠದ ತೀರ್ಪನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್ ಮೊರೆ ಹೊಕ್ಕಿದ್ದರು. ಇದೀಗ ಹಿಮಾ ಕೊಹ್ಲಿ ಮತ್ತು ಅಹ್ಸಾನುದ್ದೀನಾ ಅಮಾನುಲ್ಲಾ ಅವರನ್ನು ಒಳಗೊಂಡ ಪೀಠವು ನೇಮಕಾತಿ ಪ್ರಕ್ರಿಯೆಗೆ ತಡೆಯಾಜ್ಞೆ ನೀಡಿದೆ.



ಶಾಲಾ ಶಿಕ್ಷಣ ಇಲಾಖೆಯು 15 ಸಾವಿರ ಶಿಕ್ಷಕರ ನೇಮಕಾತಿಗೆ ಪ್ರಕ್ರಿಯೆಯನ್ನು ನಡೆಸಿತ್ತು. ಅದರಲ್ಲಿ 13,352 ಮಂದಿ ಆಯ್ಕೆಯಾಗಿದ್ದರು. ಇವರಿಗೆ 2023ರ ನವೆಂಬರ್ನಿಂದಲೇ ನೇಮಕಾತಿ ಆದ–'ೇಶ ಪ್ರತಿ ನೀಡಲು ಆರಂಭವಾಗಿ–ತ್ತು. ಈಗಾಗಲೇ ಶೇ. 80ರಷ್ಟು ಮಂದಿ ನೇಮಕಾತಿ ಪತ್ರ ಸ್ವೀಕರಿಸಿದ್ದರು.

ಆದರೆ, ಸಿಂಧುತ್ವ ಪ್ರಮಾಣಪತ್ರ ಪಡೆಯಲು ವಿಳಂಬವಾಗಿರುವ ಅಭ್ಯರ್ಥಿಗಳಿಗೆ ಆದೇಶ ಪ್ರತಿ ಪಡೆಯಲು ಸಾಧ್ಯವಾಗಿರಲಿಲ್ಲ.

ಪದವೀಧರ ಪ್ರಾಥಮಿಕ ಶಾಲಾ ಶಿಕ್ಷಕರ ನೇಮಕ ಪ್ರಕರಣ ಸುಪ್ರೀಂಕೋರ್ಟ್ ಮೆಟ್ಟಿಲೇರಿರುವ ಕಾರಣ ಇಲ್ಲಿಯವರೆಗೂ ನೇಮಕಾತಿ ಪತ್ರ ತೆಗೆದುಕೊಳ್ಳದ ಶಿಕ್ಷಕರು ತಮ್ಮ ನೇಮಕಾತಿ ಆದೇಶ ಪ್ರತಿಯನ್ನು ಪಡೆಯಲು ಮತ್ತಷ್ಟು ದಿನ ಕಾಯಬೇಕಾಗಿದೆ.

ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನೆ ಮಾಡಿದ ಅಂಶಗಳೇನು?

ವಿವಾಹಿತ ಮಹಿಳೆಯರು ತಂದೆಯ ಆದಾಯ ಪ್ರಮಾಣಪತ್ರ ನೀಡಿ ನೇಮಕವಾಗಿರುವುದನ್ನು ಕರ್ನಾಟಕ ಹೈಕೋರ್ಟ್ ಸಮ್ಮತಿಸಿದೆ. ಇದನ್ನು ಪ್ರಶ್ನಿಸಿ ಕೆಲವು ಅಭ್ಯರ್ಥಿಗಳು ಸುಪ್ರೀಕೋರ್ಟ್ ಮೊರೆ ಹೊಕ್ಕಿದ್ದಾರೆ. ಇದರಿಂದ ತೀಪು ಪ್ರಕಟವಾಗುವ ತನಕ ಆದೇಶ ಪ್ರತಿ ನೀಡದಂತೆ ಶಿಕ್ಷಣ ಇಲಾಖೆಯು ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕ–ರಿಗೆ ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಡಿಡಿಪಿಐ ಗಳು ಆದೇಶ ಪ್ರತಿ ನೀಡುವುದನ್ನು ಸ್ಥಗಿತಗೊಳಿಸಿದ್ದಾರೆ.

ಸುಪ್ರೀಂ ಕೋರ್ಟ್‌ನಲ್ಲಿ ಮುಂದಿನ ವಿಚಾರಣೆ ಬಳಿಕ ನೀಡುವ ತೀರ್ಪಿನ ಆಧಾರದಲ್ಲಿ ಅಭ್ಯರ್ಥಿಗಳ ಭವಿಷ್ಯ ನಿರ್ಧಾರವಾಗಲಿದೆ.

ಈ ನಡುವೆ, ಈಗಾಗಲೇ ಕರ್ತವ್ಯಕ್ಕೆ ಸೇ–ರಿರುವ ಅಭ್ಯರ್ಥಿಗಳಿಗೆ ಸುಪ್ರೀಂಕೋರ್ಟ್ ತಡೆಯಾಜ್ಞೆಯಿಂದ ಯಾವುದೇ ತೊಂದರೆ ಇಲ್ಲ.

ಅವರು ಸೇವೆ ಮುಂದುವರಿಸಬಹುದು ಎಂದು ಶಿಕ್ಷಣ ಇಲಾಖೆ ಮೂಲಗಳು ತಿಳಿಸಿವೆ. ಒಂದು ವೇಳೆ ಸುಪ್ರೀಂಕೋರ್ಟ್ ವ್ಯತಿರಿಕ್ತ ತೀಪು ನೀಡಿದರೆ ಆಗ ಇಲಾಖೆಯೇ ಸೂಚನೆ ನೀಡಲಿದೆ.

## ಗುತ್ತಿಗೆ ಆಧಾರದ ಮೇಲೆ ಭೂಮಾಪಕರ ನೇಮಕಾತಿ: ಅರ್ಜಿ ಆಹ್ವಾನ

ಬೆಳಗಾವಿ: ಬೆಳಗಾವಿ ಮಹಾನಗರ ಪಾಲಿಕೆಯ ಮಾಲ್ಕೀಯ ಆಸ್ತಿಗಳನ್ನು ಸಂರಕ್ಷಿಸುವ ಕಾರ್ಯ ನಿರ್ವಹಿಸಲು ಪಾಲಿಕೆಯ ಆಸ್ತಿಗಳ ದಾಖಲೆಗಳನ್ನು ನಗರ ಭೂಮಾಪನಾ ಇಲಾಖೆಗಳಿಂದ ಪರಿಶೀಲಿಸಿ ಮೋಜನಿ ಕಾರ್ಯ, ಆಸ್ತಿಗಳ ಪರಿಶೀಲನೆ, ಪಾಲಿಕೆಯ ಆಸ್ತಿಗಳ ಸ್ಥಳ ಪರಿಶೀಲನೆ ಹಾಗೂ ಪಾಲಿಕೆಯ ಇನ್ನಿತರ ಶಾಖೆಗಳಲ್ಲಿಯ ಭೂಮಾಪನ ವಿಷಯಕ್ಕೆ ಸಂಬಂಧಿಸಿದಂತೆ ಕಾರ್ಯ ನಿರ್ವಹಿಸಲು ಗುತ್ತಿಗೆ ಆಧಾರದಲ್ಲಿ ಇಬ್ಬರು ನುರಿತ ಹಾಗೂ ಅನುಭವುಳ್ಳ ಭೂಮಾಪಕರ ಅವಶ್ಯಕತೆಯಿದ್ದು ಅರ್ಜಿ ಆಹ್ವಾನಿಸಲಾಗಿದೆ.

**ಷರತ್ತುಗಳು:**

ಇಚ್ಚೆಯುಳ್ಳ ಭೂಮಾಪಕರು ಕರ್ನಾಟಕ ಸರ್ಕಾರದಿಂದ (ಮಾನ್ಯ ಆಯುಕ್ತರು, ಭೂಮಾಪನ, ಕಂದಾಯ ವ್ಯವಸ್ಥೆ ಮತ್ತು ಭೂದಾಖಲೆಗಳ ಇಲಾಖೆ, ಬೆಂಗಳೂರು ಇವರಿಂದ ಇತ್ತೀಚೆಗೆ ಪಡೆದ ಖಾಸಗಿ ಭೂಮಾಪನ ಅಧಿಕೃತವಾದ ಪರವಾನಗಿ ಪತ್ರ ಹೊಂದಿರಬೇಕು.

ಕಂದಾಯ ಇಲಾಖೆಯ ಭೂಮಾಪನ ಸಂಬಧಿತ ಶಾಖೆಗಳಲ್ಲಿ ಕನಿಷ್ಠ ಮೂರು ವರ್ಷ ಸೇವೆ ಸಲ್ಲಿಸಿದ ಅನುಭವ ಹೊಂದಿದ ಅಧಿಕೃತವಾದ ಇತ್ತೀಚಿನ ಪ್ರಮಾಣ ಪತ್ರ ಹೊಂದಿರಬೇಕು. ಭೂಮಾಪಕರು/ಅಭ್ಯರ್ಥಿಯು ದಿನಾಂಕ: 31/01/2024ಕ್ಕೆ 40 ವರ್ಷ ವಯಸ್ಸು ಮೀರಿರಬಾರದು.

ಭೂ ಮಾಪನ ಇಲಾಖೆ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರಬೇಕು. ಅಧಿಕೃತ ಭೂಮಾಪನ ತರಬೇತಿ ಸಂಸ್ಥೆಯಲ್ಲಿ ತರಬೇತಿ ಹೊಂದಿದ ಪ್ರಮಾಣ ಪತ್ರ ಹೊಂದಿರಬೇಕು. ಭೂಮಾಪಕರ ವಿರುದ್ಧ ಯಾವುದೇ ಸರ್ಕಾರದ ಇಲಾಖಾ ವಿಚಾರಣೆ, ಮೊಕದ್ದಮೆ/ದಾವೆ ಇರತಕ್ಕದ್ದಲ್ಲ. ಗುತ್ತಿಗೆ ಆಧಾರದ ಮೇಲೆ ನೇಮಕವಾಗುವ ಭೂಮಾಪಕರು ಪಾಲಿಕೆಯ ನಿಗದಿಪಡಿಸುವ ಗೌರವಧನಕ್ಕೆ ಅರ್ಹರಾಗಿರುತ್ತಾರೆ.

ಗುತ್ತಿಗೆ ಆಧಾರದ ಮೇಲೆ ಭೂಮಾಪಕರ ಸೇವಾ ಅವಧಿ ಒಂದು ವರ್ಷಕ್ಕೆ ಮಾತ್ರ ಸಿಮೀತವಾಗಿರುತ್ತದೆ ಹಾಗೂ ನಿಯಮಾನುಸಾರ ಅಂತಿಮವಾಗಿ ಆಯ್ಕೆಯಾದ ಭೂಮಾಪಕರ ಗುತ್ತಿಗೆ ಸೇವೆಯನ್ನು ಮುಂದುವರೆಸುವ ಅಥವಾ ಸ್ಥಗಿತಗೊಳಿಸುವ ಅಂತಿಮ ಅಧಿಕಾರ ನೇಮಕಾತಿ ಪ್ರಾಧಿಕಾರಸ್ಥರು ಕಾಯ್ದಿರಿಸಿಕೊಂಡಿರುತ್ತಾರೆ. ಅಭ್ಯರ್ಥಿಯು/ಭೂಮಾಪಕರು ಕಡ್ಡಾಯವಾಗಿ ಕನ್ನಡ ಭಾಷೆಯನ್ನು ಓದಿ/ಬರೆಯಲು ಹಾಗೂ ಅರ್ಥೈಸಿಕೊಳ್ಳಲು ಪರಿಣಿತಿ ಹೊಂದಿರಬೇಕು. ಇಚ್ಚೆಯುಳ್ಳ ಭೂಮಾಪಕರು ಜನವರಿ 15, 2024 ರೊಳಗಾಗಿ ಪಾಲಿಕೆಯ ಕಂದಾಯ ಶಾಖೆಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ಬೆಳಗಾವಿ ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀಕ್ಷೇತ್ರ ಆಮ್ಮಣಗಿ ಮಲ್ಲಿಕಾರ್ಜುನ ಜಾತ್ರೆ: ಹೆಚ್ಚುವರಿ ಸಾರಿಗೆ ಸೌಲಭ್ಯ

ಬೆಳಗಾವಿ: ಶ್ರೀ ಕ್ಷೇತ್ರ ಅಮ್ಮಣಗಿ, ಮಲ್ಲಿಕಾರ್ಜುನ ಜಾತ್ರೆ ನಿಮಿತ್ಯ ಜಾತ್ರೆಗೆ ಹೋಗುವ ಪ್ರಯಾಣಿಕರಿಗೆ 'ಚಿಕ್ಕೋಡಿ ವಿಭಾಗದ ಚಿಕ್ಕೋಡಿ,ಸಂಕೇಶ್ವರ,ಹುಕ್ಕೇರಿ ಘಟಕಗಳಿಂದ ಜ.13 ರಿಂದ ಜ.16 2024 ರ ವರಗೆ ವಿಶೇಷ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಕಲ್ಪಿಸಲಾಗಿದೆ.

ಸಂಕೇಶ್ವರ ಬಸ್ ನಿಲ್ದಾಣದಲ್ಲಿ ಹಾಗೂ ಶ್ರೀಕ್ಷೇತ್ರ ಅಮ್ಮಣಗಿ ಜಾತ್ರಾ ಕೇಂದ್ರದಲ್ಲಿ ಪ್ರತ್ಯೇಕ ಪತ್ರಾ ನಿಯಂತ್ರಣ ಬಿಂದುಗಳಲ್ಲಿ ನುರಿತ ಸಾರಿಗೆ ನಿಯಂತ್ರಕ ಸಿಬ್ಬಂಧಿ ಹಾಗೂ ಭದ್ರತಾ ಬಂಧಿಗಳನ್ನು ನಿಯೋಜಿಸಿ ಪ್ರಯಾಣಿಕರಿಗೆ ಸುವ್ಯವಸ್ಥಿತ ವಿಶೇಷ ವ್ಯವಸ್ಥೆ ಕಲ್ಪಿಸಲಾಗಿದೆ.

ಯಾತ್ರಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ವಾಕರಸಾಸಂಸ್ಥೆಯ ಚಿಕ್ಕೋಡಿ ವಿಭಾಗ ವಿಭಾಗೀಯ ನಿಯಂತ್ರಣಾಧಿಕಾರಿ ಎಮ್.ಆರ್.ಮುಂಜಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಯುವ ಪರಿವರ್ತಕರ, ಯುವ ಸಮಾಲೋಚಕರ ತರಬೇತಿಗಾಗಿ ಅರ್ಜಿ ಆಹ್ವಾನ

ಬೆಳಗಾವಿ: ಜನ ಆರೋಗ್ಯ ಸಂಸ್ಥೆ, ಎಪಿಡೀಮಿಯಾಲಜಿ ವಿಭಾಗ, ನಿಮ್ಹಾನ್ಸ್, ಬೆಂಗಳೂರು ಇವರಿಂದ ಅನುಷ್ಠಾನಗೊಳ್ಳುತ್ತಿರುವ ಹಾಗೂ ರಾಜ್ಯ ಸರ್ಕಾರದ ಅನುದಾನಿತ ಯೋಜನೆಯಾದ "ಯುವ ಜನರ ಮಾನಸಿಕ ಆರೋಗ್ಯಕ್ಕೆ ಪೂರಕ ಯುವ ಸ್ಪಂದನ ಸೇವೆಗಳ ಸಮಗ್ರ ಅಭಿವೃದ್ಧಿ ಮತ್ತು ಅನುಷ್ಠಾನ ಯೋಜನೆ" ಯುವ ಸ್ಪಂದನ ಅಡಿಯಲ್ಲಿ ಯುವ ಪರಿವರ್ತಕರ ಹಾಗೂ ಯುವ ಸಮಾಲೋಚಕರ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತಾ ಮಾನದಂಡಗಳು :**

ಪದವಿ ಹಾಗೂ ಮೇಲ್ಪಟ್ಟ ವಿದ್ಯಾರ್ಹತೆ ಹೊಂದಿರಬೇಕು. (Psychology/Social work ಪದವಿ ತೇರ್ಗಡೆ ಹೊಂದಿದವ–ರಿಗೆ ಆದ್ಯತೆ ನೀಡಲಾಗುವುದು), ಕನಿಷ್ಠ 21 ರಿಂದ 35 ವರ್ಷದೊಳಗಿರಬೇಕು, ಸ್ಥಳೀಯ ಭಾಷೆ ಕನ್ನಡವನ್ನು ಮಾತಾಡುವುದು ಅವಶ್ಯವಿರುತ್ತದೆ, ಸಮುದಾಯದಲ್ಲಿ ಕೆಲಸ ಮಾಡಲು ಆಸಕ್ತಿ ಹಾಗೂ ಹುಮ್ಮಸ್ಸನ್ನು ಹಾಗೂ ಉತ್ತಮ ಅಂತರ್ವ್ಯಕ್ತಿಯ, ಸಂವಹನ ಕೌಶಲ್ಯದ ಜೊತೆಗೆ ಸಂವಾದ ಕೌಶಲ್ಯವನ್ನು ಹೊಂದಿರಬೇಕು. ಸಮುದಾಯದಲ್ಲಿ ಯುವಜನರಿಗೆ ತರಬೇತಿಯಂತಹ ಕಾರ್ಯಕ್ರಮಗಳನ್ನು ನಡೆಸುವುದು ಆವಶ್ಯವಿರುತ್ತದೆ. ಸದರಿ ಮಾನದಂಡಗಳನ್ನು ಹೊಂದಿರುವ ಅಭ್ಯರ್ಥಿಗಳು ವೈಯಕ್ತಿಕ ಮಾಹಿತಿಯೊಂದಿಗೆ (Bio Data) ಅರ್ಜಿಗಳನ್ನು ಜ.18 2024 ರ ಒಳಗಾಗಿ ಉಪ ನಿರ್ದೇಶಕರ ಕಛೇರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಬೆಳಗಾವಿ ಇವರಲ್ಲಿ ಸಲ್ಲಿಸಬಹುದಾಗಿದೆ.ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂರವಾಣಿ ಸಂಖ್ಯೆ 0831-2950306 ನ್ನು ಸಂಪರ್ಕಿಸಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫುಡ್ಡೆಲಿವರಿ, ಇ–ಕಾಮರ್ಸ್ ಕಾರ್ಮಿಕ–ರಿಗಾಗಿ ವಿಮಾ ಸೌಲಭ್ಯ: ಅರ್ಜಿ ಆಹ್ವಾನ

ಬೆಳಗಾವಿ: ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ವಿಮಾ ಯೋಜನೆಯಡಿ ವಿಮಾ ಸೌಲಭ್ಯ ಪಡೆಯಲು ಸ್ವಿಗ್ಗಿ, ಜೊಮಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್ಡೆಲಿವರಿ ಮಾಡುವ ಹಾಗೂ ಇ–ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಫ್ಕಾರ್ಟ್, ಬಿಗ್ಬಾಸ್ಕೆಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೋ, ಬಿಗ್ ಬಾಸ್ಕೆಟ್, ಡಾಮಿನೋಜ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತ ಕಾರ್ಮಿಕರನ್ನು ಗಿಗ್‌ಕಾರ್ಮಿಕರೆಂದು ನೋಂದಣೆ ಮಾಡಿಕೊಳ್ಳಬೇಕು ಎಂದು ತಿಳಿಸಲಾಗಿದೆ.

**ಯೋಜನೆಯ ವಿಶೇಷತೆಗಳು:**

ಕರ್ನಾಟಕ ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿಗ್ ಕಾರ್ಮಿಕರಿಗೆ ವಿಮಾ ಯೋಜನೆ ದೇಶದಲ್ಲಿಯೇ ಮೊದಲ ಬಾರಿಗೆ ಜಾರಿಗೊಳಿಸಿ ಎಲ್ಲಾ ಅರ್ಹ ಗಿಗ್ ಕಾರ್ಮಿಕರು ಸೇವಾಸಿಂಧು ಪೋರ್ಟಲ್ನಲ್ಲಿ ನೋಂದಾಯಿಸಿಕೊಳ್ಳುವುದು, ವಿಮಾ ಸೌಲಭ್ಯವು ಕರ್ತವ್ಯದಲ್ಲಿರುವಾಗ/ಇಲ್ಲದಿರುವಾಗ ಸಂಭವಿಸುವ ಅಪಘಾತಗಳಿಗೂ ಅನ್ವಯ, ಯೋಜನೆಯು ಸಂಪೂರ್ಣ ಉಚಿತ, ಯಾವುದೇ ರೀತಿಯ ಪ್ರೀಮಿಯಂ ಪಾವತಿಸುವ ಅಗತ್ಯತೆ ಇಲ್ಲ.

ನೋಂದಣಿಗೆ ಅರ್ಹ ಕಾರ್ಮಿಕರು

ಸ್ವಿಗ್ಗಿ, ಜೊಮಾಟೋಗಳಂತಹ ಸಂಸ್ಥೆಗಳಲ್ಲಿ ಫುಡ್ಡೆಲಿವರಿ ಮಾಡುವ ಹಾಗೂ ಇ–ಕಾಮರ್ಸ್ ಸಂಸ್ಥೆಗಳಾದ ಅಮೆಜಾನ್, ಫ್ಲಿಫ್ಕಾರ್ಟ್, ಬಿಗ್ಬಾಸ್ಕೆಟ್, ಪೋರ್ಟರ್, ಫಾರ್ಮಸಿ, ಬ್ಲಿಂಕಿಟ್, ಜೆಪ್ಟೋ, ಬಿಗ್ ಬಾಸ್ಕೆಟ್, ಡಾಮಿನೋಜ್ ಮುಂತಾದ ಸಂಸ್ಥೆಗಳಲ್ಲಿ ಡೆಲಿವರಿ ವೃತ್ತಿಯಲ್ಲಿ ತೊಡಗಿಕೊಂಡ ಎಲ್ಲಾ ಅಸಂಘಟಿತಗಿಗ್ ಕಾರ್ಮಿಕರು ನೋಂದಣಿಗೆ ನೋಂದಣಿಗೆ ಅರ್ಹರಾಗಿರುತ್ತಾರೆ.

ಸೌಲಭ್ಯಗಳು: ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2. ಲಕ್ಷ ಹಾಗೂ ಜೀವವಿಮೆ ರೂ 2.ಲಕ್ಷ ಸೇರಿ ಒಟ್ಟು ರೂ.4. ಲಕ್ಷಗಳು, ಅಪಘಾದಿಂದ ಶಾಶ್ವತ ದುರ್ಬಲಗ್ವಿ ಹೊಂದಿದಲ್ಲಿ ರೂ.2. ಲಕ್ಷಗಳವರೆಗೆ, ಆಸ್ಪತ್ರೆ ವೆಚ್ಚ ಮರುಪಾವತಿ ರೂ.1. ಲಕ್ಷಗಳವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ), ಜೀವವಿಮಾ ರೂ.2. ಲಕ್ಷಗಳು ಸೌಲಭ್ಯ ಕೊಡಲಾಗುವುದು.

**ಅರ್ಹತೆ:** 18 ರಿಂದ 60 ವಯೋಮಾನದವರು, ಆದಾಯ ತೆ–ರಿಗೆ ಪಾವತಿ ದಾರರಾಗಿರ ಬಾರದು, ಭವಿಷ್ಯ ನಿಧಿ ಹಾಗೂ ಇ.ಎಸ್.ಐ ಫಲಾನುಭವಿಯಾಗಿರಬಾರದು, ಕರ್ನಾಟಕದಲ್ಲಿ ಗಿಗ್‌ವೃತ್ತಿ (ಡೆಲಿವ–ರಿಕಾರ್ಯ) ನಿರ್ವಹಿಸುತ್ತಿರುವವರಿಗೆ ಮಾತ್ರ ಅರ್ಜಿ ಸಲ್ಲಿಸಬಹುದಾಗಿದೆ.

ಅಗತ್ಯ ದಾಖಲೆಗಳು:

ಆಧಾರ್ ಸಂಖ್ಯೆ, ವೃತ್ತಿ ನಿರ್ವಹಿಸುತ್ತಿರುವ ಸಂಸ್ಥೆಗಳು ವಿತರಿಸಿದ ಗುರುತಿನ ಚೀಟಿ, ಇ–ಶ್ರಮ್ ನೋಂದಣಿ ಸಂಖ್ಯೆ, ಇಲ್ಲವಾದಲ್ಲಿ ewww.eshram.gov.in ಅಲ್ಲಿ ನೋಂದಾಯಿಸಿ ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿ ಕಛೇರಿ,ಉಪ ವಿಭಾಗ–01&2, ಬೆಳಗಾವಿ, ಕಾರ್ಮಿಕ ಭವನ, ಐ.ಟಿ.ಐ. ಆವರಣ, ಮಜಗಾಂವ ರಸ್ತೆ, ಉದ್ಯಮ ಬಾಗ್, ಬೆಳಗಾವಿ–590008. ಹಿರಿಯ ಕಾರ್ಮಿಕ ನಿರೀಕ್ಷಕರ ಕಛೇರಿ, 1, 2, 3 ಮತ್ತು 4ನೇ ವೃತ್ತ, ಹುಕ್ಕೇರಿ ಕಾರ್ಮಿಕ ನಿರೀಕ್ಷಕರ ಕಛೇರಿ ನಿಪ್ಪಾಣಿ, ಚಿಕ್ಕೋಡಿ, ಅಥಣಿ, ರಾಯಬಾಗ, ಗೋಕಾಕ, ಬೈಲಹೊಂಗಲ, ಸವದತ್ತಿ ಮತ್ತು ರಾಮದುರ್ಗ ಇವರನ್ನು ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಉಪವಿಭಾಗ 1 ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕಾರದಗಾದಲ್ಲಿ 6 ನೇ ಕನ್ನಡ ಸಮ್ಮೇಳನ: ಸರ್ವಾಧ್ಯಕ್ಷರಾಗಿ ಸರಜೂ ಕಾಟ್ಕರ್ ಆಯ್ಕೆ

ಬೆಳಗಾವಿ: "ನಿಪ್ಪಾಣಿ ತಾಲೂಕಿನ ಕಾರದಗಾದ ಡಿ.ಎಸ್.ನಾಡಗೆ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯದ ಆವರಣದಲ್ಲಿ ಕನ್ನಡ ಬಳಗದಿಂದ ಜನೇವರಿ 7 ರಂದು 6 ನೇ ಕನ್ನಡ ಸಮಾವೇಶ ಆಯೋಜಿಸಲಾಗಿದೆ" ಎಂದು ಸಮಾವೇಶ ಗೌರವಾಧ್ಯಕ್ಷರಾದ ರಾಜು ಖಿಚಡೆ ಹೇಳದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ನಮ್ಮೂರಿನಲ್ಲಿ ನಡೆದ ಮೊದಲ ಕನ್ನಡ ಸಮಾವೇಶಕ್ಕೆ ಡಾ.ಪಾಟೀಲ ಪುಟ್ಟಪ್ಪ ಅವರನ್ನು ಆಯ್ಕೆ ಮಾಡಲಾಗಿತ್ತು, ಈಗಿನ 6 ನೇ ಸಮಾವೇಶಕ್ಕೆ ಹಿರಿಯ ಸಾಹಿತಿ ಸರಜೂ ಕಾಟ್ಕರ ಅವರನ್ನು ಸರ್ವಾಧ್ಯಕ್ಷರನ್ನಾಗಿ ಆಯ್ಕೆ ಮಾಡಲಾಗಿದೆ. ಕನ್ನಡ ಮತ್ತು ಮರಾಠಿ ಭಾಷಿಕರೆಲ್ಲ ಸೇರಿಕೊಂಡು ಅದ್ದೂ–ರಿಯಾಗಿ ಕನ್ನಡ ಹಬ್ಬ ಆಚರಿಸುತ್ತೇವೆ ಎಂದರು. ಕುಲರತ್ನಭೂಷಣ ಮುನಿಮಹಾರಾಜರು, ಸಂಪಾದನಾ ಸ್ವಾಮಿಜಿ, ದರಿಖಾನ ಅಜ್ಜನವರು, ಸಾದನಾಂದ ಮಹಾರಾಜರು ಸಾನಿಧ್ಯ ವಹಿಸುವರು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ ಸಮಾವೇಶಕ್ಕೆ ಚಾಲನೆ ನೀಡುವರು. ವಿಧಾನ ಪರಿಷತ್ ಸದಸ್ಯ ಪ್ರಕಾಶ ಹುಕ್ಕೇರಿ ದೀಪ ಬೆಳಗಿಸುವರು. ಅತಿಥಿಗಳಾಗಿ ಸಂಸದ ಅಣ್ಣಾಸಹೇಬ ಜೊಲ್ಲೆ, ಗಣೇಶ ಹುಕ್ಕೇರಿ, ವಿಧಾನ ಪರಿಷತ್ ಸದಸ್ಯಚನ್ನರಾಜ ಹಟ್ಟಿಹೊಳಿ, ಮುಖಂಡರಾದ ಉತ್ತಮ ಪಾಟೀಲ, ಅಣ್ಣಾಸಹೇಬ ಹವಲೆ ಆಗಮಿಸಲಿರುವರು. ಬೆಳಿಗ್ಗೆ 8 ಗಂಟೆಗೆ ಮೆರವಣಿಗೆ, 10.30 ಕ್ಕೆ ಉದ್ಘಾಟನೆ, ಮದ್ಯಾಹ್ನ 12 ಕ್ಕೆ ವಿಚಾರಗೋಷ್ಠಿ, 2 ಗಂಟೆಗೆ ಕವಿಗೋಷ್ಠಿ, ಸಂಜೆ 5 ಗಂಟೆಗೆ ಸಮಾರೋಪ ಸಮಾರಂಭ ಹಾಗೂ 6.30 ಕ್ಕೆ ಸಾಂಸ್ಕೃತಿಕ ಸಂಜೆ ನೆರವೇರಲಿದೆ. ಜನರು ಕಾರ್ಯಕ್ರಮದಲ್ಲಿ ಉತ್ಸಾಹದಿಂದ ಪಾಲ್ಗೊಳ್ಳಬೇಕು ಎಂದು ಕೋರಲಾಯಿತು. ಸಾಹಿತಿ ರಾಮಕೃಷ್ಣ ಮರಾಠೆ, ಕನ್ನಡ ಬಳಗದ ಅಧ್ಯಕ್ಷ ಸಂಜಯ ಗಾವಡೆ, ಉಪಾಧ್ಯಕ್ಷ ಬಾಳು ನವನಾಳೆ, ಮಾಣಿಕ ಚಂದಗಡೆ, ಕಿರಣ ಸದಲಗೆ ಮತ್ತಿತರು ಇದ್ದರು.

## ದಿನಪತ್ರಿಕೆ ವಿತರಿಸುವ ಕಾರ್ಮಿಕರ ವಿಮಾ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಬೆಳಗಾವಿ: ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿಯಿಂದ ಅಸಂಘಟಿತ ವಲಯದ ವ್ಯಾಪ್ತಿಯಲ್ಲಿ ಬರುವ ದಿನಪತ್ರಿಕೆ ವಿತರಿಸುವ ಕಾರ್ಮಿಕರಿಗೆ ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆಯನ್ನು ಜಾರಿಗೊಳಿಸಿದೆ.

ಕಾರ್ಮಿಕರಲ್ಲಿ ಬಹುತೇಕರು ದಿನಪತ್ರಿಕೆ ವಿತರಿಸಲು ದ್ವಿಚಕ್ರ ವಾಹನಗಳನ್ನು ಬಳಸುತ್ತಿದ್ದು, ಅಪಘಾತಕ್ಕೊಳಗಾಗುವ ಸಾಧ್ಯತೆಗಳು ಹೆಚ್ಚಾಗಿರುವುದರಿಂದ ಕಾರ್ಮಿಕರಿಗೆ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯಗಳನ್ನು ವಿತರಿಸುವ ಮೂಲಕ ಸಾಮಾಜಿ–ಕ ಭದ್ರತೆ ಒದಗಿಸುವುದು ಯೋಜನೆಯ ಉದ್ದೇಶವಾಗಿದ್ದು, ಅರ್ಹ ಎಲ್ಲಾ ದಿನಪತ್ರಿಕೆ ವಿತರಿಸುವ ಕಾರ್ಮಿಕರು www.eshram.gov.in ಪೋರ್ಟಲ್‌ನಲ್ಲಿ ಸ್ವಯಂ ಅಥವಾ ಹತ್ತಿರದ ಸೇವಾ ಕೇಂದ್ರಗಳಲ್ಲಿ ಹೆಸರು ನೋಂದಾಯಿಸಿಕೊಳ್ಳುವ ಮೂಲಕ ಯೋಜನೆಯ ಪ್ರಯೋಜನವನ್ನು ಪಡೆಯಬಹುದಾಗಿದೆ. ಅರ್ಜಿಸಲ್ಲಿಸುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, 16 ರಿಂದ 59 ವಯೋಮಾನದವರಾಗಿರಬೇಕು, ಕೇಂದ್ರ ಸರ್ಕಾರದ ಇ–ಶ್ರಮ ಪೋರ್ಟಲ್‌ನಲ್ಲಿ News Paper Boy ಎಂಬ ವರ್ಗದಡಿ ನೋಂದಣಿಯಾಗಿರಬೇಕು, ಆದಾಯ ತೆರಿಗೆ ಪಾವತಿದಾರರಾಗಿರಬಾರದು, ಇ.ಎಸ್.ಐ ಮತ್ತು ಇ.ಪಿ.ಎಫ್ ಸೌಲಭ್ಯ ಹೊಂದಿರಬಾರದು.ಹೆಸರು ನೋಂದಾಯಿಸಿಕೊಳ್ಳುವುದರಿಂದ ದಿನಪತ್ರಿಕೆ ವಿತರಣಾ ಕಾರ್ಮಿಕರು ಅಪಘಾತದಿಂದ ಮರಣ ಹೊಂದಿದಲ್ಲಿ 2 ಲಕ್ಷ ರೂ, ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ 2 ಲಕ್ಷ ರೂ ಗಳವರೆಗೆ (ಶೇಕಡಾವಾರು ದುರ್ಬಲತೆ ಆಧಾರದ ಮೇಲೆ), ಅಪಘಾತ, ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ 1 ಲಕ್ಷ ರೂ ಗಳವರೆಗೆ ವಿಮಾ ಸೌಲಭ್ಯ ಪಡೆದುಕೊಳ್ಳಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಕಾರ್ಮಿಕ ಅಧಿಕಾರಿ ಕಛೇರಿ,ಉಪ ವಿಭಾಗ–01&2, ಬೆಳಗಾವಿ, ಕಾರ್ಮಿಕ ಭವನ, ಐ.ಟಿ.ಐ. ಆವರಣ, ಮಜಗಾಂವ ರಸ್ತೆ, ಉದ್ಯಮ ಬಾಗ್, ಬೆಳಗಾವಿ–590008 ಇಲ್ಲಿಗೆ ಸಂಪರ್ಕಿಸಬಹುದಾಗಿದೆ ಎಂದು ಬೆಳಗಾವಿ ಉಪವಿಭಾಗ 1 ಕಾರ್ಮಿಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಡಿಭಾಗದಲ್ಲಿ ಕೆಎಲ್‌ಇ ಸಂಸ್ಥೆ ಕನ್ನಡವನ್ನು ಕಟ್ಟಿ ಬೆಳೆಸಿದೆ: ಡಾ.ಪ್ರಭಾಕರ ಕೋರೆ

## ಆರ್.ಎಲ್. ವಿಜ್ಞಾನ ಕಾಲೇಜಿನಲ್ಲಿ ಕನ್ನಡ ನುಡಿ ವೈಭವ ಅದ್ದೂರಿ ಸಮಾರಂಭ

ಬೆಳಗಾವಿ: ಕೆ.ಎಲ್.ಇ. ಸಂಸ್ಥೆಯು ಹಿಂದಿನಿಂದಲೂ ಕನ್ನಡ ಉಳಿಸಿ–ಬೆಳೆಸುವ ಕಾರ್ಯವನ್ನು ಮಾಡುತ್ತಾ ಬಂದಿರುತ್ತದೆ. ಕನ್ನಡ ಸಂಸ್ಕೃತಿ, ಪರಂಪರೆಯನ್ನು ಇಂದಿನ ಯುವಜನತೆಗೆ ಪರಿಚಯಿಸುವ ಕಾರ್ಯವನ್ನು ಮಾಡುತ್ತಿರುವುದು ಪ್ರಶಂಸನೀಯ ಎಂದು ಕೆ.ಎಲ್.ಇ. ಸಂಸ್ಥೆಯ ಕಾರ್ಯಾಧ್ಯಕ್ಷ ಡಾ. ಪ್ರಭಾಕರ ಕೋರೆ ಅವರು ಹೇಳಿದರು.



ರಾಜಾ ಲಖಮಗೌಡ ವಿಜ್ಞಾನ (ಸ್ವಾಯತ್ತ), ಮಹಾವಿದ್ಯಾಲಯದಲ್ಲಿ ಶನಿವಾರ ದಿನಾಂಕ 06 ಜನೇವರಿ, 2024 ರಂದು "ಕನ್ನಡ ನುಡಿ ವೈಭವ" ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಕೆಎಲ್‌ಇ ಸಂಸ್ಥೆಯು ಗಡಿಭಾಗದಲ್ಲಿ ಕನ್ನಡವನ್ನು ಕಟ್ಟುವ ಕೆಲಸವನ್ನು ಮಾಡಿದೆ. ಕರ್ನಾಟಕ ಏಕೀಕರಣ–ಕ್ಕಾಗಿ ಅಹೋರಾತ್ರಿಯಾಗಿ ಶ್ರಮಿಸಿದೆ. ಬೆಳಗಾವಿ ಕನ್ನಡದ ಭದ್ರಕೋಟೆಯಾಗಿ ಕಾರ್ಯನಿರ್ವಹಿಸಿದೆ. ಇಂದು ಬೆಳಗಾವಿ ಕನ್ನಡ ಕಂಪು ವಾತಾವರಣ ಪಸ–ರಿಸಿದ್ದರೆ ಕೆಎಲ್‌ಇ ಸಂಸ್ಥೆಯ ಕೊಡುಗೆ ಅನನ್ಯವೆನಿಸಿದೆ. ಶ್ರೇಷ್ಠ ಕವಿಗಳಾದ ಡಾ. ಡಿ.ಎಸ್. ಕರ್ಕಿ, ಡಾ. ಚಂದ್ರಶೇಖರ ಕಂಬಾರ ಅಧ್ಯಯನ ಮಾಡಿ ಕನ್ನಡ ಸಾಹಿತ್ಯದಲ್ಲಿ ಶ್ರೇಷ್ಠ ಸಾಹಿತಿಗಳನ್ನಾಗಿ ರೂಪಿಸಿದೆ. ಈ ಸಾಹಿತಿಗಳಿಂದ ಅನೇಕ ಪ್ರಕಾರಗಳ ಸಾಹಿತ್ಯ ಕೃಷಿಯನ್ನು ಮಾಡುವುದರ ಮೂಲಕ ಕನ್ನಡ ಸಾಹಿತ್ಯ ಶ್ರೀಮಂತಗೊಳಿಸಿದ್ದಾರೆ. ಕನ್ನಡ ಭಾಷೆಯನ್ನು ಪ್ರೀತಿಸಬೇಕು. ನಮ್ಮ ತಾಯಿಯ ಭಾಷೆಯನ್ನು ನಾವು ಪ್ರೀತಿಸದಿದ್ದರೆ ಮತ್ತಾರು ಪ್ರೀತಿಸಲು ಸಾಧ್ಯ. ಈ ವಿಜ್ಞಾನ ಮಹಾವಿದ್ಯಾಲಯದಲ್ಲಿ ಪ್ರತಿವರ್ಷ ಜನಪದ ಉತ್ಸವ ಕನ್ನಡ ಹಬ್ಬಗಳನ್ನು ಆಚರಿಸುವುದರ ಮೂಲಕ ಕನ್ನಡದ ಅಸ್ಮಿತೆಯ ಸಾಕ್ಷಿಯಾಗಿ ನಿಂತಿದೆ. ಇಂತಹ ಕನ್ನಡದ ಕಾರ್ಯಕ್ರಮಗಳು ಮತ್ತೆ ಮತ್ತೆ ಜರುಗಲೇಬೇಕು. ಕನ್ನಡ ವಾತಾವರಣವನ್ನು ನಿರ್ಮಿಸುವ ಕೆಲಸ ನಿಮ್ಮಂಥ ವಿದ್ಯಾರ್ಥಿಗಳಿಂದ ಅನುದಿನವು ಜರುಗಲೆಂದು ಎಂದು ಕರೆನೀಡಿದರು.

ಈ ಸಮಾರಂಭದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಕೆಎಲ್‌ಇ ನಿರ್ದೇಶಕರಾದ ಮಹಾಂತೇಶ ಎಂ. ಕವಟಗಿಮಠ ಅವರು ಮಾತನಾಡುತ್ತಾ, ಪ್ರತಿಯೊಬ್ಬ ಕನ್ನಡಿಗರಲ್ಲಿ ಕನ್ನಡ ಭಾಷೆಯ ಅವಿಭಾಜ್ಯ ಅಂಗವಾಗಬೇಕು. ಪ್ರಾದೇಶಿಕ ಭಾಷೆಯನ್ನು ಪ್ರೀತಿಸುವದರೊಂದಿಗೆ ಅನ್ಯ ಭಾಷೆಗಳ ಮೇಲೆ ಪ್ರಭುತ್ವ ಸಾಧಿಸಬೇಕು. ಗತಕಾಲದ ಕನ್ನಡದ ವೈಭವವನ್ನು ನಾವೆಲ್ಲರೂ ಇಂದು ಮುಂದುವರೆಸಿಕೊಂಡು ಇಂದಿನ ಯುವ ಜನತೆಯು ಅಳವಡಿಸಿಕೊಳ್ಳಬೇಕು. ಕರ್ನಾಟಕ ನಾಮಕರಣವಾಗಿ ಐವತ್ತು ವರ್ಷಗಳಾಯಿತು. ಕನ್ನಡ ಧ್ವನಿ ಗಡಿಭಾಗದಲ್ಲೇ ಪ್ರತಿಧ್ವನಿಸುತ್ತದೆ. ಇಂತಹ ಮಹಾವಿದ್ಯಾಲಯದಲ್ಲಿ ಕನ್ನಡಪರ ಸಾಂಸ್ಕೃತಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳುವದರ ಮೂಲಕ ಕನ್ನಡ ಭಾಷೆಯು ಬೆಳೆಸಿ–ಉಳಿಸಿಕೊಳ್ಳಲು ಕಂಕಣ ಬದ್ಧರಾಗಬೇಕೆಂದು ನುಡಿದರು.

ಈ ಕಾರ್ಯಕ್ರಮಕ್ಕೆ ಗೌರವಾನ್ವಿತ ಅತಿಥಿಗಳಾಗಿ ಆಗಮಿಸಿದ್ದ ಹಾವೇರಿ ವಿಶ್ವವಿದ್ಯಾಲಯದ ಮೌಲ್ಯಮಾಪನ ಕುಲಸಚಿವರಾದ ಡಾ.(ಶ್ರೀಮತಿ.) ವಿಜಯಲಕ್ಷ್ಮೀ ತಿರ್ಲಾಪೂರ ಅವರು ಮಾತನಾಡುತ್ತಾ ಜನಪದ ಭಾಷೆಯು ಶ್ರೀಮಂತವಾದುದು. ಕನ್ನಡ ಸಂಸ್ಕೃತಿಯು ಗ್ರಾಮೀಣರ ಉಡ–ಗೆ–ತೊಡುಗೆ, ನಡೆ–ನುಡಿಗಳಲ್ಲಿ, ಆಚಾರ–ವಿಚಾರಗಳಲ್ಲಿ ಕಂಡು ಬರುತ್ತದೆ. ಕನ್ನಡ ಸಾಹಿತ್ಯ ಪರಂಪರೆಯ ಮಹತ್ವವನ್ನು ತಿಳಿಸಿದರು. ಜಾನಪದ ಆಚರಣೆಗಳನ್ನು ಆಚರಿಸುವದರ ಮೂಲಕ ಆರೋಗ್ಯ ಸುಧಾರಣೆಯಾಗಲು ಸಾಧ್ಯವಿದೆ. ಜಾನಪದರ ಹಾಡುಗಳನ್ನು ಜೀವಂತವಾಗಿಡಲು ಇಂದಿನ ವಿದ್ಯಾರ್ಥಿಗಳು ಜನಪದ ಹಾಡುಗಳನ್ನು ಅನುಸರಿಸಿಕೊಳ್ಳಬೇಕೆಂದು ನುಡಿದರು.

ಈ ಸಮಾರಂಭದ ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಸ್ಥಾನಿಕ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷರಾದ ಲಿಂಗೌಡ ವ್ಹಿ. ದೇಸಾಯಿ ಅವರು ಮಾತನಾಡುತ್ತಾ, ವಿಜ್ಞಾನ ಮಹಾವಿದ್ಯಾಲಯದಲ್ಲಿ ಇಂತಹ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಬೇಕು. ವಿಜ್ಞಾನ ವಿದ್ಯಾರ್ಥಿಗಳು ಇಂತಹ ಉತ್ಸವ ಮತ್ತು ಹಬ್ಬಗಳಲ್ಲಿ ಭಾಗಿಯಾಗಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ನುಡಿದರು. ವೇದಿಕೆಯ ಮೇಲೆ ಮಹಿಳಾ ರಾಣಿ ಚನ್ನಮ್ಮಾ ಬ್ಯಾಂಕಿನ ಅಧ್ಯಕ್ಷೆ ಆಶಾ ಪ್ರಭಾಕರ ಕೋರೆ, ಪಪೂ ಪ್ರಾ. ವ್ಹಿ.ಸಿ. ಕಾಮಗೋಳ ಉಪಸ್ಥಿತರಿದ್ದರು

ಸಮಾರಂಭದಲ್ಲಿ ಪ್ರಾಚಾರ್ಯರಾದ ಡಾ.ಜ್ಯೋತಿ ಕವಳೇಕರ ಸರ್ವರನ್ನು ಸ್ವಾಗತಿಸಿದರು. ಮಹಾದೇವಿ ಸಿ. ಹುಣಶೀಬೀಜ ವಂದಿಸಿದರು. ಕೆ. ಎಲ್.ಇ. ಸಂಗೀತಶಾಲೆಯ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ನಾಡಗೀತೆ ಹಾಡಿದರು. ಎಸ್.ಬಿ. ಬನ್ನಿಮಟ್ಟಿ ಮತ್ತು ಶಿಲ್ಪಾ ರುದ್ರನ್ನವರ ಕಾರ್ಯಕ್ರಮ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ತದನಂತರದಲ್ಲಿ ಸಂಗೀತ, ನೃತ್ಯ, ಚಿಂತನೆ ಮೊದಲಾದ ಕನ್ನಡ ಕು–ರಿತು ಸಮಾರಂಭಗಳು ಜರುಗಿದವು. ಇದಕ್ಕಿಂತಲೂ ಪೂರ್ವದಲ್ಲಿ ನಾಡದೇವಿ ಭುವನೇಶ್ವರ ಭವ್ಯ ಮೆರವಣಿಗೆಗೆ ಡಾ ಪ್ರಭಾಕರ ಕೋರೆಯವರು ಚಾಲನೆ ನೀಡಿದರು. ಕನ್ನಡ ಹಬ್ಬದಲ್ಲಿ ಅನೇಕ ಮಳಿಗೆಗಳನ್ನು ತೆರೆಯಲಾಗಿತ್ತು.

## ಕಕ್ಕೇರಿ ವಿವಿಧೋದ್ದೇಶಗಳ ಪ್ರಾಥಮಿಕ ಸಹಕಾರ ಸಂಘದ ಚುನಾವಣೆ



ಕಕ್ಕೇರಿ: ಸ್ಥಳೀಯ ವಿವಿದೊದ್ದೇಶಗಳ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ನಿ.2023–24ನೇ ಸಾಲಿನ ಮುಂದಿನ ಐದು ವರ್ಷಗಳ ಅವಧಿಗಾಗಿ ಸಂಘದ ಅಧ್ಯಕ್ಷ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಬುಧವಾರ ಡಿ.3 ರಂದು ಚುನಾವಣೆ ಸ್ಥಳೀಯ ಸಂಘದ ಕಚೇರಿಯಲ್ಲಿ ನಡೆಯಿತು.

11 ಜನ ಚುನಾಯಿತ ಸದಸ್ಯರು ಹಾಗೂ ಒಂದು ಸ್ಥಾನ ಬಿನ್ ಸಾಲಗಾರ ಅವಿರೋಧ ಆಯ್ಕೆಯಾದರು. ಬಿಜೆಪಿ ಮುಖಂಡ ಪ್ರಕಾಶ ಅಂಬೋಜಿ, ಮಾಜಿ ಮಂಡಲ ಪಂಚಾಯತ ಪ್ರಧಾನ ಯಲ್ಲಪ್ಪ ಗುಪಿತ, ರೈತ ವಿಕಾಸ ಪ್ಯಾನಲ್ 8. ಅಭ್ಯರ್ಥಿಗಳು ಹಾಗೂ ಕಾಂಗ್ರೆಸ್ ಮುಖಂಡ ರಿಯಾಜ್ ಅಹ್ಮದ್ ಪಟೇಲ್ ಹಾಗೂ ಬಿಷ್ಠಾದೇವಿ ಮಂದಿರದ ಅಧ್ಯಕ್ಷ ಕಾರ್ತಿಕ ಅಂಬೋಜಿ ಅವರ ಪ್ರಗತಿ ಪತ ಪ್ಯಾನಲ್ 3 ಅಭ್ಯರ್ಥಿಗಳು ಜಯಗಳಿಸಿದರು.

ರೈತ ವಿಕಾಸ ಪ್ಯಾನಲ್ ವತಿಯಿಂದ ಅಧ್ಯಕ್ಷ ಸ್ಥಾನಕ್ಕೆ ಮಾಜಿ ಮಂಡಲ ಪಂಚಾಯತ್ ಪ್ರಧಾನ ಯಲ್ಲಪ್ಪ ಗುಪಿತ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಪ್ರಸನ್ನ ದೊಡ್ಡೆಬೈಲಕರ ಮಾತ್ರ ನಾಮಪತ್ರ ಸಲ್ಲಿಸಿದ್ದರಿಂದ ಅಧ್ಯಕ್ಷ ಯಲ್ಲಪ್ಪ ಗುಪಿತ, ಹಾಗೂ ಉಪಾಧ್ಯಕ್ಷ ಡಾ.ಪ್ರಸನ್ನ ದೊಡ್ಡೆಬೈಲಕರ, ಅವಿರೋಧ ಆಯ್ಕೆಯಾದರು,

ಈ ಸಂದರ್ಭದಲ್ಲಿ ರೈತ ವಿಕಾಸ ಪ್ಯಾನಲ್ ಸದಸ್ಯರಾದ ಶಿವಲಿಂಗ ಚನ್ನಾಪುರ, ಮಹಮ್ಮದ್ ಹನೀಫ್ ಚಿಕ್ಕೋಡಿ, ಶಿವಾಜಿ ತಳವಾರ, ಮನೋಹರ ಬೋಸಲೆ, ಚೆನ್ನಮ್ಮ ಗುಪಿತ, ಇತರರು ಆಯ್ಕೆಯಾದರು. ಚುನಾವಣೆ ಅಧಿಕಾರಿಯಾಗಿ ಶಂಕರ ಎಸ್ ಕರಬಸನವರ, ಸಹಾಯಕ ಚುನಾವಣೆ ಅಧಿಕಾರಿಯಾಗಿ ಸಂಘದ ಕಾರ್ಯದರ್ಶಿ ಕೃಷ್ಣ ಪರೀಟ ಕಾರ್ಯನಿರ್ವಹಿಸಿದರು.

## ಪಿಎಚ್‌ಡಿ ಪದವಿ ಪ್ರದಾನ



ಬೆಳಗಾವಿ: ಆಧಿನಾಥ ಚಂದ್ರನಾಥ ಉಪಾಧ್ಯೆ ಅವರು ಗಣಿತಶಾಸ್ತ್ರ ವಿಷಯದಲ್ಲಿ 'ನ್ಯೂಮ–ರಿಕಲ್ ಸ್ಟಡಿ ಆಫ್ ಸ್ಲೈಡರ್ ಆಂಡ್ ಸ್ಕ್ವೀಝ್ ಫಿಲ್ಮ್ ಬೇರಿಂಗ್ಸ್ ಲೂಬ್ರಿಕೇಟೆಡ್ ವಿಥ್ ನಾನ್ – ನ್ಯೂಟೋನಿಯನ್ ಫ್ಲೂಯಿಡ್ಸ್' ಎಂಬ ವಿಷಯದ ಕುರಿತು ಮಂಡಿಸಿದ ಸಂಶೋಧನಾ ಮಹಾ ಪ್ರಬಂಧಕ್ಕೆ ಗುಲಬರ್ಗಾ ವಿಶ್ವವಿದ್ಯಾಲಯ ಪಿಎಚ್‌ಡಿ ಪದವಿ ಪ್ರದಾನ ಮಾಡಿದೆ. ಮೂಲತಃ ಇವರು ವಿಜಯಪುರ ಜಿಲ್ಲೆಯ ತಾಳಿಕೋಟಿಯವರು.

ಪ್ರಸ್ತುತ ಇವರು ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಸಂಗೊಳ್ಳಿ ರಾಯಣ್ಣ ಪ್ರಥಮ ದರ್ಜೆ ಘಟಕ ಮಹಾವಿದ್ಯಾಲಯದ ಗಣಿತಶಾಸ್ತ್ರ ವಿಭಾಗದಲ್ಲಿ ಸಹಾಯಕ ಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಇವರಿಗೆ ಕಲಬುರ್ಗಿಯ ಜಿಲ್ಲೆಯ ಸೇಡಂನ ಸರಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಗಣಿತ ಶಾಸ್ತ್ರ ವಿಭಾಗದ ನಿವೃತ್ತ ಸಹ ಪ್ರಾಧ್ಯಾಪಕ ಡಾ. ಕಾಶೀನಾಥ ಬಿರಾದಾರ ಅವರು ಮಾರ್ಗದರ್ಶಕರಾಗಿದ್ದರು.

## ಸರ್ಕಾರಿ ಬಸ್‌ಗಳ ಡಿಕ್ಕಿ; ಇಬ್ಬರ ದುರ್ಮರಣ



ವಿಜಯಪುರ: ಎರಡು ಸರ್ಕಾರಿ ಬಸ್ಗಳ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಇಬ್ಬರು ಸ್ಥಳದಲ್ಲೇ ಸಾವಿಗೀಡಾದ ಘಟನೆ ಇಲ್ಲಿನ ಮದಭಾವಿ ಕ್ರಾಸ್ ಬಳಿ ನಡೆದಿದೆ. ಅಪಘಾತದಲ್ಲಿ 10 ಕ್ಕೂ ಹೆಚ್ಚು ಮಂದಿ ಗಂಭೀರವಾಗಿ ಗಾಯಗೊಂಡಿದ್ದಾರೆ.

ಸಿಂದಗಿಯಿಂದ ವಿಜಯಪುರಕ್ಕೆ ಬರುತ್ತಿದ್ದ ಬಸ್ ಹಾಗೂ ವಿಜಯಪುರದಿಂದ ಸಿಂದಗಿಗೆ ಹೋಗುತ್ತಿದ್ದ ಬಸ್ ನಡುವೆ ಡಿಕ್ಕಿ ಸಂಭವಿಸಿದೆ. ವೇಗವಾಗಿ ಬಂದ ಎರಡು ಬಸ್ಗಳು ಮುಖಾಮುಖಿ ಡಿಕ್ಕಿಯಾಗಿವೆ. ಪರಿಣಾಮ ಇಬ್ಬರು ಸ್ಥಳದಲ್ಲೇ ಸಾವಿಗೀಡಾಗಿದ್ದು, ಹಲವರು ಗಾಯಗೊಂಡಿದ್ದಾರೆ. ಗಾಯಾಳುಗಳನ್ನು ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದ್ದು ಚಿಕಿತ್ಸೆ ನೀಡಲಾಗುತ್ತಿದೆ.

ಡಿಕ್ಕಿಯ ರಭಸಕ್ಕೆ ಎರಡೂ ಬಸ್ಗಳ ಮುಂಭಾಗ ಭಾರೀ ಪ್ರಮಾಣದಲ್ಲಿ ಜಖಂ ಆಗಿದೆ. ಮುಂಭಾಗದಲ್ಲಿದ್ದವರಿಗೆ ತೀವ್ರ ಪೆಟ್ಟಾಗಿದ್ದು, ಸಾವಿನ ಸಂಖ್ಯೆ ಏರಿಕೆಯಾಗುವ ಸಾಧ್ಯತೆ ಇದೆ ಎನ್ನಲಾಗಿದೆ. ಅಪಘಾತದ ವಿಚಾರ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಎಸ್ಪಿ ಋಷಿಕೇಶ್ ಸೋನಾವಣೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ವಿಜಯಪುರ ಗ್ರಾಮೀಣ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಈ ಘಟನೆ ನಡೆದಿದೆ.

## ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಬದ್ಧ: ಸಚಿವ ಸತೀಶ್ ಜಾರಕಿಹೊಳಿ

ಯಮಕನಮರಡಿ: ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಉನ್ನತ ದರ್ಜೆಯ ಸೌಲಭ್ಯ ನೀಡುವಲ್ಲಿ ನಮ್ಮ ಸಹಾಯ, ಸಹಕಾರ ಸದಾ ಇರುತ್ತದೆ ಎಂದು ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಯಮಕನಮರಡಿ ವಿಧಾನಸಭಾ ಕ್ಷೇತ್ರದ ಠಾಣಾ ಹತ್ತರಗಿ ಗ್ರಾಮದಲ್ಲಿ ನೂತನ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ (ಐಟಿಐ) ಕಾಲೇಜಿನ ನೂತನ ಕಟ್ಟಡ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಉನ್ನತ ಮಟ್ಟದ ಜ್ಞಾನ ಮತ್ತು ಅನುಭವದೊಂದಿಗೆ ಸರ್ವಾಂಗೀಣವಾಗಿ ಅಭಿವೃದ್ಧಿ ಹೊಂದಲು ಉನ್ನತ ದರ್ಜೆಯ ಸೌಲಭ್ಯಗಳನ್ನು ಒದಗಿಸುತ್ತ ಬಂದಿರುವುದು ಹೆಮ್ಮೆಯ ವಿಷಯ.



ಅದೇ ನಿಟ್ಟಿನಲ್ಲಿ ಇಂದು 2 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಿದ ನೂತನ ಕಟ್ಟಡಗಳಲ್ಲಿ ವಿದ್ಯಾರ್ಥಿಗಳ ಹೆಚ್ಚಿನ ಜ್ಞಾನಾರ್ಜನೆಗಾಗಿ ಆಧುನಿಕ ಮಾಹಿತಿ ತಂತ್ರಜ್ಞಾನ ಹಾಗೂ ಆಧುನಿಕ ಸೌಲಭ್ಯ ಅಳವಡಿಸಿ ಕೊಳ್ಳಲು ಅನುಕೂಲ ಆಗುತ್ತದೆ ಎಂದರು.

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಾಲೇಜಿನಲ್ಲಿ ಓದಿದ ಎಲ್ಲಾ ವಿದ್ಯಾರ್ಥಿಗಳಿಗೆ ಉದ್ಯೋಗ ಸಿಕ್ಕಿದೆ. ಹೀಗಾಗಿ 40 ಸೀಮಿತವಾದ ವಿದ್ಯಾರ್ಥಿಗಳ ಸಂಖ್ಯೆಯನ್ನು ಇನ್ನಷ್ಟು ಹೆಚ್ಚಿಸಲು ಪ್ರಯತ್ನಿಸಲಾಗುದು, ಇನ್ನು ಸತೀಶ್ ಜಾರಕಿಹೊಳಿ ಫೌಂಡೇಶನ್ ನಿಂದ ಕ್ಷೇತ್ರದ ಎಲ್ಲಾ ದೇವಸ್ಥಾನ, ಸಂಘ, ಸಂಸ್ಥೆಗಳಿಗೆ, ಶಾಲೆಗಳಿಗೂ ಕುರ್ಚಿ, ಡೇಸ್ಕ್, ಸೌಂಡ್ ಬಾಕ್ಸ್ ವಿತರಿಸಲಾಗಿದ್ದು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಕಾಲೇ–ಜಿಗೂ ಬೇಕಾದ ಸೌಕರ್ಯಗಳನ್ನು ನಮ್ಮ ಫೌಂಡೇಶನ್ ವತಿಯಿಂದ ನೀಡಲಾಗುವುದು ಎಂದು ಭರವಸೆ ನೀಡಿದರು.

ನನ್ನ ರಾಜಕೀಯ ಜೀವನದಲ್ಲಿ ಯಾವುದೇ ವಿಷಯಕ್ಕೆ ಅಧಿಕಾರಿಗಳಿಗೆ ಇಷ್ಟೊಂದು ಕರೆ ಮಾಡಿಲ್ಲ.

ಆದರೆ ಹತ್ತರಗಿ ಗ್ರಾಮದ ಸರ್ಕಾರಿ ಕೈಗಾ–ರಿಕಾ ತರಬೇತಿ ಸಂಸ್ಥೆಯ ಅಭಿವೃದ್ಧಿಗಾಗಿ ಆಸಕ್ತಿ ವಹಿಸಿದ್ದರಿಂದ ಇಂದು ಈ ಸಂಸ್ಥೆ ಹೆಮ್ಮರವಾಗಿ ಬೆಳೆದಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ನಂತರ ಯಮಕನಮರಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ವಿವಿಧ ಕಾಮಗಾರಿಗಳಿಗೆ ಲೋಕೋಪಯೋಗಿ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಹತ್ತರಗಿ ಸರ್ಕಾರಿ ಕೈಗಾ–ರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು, ರವೀಂದ್ರ ಜೀಂಡ್ರಾಳೆ, ಮಹಾದೇವ ಪಟೋಳಿ, ಈರಣ್ಣಾ ಬಿಸಿರೊಟ್ಟಿ ಸೇ–ರಿದಂತೆ ಹತ್ತರಗಿ, ಯಮಕನಮರಡಿ ಗ್ರಾಪಂ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಉಪಸ್ಥಿತರಿದ್ದರು.

## ಸಂಸ್ಥೆ ಬೆಳೆಯಲು ಪಾರದರ್ಶಕತೆ ಮತ್ತು ಸಮಾಜದ ನಂಬಿಕೆ ಅತೀ ಮುಖ್ಯ: ಎಂ,.ಬಿ.ಝಿರಲಿ

ಬೆಳಗಾವಿ: ಒಂದು ಉತ್ತಮ ಗುಣಮಟ್ಟದ ಶಿಕ್ಷಣ ಸಂಸ್ಥೆಯು ಬೆಳೆಯಬೇಕೆಂದರೆ ಆ ಸಂಸ್ಥೆಯ ಆಡಳಿತ ಪಾರದರ್ಶಕತೆ ಹೊಂದಿರಬೇಕು ಹಾಗೂ ಸಮಾಜದ ನಂಬಿಕೆಯಿಂದ ಕೂಡಿರಬೇಕು. ಆಗ ಮಾತ್ರ ಒಂದು ಒಳ್ಳೆಯ ಶಿಕ್ಷಣ ಸಂಸ್ಥೆ ಬೆಳೆಯಬಹುದು ಎಂದು ಹಿರಿಯ ನ್ಯಾಯವಾದಿ ಹಾಗೂ ಅಕಾಡೆಮಿ ಆಫ್ ಕಂಪ್ಯಾರೇಟಿವ್ ಫಿಲಾಸಫಿ ಅಂಡ್ ರಿಲಿಜನ್ (ಎಸಿಪಿಆರ್) ಕಾರ್ಯದರ್ಶಿ ಎಂ.ಬಿ,.ಝಿರಲಿ ಅವರು ಅಭಿಪ್ರಾಯಪಟ್ಟರು.




ಶುಕ್ರವಾರ ಸಾಯಂಕಾಲ ಭರತೇಶ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಸಂಸ್ಥೆಯ ಸಂಸ್ಥಾಪಕರಾದ ದಿ.ಕೊಮಲಣ್ಣಾ ದೊಡ್ಡಣ್ಣವರ ಅವರ ಜನ್ಮದಿನದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ 15 ನೇ ಸಂಸ್ಥಾಪಕರ ದಿನಾಚರಣೆಯ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಆಗಮಿಸಿ ಮಾತನಾಡಿದ ಅವರು ಒಳ್ಳೆಯ ಗುಣಗಳನ್ನು ಹೊಂದಿದ ಸಂಸ್ಥೆಯ, ಉತ್ತಮ ಆಡಳಿತಗಾರರು, ಹಾಗೂ ಪಾರದರ್ಶಕತೆಯ ಮೂಲಕ ಎಲ್ಲರ ವಿಶ್ವಾಸಕ್ಕೆ ಪಾತ್ರರಾಗಿ ಶಿಕ್ಷಣ ಸಂಸ್ಥೆಗಳನ್ನು ನಡೆಸಬೇಕಾಗುತ್ತದೆ. ಈ ನಿಟ್ಟಿನಲ್ಲಿ ಭರತೇಶ ಶಿಕ್ಷಣ ಸಂಸ್ಥೆಯು ಕಳೆದ 60 ವರ್ಷಗಳಿಂದ ನಿರಂತರ ಜ್ಞಾನಾರ್ಜನೆ ಕಾರ್ಯ ಮಾಡುತ್ತ ಬಂದಿದ್ದು, ಇಂದು ಉತ್ತರ ಕರ್ನಾಟಕದಲ್ಲಿ ಅತ್ಯಂತ ವಿಶ್ವಾಸಾರ್ಹ ಶಿಕ್ಷಣ ಸಂಸ್ಥೆಯಾಗಿ ಹೊರಹೊಮ್ಮಿದೆ ಎಂದು ಅವರು ತಿಳಿಸಿದರು.

ಸಮಾರಂಭದ ಸಾನಿಧ್ಯ ವಹಿಸಿದ್ದ ನಿಡಸೋಶಿ ಮಠದ ಡಾ.ನಿಜಲಿಂಗೇಶ್ವರ ಸ್ವಾಮೀಜಿಗಳು ಆರ್ಶಿವಚನ ನೀಡುತ್ತ, ತಾವು ಮಂಗಳೂರಿನಲ್ಲಿದ್ದಾಗ ಸ್ವಚ್ಛ ಭಾರತ ಅಭಿಯಾನವನ್ನು ಕೈಗೊಂಡ ಹಿನ್ನಲೆಯಲ್ಲಿ ಇಂದಿಗೂ ಸಹ ಮಂಗಳೂರು ನಗರ ಸ್ವಚ್ಛವಾಗಿದೆ. ಎಲ್ಲರೂ ಸಹ ಸ್ವಚ್ಛತೆ ಕಡೆ ಹೆಚ್ಚಿನ ನೀಡುವುದರಿಂದ ಆರೋಗ್ಯವಂತ ಸಮಾಜವನ್ನು ನಿರ್ಮಿಸಬಹುದು ಎಂದು ಹೇಳಿದ ಅವರು ನಿಡಸೋಶಿಯಲ್ಲಿ ಕೈಗೊಂಡ ವಿವಿಧ ಉಪಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಸಮಾರಂಭದಲ್ಲಿ ಪ್ರತಿ ವರ್ಷದಂತೆ, ಅತ್ಯುತ್ತಮ ಶಿಕ್ಷಕ, ಶಿಕ್ಷಕೇತರ, ಸಹಾಯಕ ಸಿಬ್ಬಂದಿ, ಡಾಕ್ಟರೇಟ್, ನಿವೃತ್ತ ಸಿಬ್ಬಂದಿ, 25 ವರ್ಷಗಳ ಸೇವೆ, ಹಳೆಯ ವಿದ್ಯಾರ್ಥಿಗಳು, ಭರತೇಶ್ ಗೌರವ್ ಮತ್ತು ಜೀವಮಾನ ಸಾಧನೆ ಸೇ–ರಿದಂತೆ ವಿವಿಧ ವಿಭಾಗಗಳಲ್ಲಿ ವಿಶಿಷ್ಟ ಸೇವೆಗಾಗಿ ಭರತೇಶ್ ಸಂಸ್ಥೆಯ ವಿವಿಧ ಸಿಬ್ಬಂದಿಗೆ ನಗದು ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಡಾ.ಜಿನದತ್ತ ದೇಸಾಯಿ ಅವರು ವಹಿಸಿ ಅಧ್ಯಕ್ಷೀಯ ಭಾಷಣ ಮಾಡಿದರು. ಸಂಸ್ಥೆಯ ಉಪಾಧ್ಯಕ್ಷ ಶ್ರೀಪಾಲ ಖೆಮಲಾಪೂರೆ ಸಂಸ್ಥೆಯ ಮುಂದಿನ ಯೋಜನೆಗಳ ಬಗ್ಗೆ ಮಾಹಿತಿ ನೀಡಿದರು. ಡಾ.ಸಾವಿತ್ರಿ ದೊಡ್ಡಣ್ಣವರ ಅತಿಥಿಗಳನ್ನು ಸ್ವಾಗತಿಸಿದರು. ಭರತೇಶ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವಿನೋದ ದೊಡ್ಡಣ್ಣವರ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಹೀರಾಚಂದ ಕಲಮನಿ ಮತ್ತು ಅನುಪಮಾ ಶಿರಹಟ್ಟಿ ಅತಿಥಿಗಳನ್ನು ಪರಿಚಯಿಸಿದರು. ಅಶೋಕ ದಾನವಾಡೆ ವಂದಿಸಿದರು. ಸಾಮಾನ್ಯ ಸಭೆಯ ಸದಸ್ಯರು, ಆಡಳಿತ ಸದಸ್ಯರು, ಹಿತೈಷಿಗಳು, ಆಹ್ವಾನಿತರು, ಅತಿಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ಥಿತರಿದ್ದರು.



BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089